₹ 4 | ಪುಟ: 4 | ಸಂಪುಟ: 4 | ಸಂಚಿಕೆ 81 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ

Volume : 4 | Issue: 81 | Friday, 12, MAY, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆ ನೋಂದಣಿಗೆ ಮೇ.15 ರವರೆಗೆ ಅವಕಾಶ




ಬೆಂಗಳೂರು: ರಾಜ್ಯದ ಈ ಸಾಲಿನ ಎಸ್‌ಎಸ್‌ಎಲ್ ಸಿ ವಿದ್ಯಾರ್ಥಿಗಳ ಪರೀಕ್ಷೆ ಫಲಿತಾಂಶ ಸೋಮವಾರ ಪ್ರಕಟವಾಗಿದ್ದು, ಶೇ. 83.8 ಮಂದಿ ಉತ್ತೀರ್ಣರಾಗಿದ್ದಾರೆ. ಈ ಬಾರಿಯೂ ಹುಡುಗಿಯರೇ ಮೇಲುಗೈ ಸಾಧಿಸಿದ್ದಾರೆ. ರಾಜ್ಯದಲ್ಲಿ ಚಿತ್ರದುರ್ಗ ಜಿಲ್ಲೆಯು (ಶೇ.96.8) ಎಸ್‌ಎಸ್‌ಎಲ್ ಸಿ ಫಲಿತಾಂಶದಲ್ಲಿ ಪ್ರಥಮ ಸ್ಥಾನ ಪಡೆದಿದೆ.

ಮಂಡ್ಯ ಜಿಲ್ಲೆ ಎರಡನೇ ಸ್ಥಾನ (96.74) ಪಡೆದು ಕೊಂಡಿದ್ದು, ಮೂರನೇ ಸ್ಥಾನ ಹಾಸನ ಜಿಲ್ಲೆ (96.68) ಪಡೆದಿದೆ. ಈ ಬಾರಿ 8,35,102 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಅವರಲ್ಲಿ 7,00,619 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. 59,246 ವಿದ್ಯಾರ್ಥಿಗಳು ಗ್ರೇಸ್ ಮಾರ್ಕ್ ಪಡೆದು ಉತ್ತೀರ್ಣರಾಗಿದ್ದಾರೆ.

ನಾಲ್ಕು ಮಂದಿ ವಿದ್ಯಾರ್ಥಿಗಳು 625ಕ್ಕೆ 625 ಅಂಕ ಪಡೆದು ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾರೆ. ಭೂಮಿಕಾ ಪೈ, ನ್ಯೂ ಮೆಕಾಲೆ ಸ್ಕೂಲ್, ಹೊಸೂರು ರಸ್ತೆ, ಬೆಂಗಳೂರು. ಯಶಸ್ ಗೌಡ, ಬಾಲಗಂಗಾಧರನಾಥ ಸ್ವಾಮೀಜಿ ಶಾಲೆ, ಚಿಕ್ಕಬಳ್ಳಾಪುರ. ಅನುಪಮ ಶೈಲೇಶ್, ಕುಮಾರೇಶ್ವರ ಹೈ ಸ್ಕೂಲ್, ಸವದತ್ತಿ. ಭೀಮನಗೌಡ ಹನುಮಂತಗೌಡ ಬಿರಾದಾರ ಪಾಟೀಲ, ಆಕ್ಸ್‌ಫರ್ಡ್ ಸ್ಕೂಲ್, ಮುದ್ದೇಬಿಹಾಳ ವಿಜಯಪುರ ರ್‍ಯಾಂಕ್ ಪಡೆದವರು.

ಎಸ್‌ಎಸ್‌ಎಲ್ ಸಿ ವಿದ್ಯಾರ್ಥಿಗಳು ಉತ್ತರ ಪತ್ರಿಕೆ ಫೋಟೋಕಾಪಿ ಪಡೆಯಲು ಮೇ. 08 ರಿಂದ ಮೇ.14ರವರೆಗೆ ಅವಕಾಶವಿದೆ. ಮರು ಮೌಲ್ಯ ಮಾಪನ ಮಾಡಲು ಮೇ.15 ರಿಂದ ಮೇ.21 ರವರೆಗೆ ಅವಕಾಶವಿದೆ. ಪೂರಕ ಪರೀಕ್ಷೆ ನೋಂದಣಿಗೆ ಮೇ.08 ರಿಂದ ಮೇ. 15 ರವರೆಗೆ ಅವಕಾಶ ನೀಡಲಾಗಿದೆ.

## ನಾವು ಸ್ಪಷ್ಟ ಬಹುಮತ ಪಡೆಯುತ್ತೇವೆ: ಬೊಮ್ಮಾಯಿ ವಿಶ್ವಾಸ



ಹುಬ್ಬಳ್ಳಿ: 'ಕಳೆದ ಬಾರಿಯೂ ಮತದಾನೋತ್ತರ ಸಮೀಕ್ಷೆಗಳು ಕಾಂಗ್ರೆಸ್ 107 ಕ್ಕೂ ಹೆಚ್ಚು ಸ್ಥಾನಗಳು ಬರುತ್ತವೆ ಎಂದು ಹೇಳಿದ್ದವು.

ಆದರೆ ಫಲಿತಾಂಶದ ದಿನ ಅದು ಉಲ್ಟಾ ಆಯಿತು' ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಗುರುವಾರ ಇಲ್ಲಿನ ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಅವರು, 'ಪ್ರಧಾನಿ ನರೇಂದ್ರ ಮೋದಿ ಅವರು ರಾಜ್ಯಕ್ಕೆ ಬಂದು ಪ್ರಚಾರ ಮಾಡಿದ್ದು ನಮಗೆ ಪ್ಲಸ್ ಆಗಿದೆ.

ನಾವು ಸಂಪೂರ್ಣ ಬಹುಮತದೊಂದಿಗೆ ಮತ್ತೆ ಅಧಿಕಾರಕ್ಕೆ ಬರುತ್ತೇವೆ ಎಂಬ ವಿಶ್ವಾಸ ಇದೆ' ಎಂದರು.

'ನಾನು 150 ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ಎಲ್ಲಿಯೂ ಹೇಳಿಲ್ಲ. ಬಹುಮತ ಬರುತ್ತದೆ ಎಂದು ಹೇಳಿದ್ದೇನೆ.

ಈಗಲೂ ಆ ಹೇಳಿಕೆಗೆ ಬದ್ಧವಾಗಿದ್ದೇನೆ. ಅತಂತ್ರ ಫಲಿತಾಂಶ ಬರುವ ಪ್ರಶ್ನೆಯೇ ಉದ್ಭವಿಸುವುದಿಲ್ಲ' ಎಂದು ಹೇಳಿದರು.

'ಯುವಕರು ಮತ್ತು ಮಹಿಳೆಯರು ದೊಡ್ಡ ಪ್ರಮಾಣದಲ್ಲಿ ನಮ್ಮ ಪರವಾಗಿ ಮತದಾನ ಮಾಡಿದ್ದಾರೆ. ಇದು ನಮ್ಮ ಕೈಹಿಡಿಯಲಿದೆ' ಎಂದರು.

'ಶಿಗ್ಗಾವಿ ಜನ ತೋರಿದ ಪ್ರೀತಿಗೆ ನಾನು ಚಿರ ಋಣಿಯಾಗಿದ್ದೇನೆ. ನನ್ನ ವಿರುದ್ಧ ಅನೇಕರು ಷಡ್ಯಂತ್ರ, ಅಪಪ್ರಚಾರ ಮಾಡಿದರು. ಅದು ನಿನ್ನೆಯೇ ಮುಗಿದಿವೆ. ನಾನು ದೊಡ್ಡ ಬಹುಮತದಿಂದ ಗೆಲ್ಲುತ್ತೇನೆ' ಎಂದು ತಿಳಿಸಿದರು.

**ಯಲ್ಲಮ್ಮ ದೇವಿಗೆ ಪೂಜೆ ಸಲ್ಲಿಸಿದ ಬೊಮ್ಮಾಯಿ**

ಸವದತ್ತಿ ತಾಲ್ಲೂಕಿನ ಯಲ್ಲಮ್ಮನಗುಡ್ಡಕ್ಕೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಗುರುವಾರ ಭೇಟಿ ನೀಡಿ, ಯಲ್ಲಮ್ಮ ದೇವಿ ದರ್ಶನ ಪಡೆದರು.

ಪತ್ನಿ ಚನ್ನಮ್ಮ ಅವರೊಂದಿಗೆ ದೇವಸ್ಥಾನಕ್ಕೆ ತೆರಳಿ, ಯಲ್ಲಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು. ಮತದಾನ ಪ್ರಕ್ರಿಯೆ ಮುಗಿದ ಮಾರನೇ ದಿನವೇ, ಇಷ್ಟಾರ್ಥ ಸಿದ್ಧಿಗೆ ಪ್ರಾರ್ಥಿಸಿದರು. ಸಚಿವ ಸಿ.ಸಿ.ಪಾಟೀಲ ಇತರರಿದ್ದರು.

## ಸಿದ್ದರಾಮಯ್ಯ ಭೇಟಿಯಾಗಿ ಮಹತ್ವದ ಚರ್ಚೆ ನಡೆಸಿದ ಸುರ್ಜೇವಾಲ



ಬೆಂಗಳೂರು: ಮತದಾನೋತ್ತರ ಸಮೀಕ್ಷೆ ಪ್ರಕಟವಾದ ಬೆನ್ನಲ್ಲೇ ರಾಜಕೀಯ ಚಟುವಟಿಕೆಗಳು ಗರಿಗೆದರಿದ್ದು, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ, ವಿಪಕ್ಷ ನಾಯಕ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿದ್ದಾರೆ.

ಬೆಂಗಳೂರಿನ ಸರ್ಕಾರಿ ನಿವಾಸದಲ್ಲಿ ಸಿದ್ದರಾಮಯ್ಯ ಅವರನ್ನು ಭೇಟಿಯಾದ ಸುರ್ಜೇವಾಲ, ಸುಮಾರು ಎರಡು ಗಂಟೆಗಳ ಕಾಲ ಮಹತ್ವದ ಚರ್ಚೆ ನಡೆಸಿದ್ದಾರೆ. ಮತದಾನೋತ್ತರ ಸಮೀಕ್ಷೆಯಲ್ಲಿ ಕಾಂಗ್ರೆಸ್ ಗೆ ಬಲ ಎಂಬ ವರದಿ ಹಿನ್ನೆಲೆಯಲ್ಲಿ ಈ ಭೇಟಿ ಮಹತ್ವ ಪಡೆದಿದೆ. ಅಲ್ಲದೇ ಒಂದು ವೇಳೆ ಅತಂತ್ರ ಫಲಿತಾಂಶ ಬಂದರೆ ಮುಂದಿನ ರಾಜಕೀಯ ರಣತಂತ್ರದ ಬಗ್ಗೆಯೂ ಚರ್ಚೆ ನಡೆಸಲಾಗಿದೆ ಎದು ತಿಳಿದಿಬಂದಿದೆ.

ಸಿದ್ದರಾಮಯ್ಯ ಭೇಟಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ರಣದೀಪ್ ಸುರ್ಜೇವಾಲಾ, ಕರ್ನಾಟಕದ ಜನತೆಗೆ ಧನ್ಯವದಗಳು. ಬದಲಾವಣೆಗಾಗಿ ಮತಚಲಾಯಿಸಿದ್ದಕ್ಕೆ ಧನ್ಯವಾದ. ಮೇ 13 ರಂದು ಕಾಂಗ್ರೆಸ್ ಸರ್ಕಾರ ರಚನೆ ಆಗುತ್ತದೆ. ಕರ್ನಾಟಕವನ್ನು ಮತ್ತೆ ರಿ ಬ್ರ್ಯಂಡ್ ಮಾಡಲಿದ್ದೇವೆ ಎಂದು ಹೇಳಿದರು.

## ಸೋಲುವ ಭೀತಿಯಿಂದ ಬಿಜೆಪಿ ಹಣ ಹಂಚಿದೆ: ಶೆಟ್ಟರ್



ಹುಬ್ಬಳ್ಳಿ: ಬಿಜೆಪಿ ಮುಖಂಡರು ಸೋಲುವ ಭಯದಿಂದ ಹು–ಧಾ ಸೆಂಟ್ರಲ್ ಕ್ಷೇತ್ರದ ಕೊಳೆಗೇರಿಗಳಲ್ಲಿ ರೂ 500 ರೂ 1,000 ಹಣ ಹಂಚಿದ್ದಾರೆ. ನಾನು ಬಿಜೆಪಿಯಲ್ಲಿದ್ದಾಗ ಎಂದಿಗೂ ಈ ರೀತಿ ಮಾಡಿಲ್ಲ ಎಂದು ಸೆಂಟ್ರಲ್ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಜಗದೀಶ ಶೆಟ್ಟರ್ ಆರೋಪಿಸಿದರು.

ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಜನರ ಮೇಲಿನ ನಂಬಿಕೆ ಇಟ್ಟು, ನಾನು ಮಾಡಿದ ಕೆಲಸಗಳ ಆಧಾರದ ಮೇಲೆ ಮತ ಕೇಳಿದ್ದೇನೆ. ಯಾವುದೇ ಆಮಿಷ ಒಡ್ಡಿಲ್ಲ. ನಾನು ಯಾವ ಚುನಾವಣೆಗಳಲ್ಲಿಯೂ ಮತದಾರರಿಗೆ ಹಣ ಹಂಚುವ ಕೆಲಸ ಮಾಡಿಲ್ಲ. ಅತ್ಯಂತ ಕಡಿಮೆ ಹಣ ಖರ್ಚು ಮಾಡಿ ಚುನಾವಣೆ ಎದುರಿಸಿದ್ದೇನೆ' ಎಂದರು.

ಮತದಾನೋತ್ತರ ಸಮೀಕ್ಷೆಯಲ್ಲಿ ಸೆಂಟ್ರಲ್ ಕ್ಷೇತ್ರದಲ್ಲಿ ನಾನು ಜಯ ಸಾಧಿಸುತ್ತೇನೆ ಎಂಬ ಮಾಹಿತಿ ಸಿಕ್ಕಿದೆ. ಅಲ್ಲದೆ, ರಾಜ್ಯದಲ್ಲಿಯೂ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ. ಮುಂದಿನ ಲೋಕಸಭಾ ಚುನಾವಣೆ ಮತ್ತು ದೇಶದ ಇತರ ರಾಜ್ಯಗಳ ಮೇಲೆಯೂ ಇದರ ಪರಿಣಾಮ ಉಂಟಾಗಲಿದೆ' ಎಂದು ಹೇಳಿದರು.

ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್‌ನ ಸಂಘಟಿತ ಪ್ರಯತ್ನ, ಬಿಜೆಪಿ ಸರ್ಕಾರದ ವೈಫಲ್ಯಗಳನ್ನು ಜನರಿಗೆ ತಿಳಿಸಿದ್ದರಿಂದ ಇಂದು ಕಾಂಗ್ರೆಸ್‌ಗೆ ಬಹುಮತ ಬರುವ ಹಂತಕ್ಕೆ ಬಂದಿದೆ. ಅದರ ಜತೆಗೆ ಬಿಜೆಪಿಯವರು ಲಿಂಗಾಯತರಿಗೆ ಅನ್ಯಾಯ ಮಾಡಿದ್ದಾರೆ ಎಂಬ ಅಂಶವೂ ಪರಿಣಾಮ ಬೀರಿದೆ' ಎಂದರು.

ಕಾಂಗ್ರೆಸ್ ವೋಟ್ ಬ್ಯಾಂಕ್ ಇರುವ ವಾರ್ಡ್‌ಗಳಲ್ಲಿ ಶೇ 70ಕ್ಕಿಂತ ಹೆಚ್ಚು ಮತದಾನವಾಗಿದೆ. ಹೊಸ ಮತದಾರರು ಹೆಚ್ಚಿನ ಪ್ರಮಾಣದಲ್ಲಿ ನಮ್ಮ ಪರವಾಗಿ ಮತದಾನ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಸೆಂಟ್ರಲ್ ಕ್ಷೇತ್ರದಲ್ಲಿ ಈ ಹಿಂದಿನ ಚುನಾವಣೆಗಿಂತ ಹೆಚ್ಚು ಅಂತರದಲ್ಲಿ ಗೆಲುವು ಸಾಧಿಸುತ್ತೇನೆ' ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮುಸ್ಲಿಮರ ಮೀಸಲಾತಿ ತೆಗೆದು ಲಿಂಗಾಯತರು, ಒಕ್ಕಲಿಗರಿಗೆ ನೀಡಿರುವುದು, ಎಸ್‌ಸಿ, ಎಸ್‌ಟಿ ಮೀಸಲಾತಿ ಹೆಚ್ಚಳ ಜಾರಿಯಾಗಲಿಲ್ಲ. ಕೇವಲ ಚುನಾವಣೆ ದೃಷ್ಟಿಯಿಂದ ಹೇಳಿಕೆ ನೀಡಿ, ಜನರಿಗೆ ಮೋಸ ಮಾಡಿದ್ದಾರೆ. ಇದು ಜನರಿಗೆ ಅರ್ಥ ಆಗಿದೆ' ಎಂದು ಹೇಳಿದರು.

ಹು–ಧಾದಲ್ಲಿ ಎಫ್‌ಎಂಸಿಜಿ ಕ್ಲಸ್ಟರ್‌ಗೆ ಆರು ತಿಂಗಳ ಹಿಂದೆ ಮುಖ್ಯಮಂತ್ರಿ ಚಾಲನೆ ನೀಡಿದರು. ಈವರೆಗೂ ಭೂಮಿ ನೀಡಿಲ್ಲ. ಹೀಗಾದರೆ ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿ ಯಾವಾಗ ಆಗುತ್ತದೆ' ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ವಿರುದ್ಧ ಹರಿಹಾಯ್ದರು.

ಮಹದಾಯಿ ವಿಷಯದಲ್ಲಿ ಗೋವಾಗೆ ಹೆದರಿ ಕುಳಿತುಕೊಳ್ಳುವುದು ಬೇಡ. ಸ್ಪಷ್ಟ ನಿರ್ಧಾರ ತೆಗೆದುಕೊಂಡು ಟೆಂಡರ್ ಕರೆಯಿರಿ ಎಂದು ಪಕ್ಷದ ಕೋರ್ ಕಮಿಟಿ ಸಭೆಯಲ್ಲಿ ಹೇಳಿದ್ದೆ. ಈವರೆಗೂ ಏಕೆ ಟೆಂಡರ್ ಕರೆದಿಲ್ಲ ಎಂದು ಪ್ರಶ್ನಿಸಿದರು.

ನನ್ನ ಹಿರಿತನವನ್ನು ನೋಡಿ ಸಚಿವ ಸ್ಥಾನ ನೀಡಿದ್ದರು. ಕಾಡಿ ಬೇಡಿ, ಸಚಿವ ಸ್ಥಾನ ಪಡೆದಿರಲಿಲ್ಲ. ನನಗೆ ಪ್ರಲ್ಹಾದ ಜೋಶಿ ಅವರೇ ಸಚಿವ ಸ್ಥಾನ ಕೊಡಿಸಿದ್ದರೆ ಅಂದೇ ಹೇಳಬೇಕಿತ್ತು. ಜೋಶಿ ಅವರು ಸುಳ್ಳು ಹೇಳುವುದರಲ್ಲಿ ಎಕ್ಸ್‌ಪರ್ಟ್ ಆಗಿದ್ದಾರೆ' ಎಂದು ತಿರುಗೇಟು ನೀಡಿದರು.

ನಾನು ಬಿ.ಎಲ್.ಸಂತೋಷ್ ಅವರ ಬಗ್ಗೆ ಮಾತನಾಡಿದ್ದೇನೆ. ಬ್ರಾಹ್ಮಣ ಸಮುದಾಯವನ್ನು ಎಲ್ಲಿಯೂ ಟೀಕೆ ಮಾಡಿಲ್ಲ. ಕ್ಷೇತ್ರದಲ್ಲಿ ಬ್ರಾಹ್ಮಣ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ನನಗೆ ಮತ ಹಾಕಿದ್ದಾರೆ. ಇದು ಒಳ ಹೊಡೆತ' ಎಂದರು.

ನನಗಾದ ಅನ್ಯಾಯವನ್ನು ಸವಾಲಾಗಿ ಸ್ವೀಕರಿಸಿ ಜನರ ಬಳಿಗೆ ಹೋಗಿದ್ದೇನೆ. ಯಾವ ಹುದ್ದೆಯ ಆಕಾಂಕ್ಷಿಯೂ ಅಲ್ಲ. ಗೆದ್ದ ನಂತರ ಮನಸ್ಸಿಗೆ ಶಾಂತಿ ಸಿಗುತ್ತದೆ' ಎಂದು ತಿಳಿಸಿದರು.

## ವಿಶ್ರಾಂತಿಗೆ ಸಿಂಗಾಪುರಕ್ಕೆ ತೆರಳಿದ ಕುಮಾರಸ್ವಾಮಿ



ಬೆಂಗಳೂರು: ವಿಧಾನಸಭೆ ಚುನಾವಣೆಯ ಮತದಾನ ಪ್ರಕ್ರಿಯೆ ಮುಗಿದ ಬೆನ್ನಲ್ಲೇ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ ಸಿಂಗಾಪುರಕ್ಕೆ ತೆರಳಿದ್ದಾರೆ.

ಕುಮಾರಸ್ವಾಮಿ ಕಳೆದ ನಾಲ್ಕೈದು ತಿಂಗಳ ಕಾಲ ರಾಜ್ಯದಾದ್ಯಂತ ಪಂಚರತ್ನ ಯಾತ್ರೆ ಮೂಲಕ ನಿರಂತರ ಪ್ರಚಾರ ನಡೆಸಿದ್ದರು. ಒಮ್ಮೆ ಅನಾರೋಗ್ಯಕ್ಕೆ ತುತ್ತಾಗಿ ಆಸ್ಪತ್ರೆಗೂ ದಾಖಲಾಗಿದ್ದರು. ಈ ಹಿನ್ನೆಲೆಯಲ್ಲಿ ಸಿಂಗಾಪುರದಲ್ಲಿ ಅವರು ಆರೋಗ್ಯ ತಪಾಸಣೆಗೆ ಒಳಗಾಗಲಿದ್ದು, ಎರಡು ದಿನ ವಿಶ್ರಾಂತಿ ಪಡೆಯಲಿದ್ದಾರೆ.

ಮೇ 13ರಂದು ಚುನಾವಣೆಯ ಫಲಿತಾಂಶ ಪ್ರಕಟ ಆಗಲಿದ್ದು, ಅಂದು ಮಧ್ಯಾಹ್ನ ಕುಮಾರಸ್ವಾಮಿ ಬೆಂಗಳೂರಿಗೆ ವಾಪಸ್ ಆಗಲಿದ್ದಾರೆ ಎಂದು ಜೆಡಿಎಸ್ ಮೂಲಗಳು ತಿಳಿಸಿವೆ.

## ಆಪರೇಷನ್ ಕಮಲ ಮಾಡುವ ಪರಿಸ್ಥಿತಿ ಬರುವುದಿಲ್ಲ: ಶೋಭಾ ಕರಂದ್ಲಾಜೆ



ಬೆಂಗಳೂರು: 'ಆಪರೇಷನ್ ಕಮಲ'ದ ಸಾಧ್ಯತೆಯನ್ನು ತಳ್ಳಿಹಾಕಿರುವ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿ 120 ರಿಂದ 125 ಸ್ಥಾನಗಳನ್ನು ಪಡೆದು ಮತ್ತೆ ಅಧಿಕಾರಕ್ಕೆ ಬರಲಿದೆ ಎಂದು ಗುರುವಾರ ಹೇಳಿದ್ದಾರೆ.

ಆಪರೇಷನ್ ಕಮಲ' ಎಂಬ ಪದವನ್ನು ಹಲವಾರು ವರ್ಷಗಳ ಹಿಂದೆ ರಾಜ್ಯದಲ್ಲಿ ವಿರೋಧ ಪಕ್ಷವಾದ ಕಾಂಗ್ರೆಸ್ ಮತ್ತು ಜೆಡಿಎಸ್ ಸೃಷ್ಟಿಸಿತು. ಈ ಹಿಂದೆ ಬಿಜೆಪಿ ಬಹುಮತ ಪಡೆಯಲು ವಿಫಲವಾದಾಗ 'ವಿರೋಧ ಪಕ್ಷದ ಚುನಾಯಿತ ಶಾಸಕರನ್ನು ಸೆಳೆಯಲು' ಬಿಜೆಪಿ ಮಾಡಿದ ಆಪಾದಿತ ಪ್ರಯತ್ನಗಳನ್ನು ಉಲ್ಲೇಖಿಸುತ್ತದೆ.

ಬಹುತೇಕ ಚುನಾವಣೋತ್ತರ ಸಮೀಕ್ಷೆಗಳು ಬಿಜೆಪಿಗಿಂತ ಕಾಂಗ್ರೆಸ್‌ಗೆ ಹೆಚ್ಚಿನ ಸ್ಥಾನವನ್ನು ನೀಡಿದೆ. ಎಕ್ಸಿಟ್ ಪೋಲ್‌ಗಳು ತಪ್ಪೆಂದು ಪಕ್ಷವು ಸಾಬೀತುಪಡಿಸುತ್ತದೆ. ಪಕ್ಷವು ಸಂಪೂರ್ಣ ಬಹುಮತ ಪಡೆಯುತ್ತದೆ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಖಾತೆ ರಾಜ್ಯ ಸಚಿವೆ ಹೇಳಿದರು.

ಬಿಜೆಪಿಯು ಆಪರೇಷನ್ ಕಮಲದ ಮೊರೆ ಹೋಗಬೇಕೇ ಎಂಬ ಪ್ರಶ್ನೆಗೆ, 'ಖಂಡಿತ ಇಲ್ಲ. ನಂಬಿಕೆ ಇಡಿ. ಯಾವುದೇ ರೀತಿಯ 'ಆಪರೇಷನ್ ಕಮಲ'ದ ಪರಿಸ್ಥಿತಿ ಉದ್ಭವಿಸುವುದಿಲ್ಲ. ಈ ಬಾರಿ ರಾಜ್ಯದ ಜನತೆ ರಾಜ್ಯದ ಅಭಿವೃದ್ಧಿಗೆ ಮತ ನೀಡಿ ಬಹುಮತದ ಸರ್ಕಾರ ನೀಡಲಿದ್ದಾರೆ. ಅತಂತ್ರ ವಿಧಾನಸಭೆಯ ಪರಿಸ್ಥಿತಿ ಇರುವುದಿಲ್ಲ' ಎಂದರು.

ನಮ್ಮ ಬೂತ್ ಮಟ್ಟದ ಕಾರ್ಯಕರ್ತರಿಂದ ಪಡೆದ ಪ್ರಾಥಮಿಕ ವರದಿಗಳ ಪ್ರಕಾರ, ನಾವು 120 ರಿಂದ 125 ಸ್ಥಾನಗಳನ್ನು ಗೆಲ್ಲುತ್ತೇವೆ. ಕೆಲವು ಸ್ಥಾನಗಳಲ್ಲಿ ಪಕ್ಷವು 'ಊಹೆಗೂ ಮೀರಿದ' ಸಾಧನೆ ಮಾಡಿದೆ ಎಂದು ಕರಂದ್ಲಾಜೆ ಹೇಳಿದರು.

150 ಸ್ಥಾನಗಳನ್ನು ಗೆಲ್ಲುವುದಾಗಿ ಹೇಳಿಕೊಂಡಿದ್ದ ಪಕ್ಷವು ತನ್ನ ಅಂದಾಜನ್ನು 120ಕ್ಕೆ ಏಕೆ ಇಳಿಸಿತು ಎಂಬುದರ ಕುರಿತು ಪ್ರತಿಕ್ರಿಯಿಸಿದ ಅವರು, ಬೂತ್ ಮಟ್ಟದ ಕಾರ್ಯಕರ್ತರು ಅಲ್ಲಿಂದ ಪಡೆದ ಪ್ರಾಥಮಿಕ ವರದಿಯನ್ನು ಆಧರಿಸಿ ಇತ್ತೀಚಿನ ಲೆಕ್ಕಾಚಾರ ಮಾಡಲಾಗಿದೆ ಎಂದು ಅವರು ಹೇಳಿದರು.

## ಸರ್ಕಾರ ರಚನೆಗೆ ಸಿದ್ಧರಾಗಿದ್ದೇವೆ: ಡಾ.ಜಿಪರಮೇಶ್ವರ್



ತುಮಕೂರು: ಸರ್ಕಾರ ರಚನೆ ಮಾಡಲು ಮಾನಸಿಕವಾಗಿ ಸಿದ್ಧರಾಗಿದ್ದೇವೆ. ಕಾಂಗ್ರೆಸ್ 130 ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ ಎಂದು ಮಾಜಿ ಡಿಸಿಎಂ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಡಾ.ಜಿ.ಪರಮೇಶ್ವರ್, 2013ರಲ್ಲಿ ನಾನು 120 ಸ್ಥಾನ ಬರುವ ಮುನ್ಸೂಚನೆ ಕೊಟ್ಟಿದ್ದೆ. ಆದರೆ ನಾವು 122 ಸ್ಥಾನಗಳನ್ನು ಗೆದ್ದಿದ್ದೆವು. ಈಗ ನಾವು 130 ಸ್ಥಾನಗಳನ್ನು ಗೆಲ್ಲುತ್ತೇವೆ ಎಂದು ಹೇಳುತ್ತಿದ್ದೇನೆ. ನನ್ನ ಲೆಕ್ಕಾಚಾರ ಸರಿ ಆಗಬಹುದು. ಎಲ್ಲಾ ಕಾಲಕ್ಕೂ ಎಲ್ಲಾ ಸಮೀಕ್ಷೆಗಳು ನಿಜವಾಗುವುದಿಲ್ಲ.

ಕೆಲವೊಮ್ಮೆ ಸರ್ವೆ ನಿಜವಾಗಿದೆ, ಕೆಲವೊಮ್ಮೆ ಸುಳ್ಳಾಗಿದೆ. ಆದರೂ ಮತದಾನೋತ್ತರ ಸಮೀಕ್ಷೆಯಲ್ಲಿ ಕಾಂಗ್ರೆಸ್ ಮುಂದಿದೆ. ಕಾಂಗ್ರೆಸ್ ಪರ ಅಲೆಯಿರುವುದು ಸಾಬೀತಾಗಿದೆ ಎಂದು ಹೇಳಿದರು.

ವರುಣಾದಲ್ಲಿ ಯಾವ ತೊಂದ್ದರೆಯೂ ಇಲ್ಲದೇ ಸಿದದ್ರಾಮಯ್ಯ ಗೆಲ್ಲುತ್ತಾರೆ. ಕೊರಟಗೆರೆಯಲ್ಲಿ ನಾನು ಅತಿ ಹೆಚ್ಚು ಮತಗಳನ್ನು ಪಡೆದು ಗೆಲ್ಲುತ್ತೇನೆ ಎಂದು ಹೇಳಿದರು.

ಇನ್ನು ಮುಖ್ಯಮಂತ್ರಿ ಯಾರಾಗಬೇಕು ಎಂಬುದನ್ನು ಸಿಎಲ್ ಪಿ ಅಭಿಪ್ರಾಯ ಸಂಗ್ರಹಿಸಿ ತೀರ್ಮಾನ ಮಾಡುತ್ತೇವೆ. ಉತ್ತಮ ಆಡಳಿತ ಕೊಡುವವರನ್ನು ಮುಖ್ಯಮಂತ್ರಿ ಮಾಡ್ತಾರೆ.

ಹೈಕಮಾಂಡ್ ನನ್ನ ಸಿಎಂ ಮಾಡಿದರೆ ಬೇಡ ಅನ್ನೋಕೆ ಆಗುತ್ತಾ? ಎಂದು ಪ್ರಶ್ನಿಸಿದ್ದಾರೆ.

## ದಿಢೀರ್ ಆಸ್ಪತ್ರೆಗೆ ದಾಖಲಾದ ಸಿ.ಟಿ. ರವಿ



ಚಿಕ್ಕಮಗಳೂರು: ದಿಢೀರ್ ಆರೋಗ್ಯದಲ್ಲಿ ವ್ಯತ್ಯಾಸ ಕಂಡು ಬಂದ ಹಿನ್ನೆಲೆ ಚಿಕ್ಕಮಗಳೂರಿನ ಶಾಸಕ ಸಿ.ಟಿ. ರವಿ ಅವರು ದಿಢೀರ್ ತಡರಾತ್ರಿಯೇ ಆಸ್ಪತ್ರೆಗೆ ದಾಖಲಾಗಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ.

ಕಿಡ್ನಿ ಸಮಸ್ಯೆಯಿಂದ ಬಳುತ್ತಿದ್ದ ಕಾರಣ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ. ರವಿ ಅವರನ್ನು ಚಿಕ್ಕಮಗಳೂರು ನಗರದ ಆಶ್ರಯ ಆಸ್ಪತ್ರೆಗೆ ದಾಖಲಿಸಲಾಗಿದೆ.

ವಿಧಾನಸಭೆ ಚುನಾವಣೆ ಚಿಕ್ಕಮಗಳೂರು ಕ್ಷೇತ್ರ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಪ್ರಚಾರ ಮಾಡಿದ್ದರು. ಆದರೆ ನಿನ್ನೆ ತಡರಾತ್ರಿ ಅವರ ಆರೋಗ್ಯದಲ್ಲಿ ವ್ಯತ್ಯಾಸ ಆಗಿದ್ದು, ತಕ್ಷಣ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಈ ಹಿಂದೆಯೂ ಸಹ ಅವರು ಕಿಡ್ನಿ ಸಮಸ್ಯೆಯಿಂದಾಗಿ ಸಿ.ಟಿ. ರವಿ ಅವರು ಆಸ್ಪತ್ರೆಗೆ ಸೇರಿದ್ದರು. ಆಗ ವೈದ್ಯರು ಸಿ.ಟಿ.ರವಿ ಅವರ ಆರೋಗ್ಯದಲ್ಲಿ ಯಾವುದೇ ತೊಂದರೆ ಇಲ್ಲ ಎನ್ನುವ ಮಾಹಿತಿಯನ್ನು ನೀಡಿದ್ದರು. ಆದರೆ ಇದೀಗ ಮತ್ತೆ ಕಿಡ್ನಿ ಸಮಸ್ಯೆಯಿಂದ ಆಸ್ಪತ್ರೆಗೆ ಸೇರಿದ್ದಾರೆ.

ವಿಧಾನಸಭೆ ಚುನವಣೆ ಹಿನ್ನೆಲೆ ಈಗಾಗಲೇ ಅವರು ಕ್ಷೇತ್ರದಲ್ಲಿ ಹಲವಾರು ಕಡೆ ಸುತ್ತಿದ್ದರು. ಅಲ್ಲದೆ ಕಾರ್ಯಕರ್ತರ ಜೊತೆ ಹಲವು ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳ ಪರ ಅಬ್ಬರದ ಪ್ರಚಾರವನ್ನು ಕೂಡ ಮಾಡಿದ್ದರು. ಆದರೆ ಇದೀಗ ಅವರ ಆರೋಗ್ಯದಲ್ಲಿ ವ್ಯತ್ಯಾಸ ಆಗಿದ್ದು, ಆಸ್ಪತ್ರೆಗೆ ಸೇರಿದ್ದಾರೆ.

## ಎಲ್ಲಾ ಎಕ್ಸಿಟ್ ಪೋಲ್‌ಗಳು ಸುಳ್ಳಾಗುತ್ತವೆ: ಬಿಎಲ್ ಸಂತೋಷ್



ಬೆಂಗಳೂರು: ಎಲ್ಲಾ ಎಕ್ಸಿಟ್ ಪೋಲ್‌ಗಳು ಸುಳ್ಳಾಗುತ್ತವೆ. ಈ ಹಿಂದೆಯೂ ಅವು ರಾಷ್ಟ್ರ ಮತ್ತು ರಾಜ್ಯ ಮಟ್ಟದಲ್ಲಿ ಬಿಜೆಪಿ ಗೆಲ್ಲುತ್ತದೆ ಎಂದು ಊಹಿಸಿರಲಿಲ್ಲ ಎಂದು ಭಾರತೀಯ ಜನತಾ ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಗುರುವಾರ ಹೇಳಿದ್ದಾರೆ.

ಬಿಜೆಪಿಯು 2014 ರಲ್ಲಿ 282 ಅಥವಾ 2019 ರಲ್ಲಿ 303 ಅಥವಾ 2022 ರಲ್ಲಿ 156 ಅಥವಾ 2018 ರಲ್ಲಿ 104 ಎಂದು ಯಾವ ಸಮೀಕ್ಷೆಗಳು ಭವಿಷ್ಯ ನುಡಿದಿರಲಿಲ್ಲ ಎಂದಿದ್ದಾರೆ.

2018 ರಲ್ಲಿ ಕರ್ನಾಟಕದಲ್ಲಿ ಬಿಜೆಪಿ 14 ವಿಧಾನಸಭಾ ಕ್ಷೇತ್ರಗಳಲ್ಲಿ ಹಿನ್ನಡೆಯೊಂದಿಗೆ 24,000 ಬೂತ್‌ಗಳಲ್ಲಿ ಮುನ್ನಡೆ ಸಾಧಿಸಿತ್ತು. ಈ ಬಾರಿ ನಾವು 31,000 ಬೂತ್‌ಗಳಲ್ಲಿ ಮುನ್ನಡೆ ಸಾಧಿಸಿದ್ದೇವೆ ಮತ್ತು ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ಮಾಡಿದ್ದೇವೆ. ನೀವು ನೀಡಿರುವ ಸಂಖ್ಯೆಗಳು ಕೇವಲ ನಿಮ್ಮ ಊಹೆಯಷ್ಟೇ' ಎಂದು ಸಂತೋಷ್ ಹೇಳಿದರು.

ಈಮಧ್ಯೆ, ತಮ್ಮ ತಮ್ಮ ಕ್ಷೇತ್ರಗಳಲ್ಲಿರುವ ಎಲ್ಲಾ ನಾಯಕರು ಮೇ 13 ರಂದು ಚುನಾವಣಾ ಫಲಿತಾಂಶ ಪ್ರಕಟವಾಗುವ ದಿನ ಬೆಂಗಳೂರಿಗೆ ತೆರಳುತ್ತಿದ್ದಾರೆ.

ಎಕ್ಸಿಟ್ ಪೋಲ್‌ಗಳು ಅತಂತ್ರ ವಿಧಾನಸಭೆಯ ಭವಿಷ್ಯ ನುಡಿದಿದ್ದು, ಕಾಂಗ್ರೆಸ್ ಏಕೈಕ ದೊಡ್ಡ ಪಕ್ಷವಾಗಿ ಹೊರಹೊಮ್ಮಲಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಪ್ರಚಾರದ ಹೊರತಾಗಿಯೂ ಆಡಳಿತಾರೂಢ ಬಿಜೆಪಿಗೆ ದೊಡ್ಡ ಹಿನ್ನಡೆಯಾಗಿದೆ ಎಂದು ಸೂಚಿಸಿವೆ.

ಚುನಾವಣೆ ಮುಗಿಸಿ ಟೆಂಪಲ್ ರನ್ ಮಾಡುತ್ತಿದ್ದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಬೆಂಗಳೂರಿಗೆ ವಾಪಸಾಗುತ್ತಿದ್ದಾರೆ. ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಕೂಡ ಬೆಂಗಳೂರಿನ ಬಿಜೆಪಿ ಕೇಂದ್ರ ಕಚೇರಿಯಲ್ಲಿ ನಡೆಯುವ ಸಭೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ.

## ಡಿಕೆಶಿ ಗಡ್ಡಕ್ಕೆ ಕತ್ತರಿ




ರಾಮನಗರ: ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ವಿಧಾನಸಭೆ ಚುನಾವಣೆಯ ನಂತರ ವಿರಾಮದ ಮೂಡ್‌ನಲ್ಲಿದ್ದು, ಗುರುವಾರ ಸ್ವಕ್ಷೇತ್ರ ಕನಕಪುರದಲ್ಲಿ ಕಾಲ ಕಳೆಯುತ್ತಿದ್ದಾರೆ.

ಚುನಾವಣೆ ಸಂದರ್ಭ ಶಿವಕುಮಾರ್ ಗಡ್ಡ ಬಿಟ್ಟಿದ್ದು ಕುತೂಹಲಕ್ಕೆ ಕಾರಣವಾಗಿತ್ತು. ಬಿಜೆಪಿಯವರ ಕಾಟದಿಂದ ನಮ್ಮಣ್ಣ ಗಡ್ಡ ಬಿಟ್ಟಿದ್ದಾರೆ. ಮೇ 13ರಂದು ಅದಕ್ಕೆ ಉತ್ತರ ಸಿಗಲಿದೆ ಎಂದು ಸಂಸದ ಡಿ.ಕೆ. ಸುರೇಶ್ ಜನರ ಎದುರು ಹೇಳಿಕೊಂಡು ಕಣ್ಣೀರು ಹಾಕಿದ್ದರು. ಆದರೆ ಫಲಿತಾಂಶಕ್ಕೆ ಮುನ್ನವೇ ಅವರು ಗಡ್ಡಕ್ಕೆ ಕತ್ತರಿ ಹಾಕಿಸಿಕೊಂಡರು.

ಬೆಳಿಗ್ಗೆ ಕನಕಪುರದ ನಿವಾಸದಲ್ಲಿ ಟ್ರಿಮ್ ಮಾಡಿಸಿಕೊಂಡ ಡಿಕೆಶಿ, ಸಹೋದರ ಸುರೇಶ್ ಜೊತೆಗೂಡಿ ಕನಕಪುರದ ಪ್ರಸಿದ್ಧ ವಾಸು ಹೋಟೆಲ್‌ನಲ್ಲಿ ದೋಸೆ ಸವಿದರು.

## ಬಿಜೆಪಿ ಅಧಿಕಾರಕ್ಕೆ ಬಂದೇ ಬರುತ್ತೆ: ಮಾಜಿ ಸಿಎಂ ಯಡಿಯೂರಪ್ಪ



ಬೆಂಗಳೂರು: ಈ ಬಾರಿ ರಾಜ್ಯದಲ್ಲಿ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರುತ್ತದೆ ಎಂದು ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಯಡಿಯೂರಪ್ಪ, ಬಿಜೆಪಿ ಅಧಿಕಾರಕ್ಕೆ ಬಂದೇ ಬರುತ್ತದೆ ಯಾವುದೇ ಸಂಶಯವಿಲ್ಲ, ನನಗೆ ನೂರಕ್ಕೆ ನೂರರಷ್ಟು ವಿಶ್ವಾಸವಿದೆ ನಾವೇ ಗೆಲ್ಲುತ್ತೇವೆ ಎಂದು ಹೇಳಿದ್ದಾರೆ.

ನಮಗೆ ಕರ್ನಾಟಕದ ಜನರ ನಾಡಿಮಿಡಿತದ ಬಗ್ಗೆ ಗೊತ್ತಿದೆ. ಬಿಜೆಪಿಗೆ ಬಹುಮತ ಬರಲಿದೆ, ಸರ್ಕಾರ ರಚನೆ ಮಾಡುತ್ತೇವೆ ಎಂದು ಹೇಳಿದರು.

## 1 ಲಕ್ಷ 20 ಸಾವಿರ ಮತಗಳ ಅಂತರದಿಂದ ಗೆಲ್ಲುತ್ತೇನೆ: ಲಕ್ಷ್ಮಣ್ ಸವದಿ



ಅಥಣಿ: ನನಗೆ 1 ಲಕ್ಷ 20 ಸಾವಿರ ಮತಗಳು ನನಗೆ ಬರುವ ನಿರೀಕ್ಷೆ ಇದೆ. 40 ಸಾವಿರಕ್ಕೂ ಅಧಿಕ ಮತಗಳ ನಾನು ಅಂತರದಿಂದ ಗೆಲ್ಲುತ್ತೇನೆ ಎಂದು ಅಥಣಿ ಕೈ ಅಭ್ಯರ್ಥಿ, ಮಾಜಿ ಡಿಸಿಎಂ ಲಕ್ಷ್ಮಣ್ ಸವದಿ ಹೇಳಿದ್ದಾರೆ.

ಅಥಣಿ ಪಟ್ಟಣದ ಸ್ವಗೃಹದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸೇರಿದ ಮೇಲೆ ಈ ಬಾರಿ ಉತ್ಸಾಹ ಹುಮ್ಮಸ್ಸಿನಿಂದ ಚುನಾವಣೆ ಎದುರಿಸಿದ್ದೇನೆ. ಕಾಂಗ್ರೆಸ್ ವೋಟ್ ಬ್ಯಾಂಕ್ ಜೊತೆಗೆ ಬಿಜೆಪಿ ತೊರೆದು ನನ್ನ ಬೆಂಬಲಿಗರು ಬಂದಿದ್ದಾರೆ ಎಂದರು.

ಎಕ್ಸಿಟ್ ಪೋಲ್ಗಳಲ್ಲಿ ಕಾಂಗ್ರೆಸ್ ಮುನ್ನಡೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಕರ್ನಾಟಕದಲ್ಲಿ 35 ವರ್ಷಗಳಿಂದ ಸತತವಾಗಿ ಒಂದೇ ಸರ್ಕಾರ ಎರಡು ಬಾರಿ ಅಧಿಕಾರಕ್ಕೆ ಬಂದಿಲ್ಲ. ಬಿಜೆಪಿ ಪಕ್ಷದಲ್ಲಿ ಪ್ರಾಮಾಣಿಕರು ನಿಷ್ಠಾವಂತರಿಗೆ ನಿರ್ಲಕ್ಷ್ಯ ಆಗಿದೆ. ವ್ಯಾಪಾರೀಕರಣದಿಂದ ಬಿಜೆಪಿ ಪಕ್ಷಕ್ಕೆ ಬಹಳ ದೊಡ್ಡ ಹಾನಿಯಾಗಿದೆ. ಕಾಂಗ್ರೆಸ್ ನಾಯಕರು ಒಗ್ಗಟ್ಟಿನ ಪ್ರದರ್ಶನ ಮಾಡಿದ್ದಾರೆ. 5 ಗ್ಯಾರಂಟಿ ಯೋಜನೆಗಳಿಂದ ಬಡವರು, ಕಾರ್ಮಿಕರಿಗೆ ಬಹಳಷ್ಟು ಆಶಾ ಕಿರಣ ಮೂಡಿದೆ. ಬಡವರು ಕಾರ್ಮಿಕರು ಹಾಗೂ ಮಧ್ಯಮ ವರ್ಗದವರು ಜನಪ್ರಿಯ ಯೋಜನೆಗಳಿಂದ ಕಾಂಗ್ರೆಸ್ ಪಕ್ಷವನ್ನ ಬೆಂಬಲಿಸಿದ್ದಾರೆ ಎಂದು ಹೇಳಿದರು.

ಈಗಾಗಲೇ ಅನೇಕ ಸಂಸ್ಥೆಗಳ ಸಮೀಕ್ಷೆಗಳು ಕಾಂಗ್ರೆಸ್ ಬಹುಮತ ಅಂತಾ ಹೇಳಿವೆ. ಬೇರೆ ಜಿಲ್ಲೆಗಳಿಂದ ನಾವು ಮಾಹಿತಿ ಪಡೆದಾಗ 127 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲಲಿದೆ. ನನ್ನ ಪ್ರಕಾರ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ 127 ರಿಂದ 130 ಕ್ಷೇತ್ರದಲ್ಲಿ ಗೆಲುವು ಸಾಧಿಸಲಿದೆ. ಬಿಜೆಪಿ ನಾಯಕರು ತಮ್ಮ ಪರವಾಗಿ ಸಮೀಕ್ಷೆ ಬಂದಾಗ ಸರಿಯಿದೆ ಎನ್ನುತ್ತಾರೆ. ಅವರ ವಿರುದ್ಧ ಬಂದಾಗ ಅದನ್ನ ವಿರೋಧಿಸುತ್ತಾರೆ ಎಂದು ತಿಳಿಸಿದ್ದಾರೆ.

ಬಿಜೆಪಿಯಲ್ಲಿ ಲಿಂಗಾಯತ ನಾಯಕರ ಸೈಡ್ ಲೈನ್ ಆರೋಪ ವಿಚಾರದ ಕುರಿತು ಮಾತನಾಡಿ, ಮೇಲ್ನೋಟಕ್ಕೆ ಬಿಜೆಪಿ ಅವರು ಲಿಂಗಾಯತರನ್ನ ಕಡೆಗಣಿಸುತ್ತಿರುವಂತೆ ಕಾಣುತ್ತಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಸಿಎಂ ಯಾರಾಗಬೇಕು ಎನ್ನುವದನ್ನ ಹೈಕಮಾಂಡ ತೀರ್ಮಾನ ಮಾಡುತ್ತೆ ಎಂದರು.

## ಸರಕಾರಿ ಪ್ರೌಢ ಶಾಲೆ ವಿದ್ಯಾರ್ಥಿಗಳ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸಾಧನೆ

ಬೆಳಗಾವಿ: ಪ್ರಸಕ್ತ ಶೈಕ್ಷಣಿಕ 2022–23 ನೇ ಸಾಲಿನ ಎಸ್‌ಎಸ್‌–ಎಲ್‌ಸಿ ಪರೀಕ್ಷೆಯಲ್ಲಿ ಬೆಳಗಾವಿಯ ಸರಕಾರಿ ಪ್ರೌಢ ಶಾಲೆ ಕಡೋಲಿಗೆ 94.71% ಪ್ರತಿಶತ ಫಲಿತಾಂಶ ದೊರೆತಿದೆ.

ವಿದ್ಯಾರ್ಥಿನಿಯರಾದ ಐಶ್ವರ್ಯ ಕುಂಬರಗಿ ಪ್ರಥಮ ಸ್ಥಾನ(93.28%), ರೇಣುಕಾ ಅಜಾಣಿ ದ್ವಿತೀಯ ಸ್ಥಾನ ಹಾಗೂ 88.32%, ಶ್ವೇತಾ ನರೋಟಿ ತೃತೀಯ ಸ್ಥಾನ(88.16%) ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ. .

ಎಸ್.ಡಿ.ಎಮ್.ಸಿ ಅಧ್ಯಕ್ಷರು, ಸದಸ್ಯರು, ಶಕ್ಷಣ ಪ್ರೇಮಿಗಳು, ಮುಖ್ಯೋಪಾಧ್ಯಾಯರು ಮತ್ತು ಸಿಬ್ಬಂದಿ ವರ್ಗ ಹಾಗೂ ಇತರ ಶಿಕ್ಷಕರು ವಿದ್ಯಾರ್ಥಿಗಳನ್ನು ಅಭಿನಂದಿಸಿ ಹಾರೈಸಿದ್ದಾರೆ.

## ಮೊರಾರ್ಜಿ ದೇಸಾಯಿ ಬಾಲಕಿಯರ ಪದವಿ ಪೂರ್ವ ವಸತಿ ಕಾಲೇಜು: ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಚಿಕ್ಕೋಡಿಯ ಸರ್ಕಾರಿ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ಪದವಿ ಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ವಸತಿ ಕಾಲೇಜು, ಇಲ್ಲಿ 2023–24ನೇ ಸಾಲಿನ ಪ್ರಥಮ ವರ್ಷದ ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದಲ್ಲಿ ತಲಾ 60 ಸೀಟುಗಳು ಖಾಲಿ ಇದ್ದು, ಪ್ರವೇಶಕ್ಕಾಗಿ 10ನೇ ತರಗತಿ ಪಾಸಾದ ಅಲ್ಪಸಂಖ್ಯಾತರ ಮುಸ್ಲಿಂ, ಜೈನ್, ಕ್ರೈಸ್ತ್, ಪಾರ್ಸಿ, ಬೌದ್ಧ ಮತ್ತು ಸಿಖ್ ಹಾಗೂ ಇತರೆ ವರ್ಗದ ಬಾಲಕಿಯರಿಂದ (75:25 ಅನುಪಾತದಲ್ಲಿ) ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಲ್ಪಸಂಖ್ಯಾತರ ಹಾಗೂ ಇತರೆ ವರ್ಗದ ವಿದ್ಯಾರ್ಥಿಗಳು ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯಾಲಯ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಬಾಲಕಿಯರ ಪದವಿ ಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ವಸತಿ ಕಾಲೇಜು, ಹಿರೇಕೋಡಿ ಅಥವಾ ಜಿಲ್ಲಾ/ತಾಲ್ಲೂಕಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಿಂದ ಅರ್ಜಿಯನ್ನು ಪಡೆದು ಭರ್ತಿ ಮಾಡಿ ಮೇ.25 2023 ರೊಳಗೆ ಸಲ್ಲಿಸಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8880559790 ಗೆ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮರಗಳ ತೆರವು: ಸಾರ್ವಜನಿಕರಿಂದ ಅಹವಾಲು ಆಕ್ಷೆಪಣೆಗೆ ಸೂಚನೆ

ಬೆಳಗಾವಿ: ಬೆಳಗಾವಿ ನಗರ ವ್ಯಾಪ್ತಿಯಲ್ಲಿ ಬರುವ 110 ಕೆ.ವ್ಹಿ, ಬೆಳಗಾವಿ ನೋಡಲ್ ವ್ಯಾಪ್ತಿಗೆ ಒಳಪಡುವ 110/33/11 ಕೆ.ವ್ಹಿ ಮಚ್ಚೆ ಉಪ ಕೇಂದ್ರದ ಆವರಣದಲ್ಲಿಯ ಒಟ್ಟು 223 ಮರಗಳನ್ನು ತೆರವುಗೊಳಿಸಲು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿ), ಬೆಳಗಾವಿಯ 110 ಕೆ.ವ್ಹಿ ಉಪಕೇಂದ್ರ, ನೆಹರು ನಗರ, ಇವರು ಪ್ರಸ್ತಾವನೆಯನ್ನು ಸಲ್ಲಿಸಿರುವ ಮೇರೆಗೆ ಸದರಿ ಪ್ರದೇಶದಲ್ಲಿ ಇರುವ ಮರಗಳು 50 ಮರಗಳಿಂತ ಹೆಚ್ಚಿಗೆ ಇರುವುದರಿಂದ ಕರ್ನಾಟಕ ಮರಗಳ ಕಾಯ್ದೆ 1976 ನಿಯಮ 8 (3) (ತು) ರ ಪ್ರಕಾರ "ಪಬ್ಲಿಕ್ ಡಾಮನ್" ನಲ್ಲಿ ಪಾರ್ವಜನಿಕರಿಂದ ಆಕ್ಷೇಪಣೆ, ಅಹವಾಲು ಪಡೆಯಬೇಕಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಂದ ಆಕ್ಷೇಪಣೆ, ಅಹವಾಲು ಇದ್ದಲ್ಲಿ ಏಳು (17) ದಿನಗಳೊಳಗಾಗಿ ಬೆಳಗಾವಿ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಕಛೇರಿಗೆ ಆಕ್ಷೇಪಣೆ ಅಹವಾಲು ಸಲ್ಲಿಸಬಹುದು ಎಂದು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮಚ್ಚೆ ಸರ್ವೆ ನಂ.543, 553, 552, 592 ರಲ್ಲಿರುವ ಮರಗಳು, ವಿವಿಧ ಜಾತಿಯ ಮರಗಳು 223 11 (ಸದರಿ ಮರಗಳನ್ನು ಸಂಪೂರ್ಣ ತೆರವುಗೊಳಿಸುವುದು).

ಪ್ರಕಟಣೆಯನ್ನು ಹೊರಡಿಸಿದ ದಿನಾಂಕದಿಂದ ಏಳು (07) ದಿನದೊಳಗೆ ಯಾವುದೇ ಆಕ್ಷೇಪಣೆ ಸ್ವೀಕೃತವಾಗದಿದ್ದಲ್ಲಿ, ಯಾವುದೇ ಆಕ್ಷೇಪಣೆ ಇಲ್ಲವೆಂದು ಪರಿಗಣಿಸಿ ನಿಯಮಾನುಸಾರ ಮುಂದಿನ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ.

# ಚುನಾಯಿತ ಸರ್ಕಾರಕ್ಕೆ ಆಡಳಿತಾತ್ಮಕ ಅಧಿಕಾರ ಇರಬೇಕು; ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು

ನವದೆಹಲಿ: ರಾಷ್ಟ್ರ ರಾಜಧಾನಿಯ ಆಡಳಿತಾತ್ಮಕ ಸೇವೆಗಳ ಮೇಲಿನ ನಿಯಂತ್ರಣದ ವಿಚಾರಕ್ಕೆ ಸಂಬಂಧಿಸಿದಂತೆ ದೆಹಲಿ ಸರ್ಕಾರದ ಪರವಾಗಿ ಸುಪ್ರೀಂಕೋರ್ಟ್ ಮಹತ್ವದ ತೀರ್ಪು ನೀಡಿದ್ದು, ಅರವಿಂದ ಕೇಜ್ರಿವಾಲ್ ಸರ್ಕಾರಕ್ಕೆ ದೊಡ್ಡ ಗೆಲುವು ಸಿಕ್ಕಂತಾಗಿದೆ.

ದೆಹಲಿ ಸರ್ಕಾರವು ಕಾನೂನು ಮತ್ತು ಸುವ್ಯವಸ್ಥೆ, ಭೂಮಿ ಹೊರತುಪಡಿಸಿ ಇತರೆ ಸೇವೆಗಳ ಮೇಲೆ ಅಧಿಕಾರ ಹೊಂದಬಹುದು ಎಂದು ಸುಪ್ರೀಂಕೋರ್ಟ್ ತೀರ್ಪು ನೀಡಿದೆ.

ಈ ಸಂದರ್ಭದಲ್ಲಿ ಕೇಂದ್ರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಸುಪ್ರೀಂ ಕೋರ್ಟ್, ಸಂಪೂರ್ಣ ಆಡಳಿತಾತ್ಮಕ ನಿಯಂತ್ರಣ ಕೇಂದ್ರ ಸರ್ಕಾರದ ಬಳಿ ಇರಬೇಕಾದರೆ ದೆಹಲಿಯಲ್ಲಿ ಚುನಾಯಿತ ಸರ್ಕಾರ ಇರುವುದರ ಉದ್ದೇಶವೇನು ಎಂದು ಪ್ರಶ್ನಿಸಿತು.

ದೆಹಲಿಯಲ್ಲಿ ಆಡಳಿತಾತ್ಮಕ ಸೇವೆಗಳ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಮತ್ತು ದೆಹಲಿ ಸರ್ಕಾರದ ನಡುವಿನ ವಿವಾದದ ಕುರಿತು ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ.

ಮುಖ್ಯ ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ್ ನೇತೃತ್ವದ ಐವರು ನ್ಯಾಯಮೂರ್ತಿಗಳ ಪೀಠ ತೀರ್ಪು ಪ್ರಕಟಿಸಿದೆ.

ತೀರ್ಪು ಪ್ರಕಟಿಸುವ ಮುನ್ನ ಸಿಜೆಐ, ಎಲ್ಲ ನ್ಯಾಯಾಧೀಶರ ಒಪ್ಪಿಗೆ ಮೇರೆಗೆ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು.



ಸರ್ಕಾರವು ಅಧಿಕಾರಿಗಳನ್ನು ನೇಮಕ ಮಾಡುವ ಮತ್ತು ವರ್ಗಾವಣೆ ಮಾಡುವ ಹಕ್ಕನ್ನು ಹೊಂದಿರುತ್ತದೆ, ಅದೇ ರೀತಿ ಪೊಲೀಸ್, ಸಾರ್ವಜನಿಕ ಸುವ್ಯವಸ್ಥೆ ಮತ್ತು ಭೂಮಿ ಸಂಬಂಧಿತ ಅಧಿಕಾರಗಳು ಕೇಂದ್ರದ ಬಳಿ ಇರುತ್ತವೆ ಎಂದು ತಿಳಿಸಿದೆ.

ರಾಷ್ಟ್ರಪತಿಗಳು ಸೂಚಿಸಿದಂತೆ ಆಡಳಿತಾತ್ಮಕ ಪಾತ್ರದ ಅಡಿಯಲ್ಲಿ ಲೆಫ್ಟಿನೆಂಟ್ ಗವರ್ನರ್ ಅಧಿಕಾರ ಚಲಾಯಿಸಬೇಕು. ಕಾರ್ಯನಿರ್ವಾಹಕ ಆಡಳಿತ. ಶಾಸಕಾಂಗ ಸಭೆಯ ಹೊರಗೆ ಬೀಳುವ ವಿಷಯಗಳಿಗೆ ಮಾತ್ರ ಕೈ ಹಾಕಬಾರದು.

ಇಲ್ಲದಿದ್ದರೆ ದೆಹಲಿಯಲ್ಲಿ ಪ್ರತ್ಯೇಕ ಚುನಾಯಿತ ಸಂಸ್ಥೆ ಹೊಂದುವ ಉದ್ದೇಶ ನಿರರ್ಥಕವಾಗುತ್ತದೆ.

ಪ್ರಜಾಸತ್ತಾತ್ಮಕವಾಗಿ ಚುನಾಯಿತ ಸರ್ಕಾರವು ತನ್ನ ಅಧಿಕಾರಿಗಳ ಮೇಲೆ ನಿಯಂತ್ರಣವನ್ನು ಹೊಂದಿರಬೇಕು ಎಂದು ಸುಪ್ರೀಂ ಕೋರ್ಟ್ ತಿಳಿಸಿದೆ.

ಪ್ರಜಾಸತ್ತಾತ್ಮಕವಾಗಿ ಚುನಾಯಿತ ಸರ್ಕಾರ ತನ್ನ ಅಧಿಕಾರಿಗಳನ್ನು ನಿಯಂತ್ರಿಸಲು ಆಗದಿದ್ದರೆ ಶಾಸಕಾಂಗ ಮತ್ತು ಸಾರ್ವಜನಿಕರ ಕಡೆಗೆ ಅದರ ಜವಾಬ್ದಾರಿ ದುರ್ಬಲಗೊಳಿಸಲಾಗುತ್ತದೆ.

"ಒಬ್ಬ ಅಧಿಕಾರಿ ಸರ್ಕಾರಕ್ಕೆ ಪ್ರತಿಕ್ರಿಯಿಸದಿದ್ದರೆ ಸಾಮೂಹಿಕ ಜವಾಬ್ದಾರಿ ದುರ್ಬಲಗೊಳಿಸಲಾಗುತ್ತದೆ.

ಒಬ್ಬ ಅಧಿಕಾರಿಯು ಚುನಾಯಿತ ಸರ್ಕಾರದಿಂದ ಪ್ರತ್ಯೇಕಿಸಲ್ಪಟ್ಟಿದೆ ಎಂದು ಭಾವಿಸಿದರೆ ಅವರು ಜವಾಬ್ದಾರರಲ್ಲ ಎಂದು ಅವರು ಭಾವಿಸುತ್ತಾರೆ" ಎಂದು ಮುಖ್ಯನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಅವರಿದ್ದ ಪೀಠ ಹೇಳಿದೆ.

"ಜನರ ಇಚ್ಛೆಯನ್ನು ಪ್ರತಿನಿಧಿಸಲು ದೆಹಲಿ ವಿಧಾನಸಭೆಗೆ ಶಾಸನ ಮಾಡಲು ಅಧಿಕಾರವನ್ನು ನೀಡಲಾಗಿದೆ. ಪ್ರಜಾಪ್ರಭುತ್ವದ ತತ್ವ ಮತ್ತು ಒಕ್ಕೂಟ ವ್ಯವಸ್ಥೆ ಮೂಲಭೂತ ರಚನೆಯ ಒಂದು ಭಾಗವಾಗಿದೆ. ಅದನ್ನು ಉಲ್ಲಂಘಿ–ಸುವುದು ಸರಿಯಲ್ಲ ಎಂದು ಹೇಳಿದೆ.

## ಚುನಾವಣೆ ಮುಗಿದರೂ ಕರ್ತವ್ಯ ಮರೆಯದ ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ: ವಿಧಾನ ಸಭೆ ಚುನಾವಣೆ ಮುಗಿದ ತಕ್ಷಣ ಬಹುತೇಕ ರಾಜಕಾರಣಿಗಳು ವಿಶ್ರಾಂತಿಗೆ ಶರಣಾಗಿದ್ದರೆ ಬೆಳಗಾವಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ, ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಎಂದಿನಂತೆ ತಮ್ಮ ಕೆಲಸದಲ್ಲಿ ಮಗ್ನರಾಗಿದ್ದಾರೆ.

ಗುರುವಾರ ಲಕ್ಷ್ಮೀ ಹೆಬ್ಬಾಳಕರ್ ಅವರು ತಮ್ಮ ಗೃಹ ಕಚೇರಿಯಲ್ಲಿ ಕಾರ್ಯಕರ್ತರ ಆರೋಗ್ಯ, ಚುನಾವಣೆ ಕೆಲಸ, ಮತದಾನದ ಪ್ರಮಾಣಗಳ ಕುರಿತು ತಮ್ಮ ಕಾರ್ಯಕರ್ತರ ಜೊತೆ ಸಮಾಲೋಚನೆ ನಡೆಸಿದರು.

ನಂತರ ಬೆಳಗಾವಿ ಮತ್ತು ಹಿರೇ ಬಾಗೇವಾಡಿಯಲ್ಲಿ ಕಾರ್ಯಕರ್ತರ ಮನೆಯ ಮದುವೆಗಳಲ್ಲಿ ಭಾಗಿಯಾಗಿ ನವ ಜೋಡಿಗಳಿಗೆ ಶುಭ ಕೋ–ರಿದರು.

ಕಳೆದ 5 ವರ್ಷಗಳಿಂದಲೂ ಸದಾ ಕ್ಷೇತ್ರದ ಕೆಲಸದಲ್ಲೇ ತೊಡಗಿಕೊಳ್ಳುವ ಲಕ್ಷ್ಮೀ ಹೆಬ್ಬಾಳಕರ್, ಅನಾರೋಗ್ಯದ ಸಂದರ್ಭ ಹೊರತುಪಡಿಸಿ ವಿಶ್ರಾಂತಿ ಪಡೆಯುವುದೇ ಇಲ್ಲ.

ಚುನಾವಣೆ ಮುಗಿದರೂ ಅವರು ವಿಶ್ರಾಂತಿ ಪಡೆಯದೆ ತಮ್ಮ ಎಂದಿನ ಕಾರ್ಯಚಟುವಟಿಕೆ ಮುಂದುವರಿಸಿದರು.

## ಜಿಲ್ಲೆಯ ವಿಕಲ ಚೇತನರಿಂದ ಪ್ರತಿಶತ ಶೇ.75.24 ರಷ್ಟು ಮತದಾನ

ಬೆಳಗಾವಿ: ಕರ್ನಾಟಕ ರಾಜ್ಯ ವಿಧಾನಸಭೆ ಸಾರ್ವತ್ರಿಕ ಚುನಾವಣೆ–2023 ರ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯಾದ್ಯಂತ ವಿಕಲಚೇತನ–ರಿಂದ ಪ್ರತಿಶತ ಶೇ.75.24 ರಷ್ಟು ಮತದಾನವಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಚುನಾವಣಾಧಿಕಾರಿ ಗಳು ಹಾಗೂ ಜಿಲ್ಲಾಧಿಕಾ–ರಿಗಳು ಮತ್ತು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾ–ರಿಗಳು ಇವರ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ವಿಕಲಚೇತನ



ಮತದಾರರು ಮತದಾನ ಮಾಡಲು ಅನುಕೂಲವಾಗುವ ನಿಟ್ಟಿನಲ್ಲಿ 18 ವಿಧಾನಸಭಾ ಮತ ಕ್ಷೇತ್ರಗಳಲ್ಲಿನ ಎಲ್ಲಾ ಮತಗಟ್ಟೆಗಳಲ್ಲಿ ಬರುವ ವಿಕಲಚೇನ–ರಿಗೆ ಅಗತ್ಯ ಮೂಲಭೂತ ಸೌಕರ್ಯ ಗಳಾದ, ಗಾಲಿಖುರ್ಚಿ, ಭೂತಕನ್ನಡಿ, ವಿಕಲಚೇತನಸ್ನೇಹಿ ವಿಶೇಷ ಮತಗಟ್ಟೆಗಳು, ರ್‍ಯಾಂಪ್/ರೇಲಿಂಗ್ಸ್ ವ್ಯವಸ್ಥೆ ಹಾಗೂ ಅಗತ್ಯವಿದ್ದಲ್ಲಿ ಮತದಾರರನ್ನು ಕರೆತರಲು ವಾಹನಗಳ ವ್ಯವಸ್ಥೆ, ಸ್ವಯಂ ಸೇವಕರು, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಅಡೆತಡೆರಹಿತ ಶೌಚಾಲಯ ವ್ಯವಸ್ಥೆ ಮುಂತಾದ ಎಲ್ಲಾ ಸೌಲಭ್ಯಗಳನ್ನು ಒದಗಿಸಲಾಗಿತ್ತು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿ ಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂಗೈಕ್ಯ ಸಿದ್ಧರಾಮೇಶ್ವರ ಜಗದ್ಗುರುಗಳ 44ನೇ ಪುಣ್ಯಾರಾಧನೆ ಕಾರ್ಯಕ್ರಮ

ಗೋಕಾಕ: 'ಸಾವಳಗಿಯ ಲಿಂಗೈಕ್ಯ ಸಿದ್ಧರಾಮೇಶ್ವರ ಜಗದ್ಗುರುಗಳು ಶಿಕ್ಷಣ ಮತ್ತು ಸಂಸ್ಕೃತಿಯ ಆರಾಧಕರಾಗಿದ್ದು, ಶಿವಯೋಗ ತತ್ವ, ಪರಂಪರೆಯನ್ನು ಬೆಳೆಸಿದ ಮಹಾ ಮಹಿಮಾ ಸತ್ಪುರುಷರು' ಎಂದು ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಸಾಹಿತಿ ಡಾ. ಚಂದ್ರಶೇಖರ ಕಂಬಾರ ಹೇಳಿದರು.

ತಾಲ್ಲೂಕಿನ ಸಾವಳಗಿಯ ಜಗದ್ಗುರ ಶಿವಲಿಂಗೇಶ್ವರ ಪೀಠದಲ್ಲಿ ಜರುಗಿದ ಲಿಂಗೈಕ್ಯ ಸಿದ್ಧರಾಮೇಶ್ವರ ಜಗದ್ಗುರುಗಳ 44ನೇ ಪುಣ್ಯಾರಾಧನೆ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು ಶ್ರೀಗಳು ಧಾರ್ಮಿಕ, ಸಾಮಾಜಿಕ ಹಾಗೂ ದಾರ್ಶನಿಕರಾಗಿ ಭಕ್ತರ ಹೃದಯದಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ ಎಂದರು.

1940ರ ದಶಕದಲ್ಲಿ ಹುಕ್ಕೇರಿ, ಗೋಕಾಕ ತಾಲ್ಲೂಕಿನ ಗ್ರಾಮಗಳಿಂದ ಮುಲ್ಕಿ ಕಲಿಯಲು ಮತ್ತು ಪರೀಕ್ಷೆ ಬರೆಯಲು



ಗೋಕಾಕಗೆ ಬರುತ್ತಿದ್ದ ಮಕ್ಕಳಿಗೆಲ್ಲ ಸಾವಳಗಿಯ ಮಠದಲ್ಲಿ ಅನ್ನಪ್ರಸಾದ ವ್ಯವಸ್ಥೆ ಇರುತಿತ್ತು. ಅದರಲ್ಲಿ ನಾನು ಒಬ್ಬ ವಿದ್ಯಾರ್ಥಿಯಾಗಿದ್ದೆ. ನನ್ನ ಏಳ್ಗೆಗೆ ಸಾವಳಗಿಯ ಶಿವಲಿಂಗೇಶ್ವರರ ಕೃಪೆ ದೊಡ್ಡದಿದೆ ಎಂದು ಕಂಬಾರ ಅವರುನೆನಪಿಸಿಕೊಂಡು ಕಣ್ಣಿರಾದರು.

ಈಗಿರುವ ಪೀಠದ ಜಗದ್ಗುರು ಶಿವಲಿಂಗೇಶ್ವರ ಕುಮಾರೇಂದ್ರ ಸನ್ನಿಧಿಯವರು ಶಿವಯೋಗ ಪರಂಪರೆಯನ್ನು ಕಟ್ಟು ನಿಟ್ಟಿನಿಂದ ಉಳಿಸಿಕೊಂಡು, ಬೆಳೆಸಿಕೊಂಡು ಬಂದಿದ್ದಾರೆ.

ಸಾವಳಗಿಯ ಮಠವು ಹಿಂದೂ ಮುಸ್ಲಿಂ ಸಮಾರಸ್ಯತೆಯನ್ನು ಬೆಳೆಸುವ ಅತ್ಯಂತ ಜಾಗೃತ ಮಠವಾಗಿದೆ ಎಂದರು.

ಪ್ರಸಕ್ತ 2023ಕ್ಕೆ ಜಗದ್ಗುರು ಶಿವಲಿಂಗೇಶ್ವರ ಕುಮಾರೇಂದ ಸನ್ನಿಧಿಯವರಿಗೆ 75 ವಸಂತಗಳನ್ನು ಪೂರೈಸಿದ್ದು.

ಈ ಸಂದರ್ಭದಲ್ಲಿ ಶ್ರೀಗಳಿಗೆ ಭಕ್ತ–ರಿಂದ ಅಭಿನಂದನೆಯ ಗ್ರಂಥವನ್ನು ಸಮರ್ಪಿಸುವ ಸಂಕಲ್ಪ ಮಾಡಲಾಗಿದ್ದು, ಎಲ್ಲ ಭಕ್ತರು ಸೇರಿ ಅದನ್ನು ಈಡೇ–ರಿಸೋಣ ಎಂದರು.

ಅತಿಥಿ ಬೆಳಗಾವಿಯ ವಕೀಲ, ಸಾಹಿತಿ ರವೀಂದ್ರ ತೋಟಿಗೇರ ಮಾತನಾಡಿ 'ಧರ್ಮ ಸಂಹಿಷ್ಣುತೆಯ ಸಾವಳಗಿಯ ಪೀಠವು ಸಮಾಜದಲ್ಲಿ ಸಾಮರಸ್ಯತೆ ಮತ್ತು ಸಂಸ್ಕೃತಿಯನ್ನು ಬೆಳೆಸುತ್ತಲಿದೆ ಎಂದರು.

ಸಾನ್ನಿಧ್ಯವಹಿಸಿದ್ದ ಜಗದ್ಗುರು ಶಿವಲಿಂಗೇಶ್ವರ ಕುಮಾರೇಂದ್ರ ಸನ್ನಿಧಿಯವರು ಸಮಾರಂಭವನ್ನು ಉದ್ಘಾಟಿಸಿ ಆಶೀರ್ವಚನ ನೀಡಿದರು.

ಕಡಣಿಯ ವೇದಮೂರ್ತಿ ಚನ್ನವೀರಸ್ವಾಮಿ ಹಿರೇಮಠ ಅವರು ಕೀರ್ತನೆ ಮಾಡಿದರು.

ಶಿವಕುಮಾರ ಗವಾಯಿಗಳು, ಗಾನಭೂಷಣ ವೀರೇಶ ಕಿತ್ತೂರ ಅವ–ರಿಂದ ಸಂಗೀತ ಗೋಷ್ಠಿ ಜರುಗಿ–ತು. ನಾಡಿನ ವಿವಿಧೆಡೆಯಿಂದ ಭಕ್ತರು ಭಾಗವಹಿಸಿದರು.

ಸಂಚಾಲಕ ಬಾಲಶೇಖರ ಬಂದಿ ಪ್ರಾಸ್ತಾವಿಕ ಮಾತನಾಡಿದರು. ಬೆಳಗಾವಿಯ ರೋಹಿಣಿ ಬಂಗಾರಿ ನಿರೂಪಿಸಿದರು.

ಬೆಳಿಗ್ಗೆ ಸಿದ್ದರಾಮೇಶ್ವರ ಗದ್ದುಗೆಗೆ ವಿಶೇಷ ಪೂಜೆ, ಮೂಲ ಸನ್ನಿಧಿಗೆ ಅಭಿಷೇಕ ಜರುಗಿತು. ಬೆಳಿಗ್ಗೆಯಿಂದ ಭಕ್ತರಿಗೆ ದಾಸೋಹ ಜರುಗಿತು.

# ದೆಹಲಿಯಲ್ಲಿ ಕೆಲಸದ ವೇಗ ಬಹುಪಟ್ಟು ಹೆಚ್ಚುತ್ತದೆ; ಕೆಲಸಕ್ಕೆ ಅಡ್ಡಿಪಡಿಸಿದ ಅಧಿಕಾರಿಗಳು ಕ್ರಮ: ಕೇಜ್ರಿವಾಲ್

ನವದೆಹಲಿ: ಆಡಳಿತಾತ್ಮಕ ಸೇವೆಗಳ ಕು–ರಿತು ಸುಪ್ರೀಂ ಕೋರ್ಟ್ ತೀರ್ಪು ನೀಡಿದ್ದು, ರಾಷ್ಟ್ರ ರಾಜಧಾನಿಯಲ್ಲಿ ಕೆಲಸದ ವೇಗವು ಹಲವಾರು ಪಟ್ಟು ಹೆಚ್ಚಾಗುತ್ತದೆ ಮತ್ತು ಜನರ ಕೆಲಸಕ್ಕೆ ಅಡಚಣೆ ಉಂಟು ಮಾಡುವ ಅಧಿಕಾರಿಗಳು ಶೀಘ್ರದಲ್ಲೇ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಗುರುವಾರ ಹೇಳಿದ್ದಾರೆ.

ಸಾರ್ವಜನಿಕ ಸುವ್ಯವಸ್ಥೆ, ಪೊಲೀಸ್ ಮತ್ತು ಭೂಮಿಯನ್ನು ಹೊರತುಪಡಿಸಿ ಸೇವೆಗಳ ಮೇಲೆ ದೆಹಲಿ ಸರ್ಕಾರವು ಶಾಸಕಾಂಗ ಮತ್ತು ಕಾರ್ಯಾಂಗ ಅಧಿಕಾರವನ್ನು ಹೊಂದಿದೆ ಎಂದು ಸರ್ವೋಚ್ಚ ನ್ಯಾಯಾಲಯವು ತೀರ್ಪು ನೀಡಿದ ನಂತರ ಕೇಜ್ರಿವಾಲ್ ಹೇಳಿಕೆ ನೀಡಿದ್ದಾರೆ.

ರಾಷ್ಟ್ರ ರಾಜಧಾನಿಯಲ್ಲಿನ ಅಧಿಕಾರ ಸಂಬಂಧ ದೆಹಲಿ ಸರ್ಕಾರ ಹಾಗೂ ಲೆಫ್ಟಿನೆಂಟ್ ಗವರ್ನರ್ ನಡುವೆ ಉಂಟಾಗಿದ್ದ ವಿವಾದ ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು.

ಈ ಪ್ರಕರಣದ ವಿಚಾರಣೆ ನಡೆಸಿದ ಐವರು ನ್ಯಾಯಮೂರ್ತಿಗಳಿದ್ದ ಸಂವಿಧಾನಿಕ ಪೀಠ, ಜನರಿಂದ ಆಯ್ಕೆಯಾದ ಸರ್ಕಾರಕ್ಕೆ



ಆಡಳಿತಾತ್ಮಕ ವಿಷಯಗಳ ಬಗ್ಗೆ ನಿಯಂತ್ರಣ ಇರಬೇಕು ಎಂದು ಸರ್ವಾನುಮತದ ತೀರ್ಪು ನೀಡಿದೆ.

ಈ ಮೂಲಕ ಕೇಂದ್ರ ಸರ್ಕಾರ ಹಾಗೂ ದೆಹಲಿ ಸರ್ಕಾರದ ನಡುವಣ ಹಗ್ಗ ಜಗ್ಗಾಟದಲ್ಲಿ ಆಮ್ ಆದ್ಮಿ ಸರ್ಕಾರದ ಕೈ ಮೇಲಾಗಿದೆ.

ದೆಹಲಿ ಸಚಿವಾಲಯದಲ್ಲಿ ತಮ್ಮ ಸಂಪುಟ ಸಹೋದ್ಯೋಗಿಗಳೊಂದಿಗೆ ಸಭೆ ನಡೆಸಿದ ನಂತರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕೇಜ್ರಿವಾಲ್, ದೆಹಲಿಯ ಜನರ ಕೆಲಸಕ್ಕೆ ಅಡ್ಡಿಪಡಿಸುವ ಅಧಿಕಾರಿಗಳು ಮುಂದಿನ ದಿನಗಳಲ್ಲಿ ಕಠಿಣ ಕ್ರಮವನ್ನು ಎದುರಿಸಲಿದ್ದಾರೆ. 'ನನ್ನ ಕೈಗಳನ್ನು ಕಟ್ಟಿ ಈಜಲು ನೀರಿನಲ್ಲಿ ಎಸೆಯಲಾಗಿತ್ತು.

ಆದರೆ, ನಾವು ತೇಲುವಲ್ಲಿ ಯಶಸ್ವಿಯಾಗಿದ್ದೇವೆ. ಎಲ್ಲಾ ಅಡೆತಡೆಗಳ ನಡುವೆಯೂ ನಾವು ದೆಹಲಿಯಲ್ಲಿ ಉತ್ತಮ ಕೆಲಸ ಮಾಡಿದೆವು' ಎಂದು ಅವರು ಹೇಳಿದರು.

ತಮ್ಮ ಹೋರಾಟದುದ್ದಕ್ಕೂ ತಮ್ಮನ್ನು ಬೆಂಬಲಿಸಿದ್ದಕ್ಕಾಗಿ ದೆಹಲಿಯ ಜನತೆಗೆ ಧನ್ಯವಾದ ಅರ್ಪಿಸಿದ ಕೇಜ್ರಿವಾಲ್, 'ನೇರ, ಸ್ಪಂದಿಸುವ ಮತ್ತು ಸಹಾನುಭೂತಿಯುಳ್ಳ ಸರ್ಕಾರವನ್ನು ನಿರ್ಮಿಸಲು ಕೆಲಸ ಮಾಡುತ್ತೇನೆ' ಎಂದು ಹೇಳಿದರು.

'ನಾವು ದೇಶಕ್ಕೆ ಶಿಕ್ಷಣದ ಮಾದ–ರಿಯನ್ನು ನೀಡಿದ್ದೇವೆ. ಕೆಲಸ ಈಗ ಮೊದಲು ನಡೆಯುತ್ತಿದ್ದ 10 ಪಟ್ಟು ವೇಗದಲ್ಲಿ ನಡೆಯುತ್ತದೆ.

ದೆಹಲಿಯು ಈಗ ಇಡೀ ದೇಶಕ್ಕೆ ಸಮರ್ಥ ಆಡಳಿತದ ಮಾದರಿಯನ್ನು ಪ್ರಸ್ತುತಪಡಿಸುತ್ತದೆ. ಎಲ್‌ಜಿ ವಿಕೆ ಸಕ್ಸೇನಾ ಅವರನ್ನು ಭೇಟಿ ಮಾಡಿ ಅವರ ಆಶೀರ್ವಾದ ಪಡೆಯುವುದಾಗಿ ಹೇಳಿದರು.

ಭ್ರಷ್ಟಾಚಾರ ನಿಗ್ರಹ ದಳದ ಬಗ್ಗೆ ಕೇಳಿದ ಪ್ರಶ್ನೆಗೆ, ಎಸಿಬಿ ನಮ್ಮೊಂದಿಗಿಲ್ಲ. ಆದ–'ರೆ, ವಿಜಿಲೆನ್ಸ್ ಈಗ ನಮ್ಮೊಂದಿಗೆ ಇರುತ್ತದೆ. ಸರಿಯಾಗಿ ಕೆಲಸ ಮಾಡದ ಅಧಿಕಾ–ರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಬಹುದು ಎಂದರು.

## ಪ್ರತಿಭಾವಂತ ವಿದ್ಯಾರ್ಥಿಗಳ ಸತ್ಕಾರ ಸಮಾರಂಭ

ಗೋಕಾಕ: ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಸಪ್ತರ್ಷಿಗಳು ಸ್ಥಾಪಿಸಿದ ಕೆ–ಎಲ್‌ಇ ಸಂಸ್ಥೆ ಶೈಕ್ಷಣಿಕ ಪ್ರಗತಿಗೆ ಶ್ರಮಿಸುತ್ತಿದೆ ಎಂದು ಕೆಎಲ್‌ಇ ನಿರ್ದೇಶಕ ಜಯಾನಂದ ಮುನ್ನವಳ್ಳಿ ಹೇಳಿದರು.

ಗುರುವಾರದಂದು ನಗರದ ಕೆಎಲ್‌ಇ ಸಂಸ್ಥೆಯ ಸಿ.ಎಸ್. ಅಂಗಡಿ ಪದವಿಪೂರ್ವ ಕಾಲೇಜಿನಲ್ಲಿ ತಾಲ್ಲೂಕಿನ ವಿವಿಧ ಶಾಲೆಗಳ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಾಗಿ ಹಮ್ಮಿಕೊಂಡ ಸ್ಕಾಲರಿಸಿಫ್ ಪರೀಕ್ಷೆಯಲ್ಲಿ




ಯಾರ್ಂಕ್ ಪಡೆದ ವಿದ್ಯಾರ್ಥಿಗಳ ಸತ್ಕಾರ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡುತ್ತಾ 600 ವಿದ್ಯಾರ್ಥಿಗಳು ಪಾಲ್ಗೊಂಡ ಈ ಪರೀಕ್ಷೆಯಲ್ಲಿ ಯಾರ್ಂಕ್ ಪಡೆದ 50 ವಿದ್ಯಾರ್ಥಿಗಳನ್ನು ಸತ್ಕರಿಸಿ ಪ್ರೋತ್ಸಾಹಿಸಲಾಗುತ್ತಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ದಿಂದ ಪ್ರತಿಭಾವಂತರಾಗಿ ಎಂದು ಕರೆ ನೀಡಿದರು.

ವೇದಿಕೆಯಲ್ಲಿ ಆಡಳಿತಾಧಿಕಾರಿ ಜಿ ಎಂ ಅಂದಾನಿ, ಪ್ರಾಚಾರ್ಯರಾದ ಕೆ ಬಿ ಮೆವುಂಡಿಮಠ, ಅಮೃತ ಜಕ್ಕಲಿ ಇದ್ದರು.

## ವಿಶ್ರಾಂತಿಯಲ್ಲಿ ಬಿ.ಶ್ರೀರಾಮುಲು, ಪ್ರಸ್ತುತ ರಾಜಕೀಯ ಕುರಿತು ಚರ್ಚೆ

ಬಳ್ಳಾರಿ: ಕಳೆದ ಒಂದು ತಿಂಗಳು ಸತತ ಪ್ರವಾಸ ಕೈಗೊಂಡು ಚುನಾವಣೆ ಪ್ರಚಾರದಲ್ಲಿ ಇನ್ನಿಲ್ಲದಂತೆ ತಮ್ಮನ್ನು ತೊಡಗಿಸಿಕೊಂಡಿದ್ದ ಸಚಿವ ಬಿ.ಶ್ರೀರಾಮುಲು ಅವರು ತಮ್ಮ ನಿವಾಸದಲ್ಲಿ ಗುರುವಾರದಂದು ರಿಲ್ಯಾಕ್ಸ್ ಮೂಡ್‌ನಲ್ಲಿದ್ದರು. ಬೆಳಿಗ್ಗೆ ಉಪಹಾರ ಸೇವನೆಯ ಬಳಿಕ ಮೊಬೈಲ್ ನಲ್ಲಿ ಬರುವ ಸಂದೇಶಗಳನ್ನು ಗಮನಿಸುತ್ತಾ, ತಮ್ಮ ಸ್ನೇಹಿತರು, ಹಿತೈಷಿಗಳು ಮತ್ತು ರಾಜಯಿಕೀಯ ಸಂಬಂಧಿತ ಗೆಳೆಯರೊಂದಿಗೆ ಪ್ರಸ್ತುತ ರಾಜ–ಕೀಯ ವಿದ್ಯಮಾನಗಳ ಕು–ರಿತು ಚರ್ಚಿಸುತ್ತಿರುವುದು ಕಂಡು ಬಂದಿತು.

ಬಳ್ಳಾರಿ ಗ್ರಾಮಾಂತರ ವಿಧಾನಸಭಾ



ಚುನಾವಣೆಗೆ ಭಾರತೀಯ ಜನತಾ ಪಾರ್ಟಿ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದ ಅವರು, ಕ್ಷೇತ್ರದ ಹಲವಾರು ಹಳ್ಳಿಗಳಿಗೆ ತೆರಳಿ ಮತ ಪ್ರಚಾರ ಕೈಗೊಂಡಿದ್ದರು. ಕೌಲ್ ಬಜಾರ್ ಪ್ರದೇಶದ 11 ವಾರ್ಡುಗಳಲ್ಲೂ ಸಹ ಮತ ಪ್ರಚಾರ ಕೈಗೊಂಡು ಬುಧವಾರ ದಿನ ನಡೆದ ಮತದಾನಕ್ಕೆ ಸಂಬಂಧಿಸಿದಂತೆ ಶೇಕಡಾವಾಡು ಅಂಕಿ ಅಂಶಗಳನ್ನು ಅವಲೋಕಿಸಿದರು.

ಬಳ್ಳಾರಿ ಗ್ರಾಮಾಂತರ ಕ್ಷೇತ್ರದಿಂದಲೇ ತಮ್ಮ ರಾಜಕೀಯ ಭವಿಷ್ಯ ಆರಂಭಿಸಿದ್ದ ಅವರು ಶಾಸಕರಾಗಿ, ಸಚಿವರಾಗಿ ರಾಜ್ಯಮಟ್ಟದ ನಾಯಕರಾಗಿ ಹೊರ ಹೊಮ್ಮಿರುವುದು ವಿಶೇಷ. ವಾಲ್ಮೀಕಿ ನಾಯಕ ಸಮುದಾಯದ ಬಹುದೊಡ್ಡ ನಾಯಕರೂ ಆಗಿರುವ ಬಿ.ಶ್ರೀರಾಮುಲು ಅವರು ಕಳೆದ 10 ವರ್ಷದಿಂದ ತಮ್ಮ ತವರು ಕ್ಷೇತ್ರ ಬಳ್ಳಾರಿ ಗ್ರಾಮಾಂತರದಿಂದ ದೂರವೇ ಇದ್ದರು.

ಇದೀಗ ಮತ್ತೆ ಪಕ್ಷವು ಗ್ರಾಮಾಂತರ ಕ್ಷೇತ್ರದಿಂದ ಸ್ಪರ್ಧಿಸಲು ಅವಕಾಶ ನೀಡಿದ್ದು, ತುಂಬಾ ಉತ್ಸಾಹದಿಂದಲೇ ಕ್ಷೇತ್ರದ ಜನರನ್ನು ಭೇಟಿಯಾಗಿ ಮತ ಯಾಚಿಸಿ ಮತ್ತೊಮ್ಮೆ ಗೆಲ್ಲಿಸಿಕೊಡುವಂತೆ ಮನವಿ ಮಾಡಿದ್ದರು. ಮೇ 13 ರಂದು ನಡೆಯಲಿರುವ ಮತ ಎಣಿಕೆ ವೇಳೆಗೆ ಸಮುಯದ ಗಣನೆ ಆರಂಭವಾಗಿದ್ದು ಇಂದು ಮತ್ತು ನಾಳೆ ಸಚಿವ ಬಿ.ಶ್ರೀರಾಮುಲು ನಿವಾಸದಲ್ಲೇ ಇರಲಿದ್ದಾರೆ. ತಮ್ಮ ಕುಟುಂಬ ಸದಸ್ಯರೊಂದಿಗೆ ವಿಶ್ರಾಂತಿ ಪಡೆಯುವುದರ ಮೂಲಕ ಕ್ಷಣ ಕ್ಷಣದ ಸುದ್ದಿಗಳು ಹಾಗೂ ಆಪ್ತರೊಂದಿಗೆ ಸಮಾಲೋಚನೆ ನಡೆಸಲಿದ್ದಾರೆ ಎಂದು ಸಚಿವರ ಕಚೇರಿ ಮೂಲಗಳು ತಿಳಿಸಿವೆ.

## ಮಕ್ಕಳು ಬುದ್ಧನ ಆದರ್ಶಗಳನ್ನು ಮೈಗೂಡಿಸಿ ಕೊಳ್ಳಬೇಕು: ರವಿ ಚೆಳ್ಳಗುರ್ಕಿ

ಬಳ್ಳಾರಿ: ಮೌಢ್ಯ ತ್ಯಜಿಸಿ ಬೌದ್ಧಿಕ ಪ್ರಬುದ್ಧತೆ ಪಡೆದು ದಯೆ, ಕರುಣೆ,ಪ್ರಾಣಿಕತೆ ಹಾಗೂ ಸತ್ಯ ಸಂದೇಶವನ್ನು ಜಗತ್ತಿಗೆ ಸಾರಿದವರು ಗೌತಮ ಬುದ್ಧರು ಎಂದು ಕರ್ನಾಟಕ ರಾಜ್ಯ ಕ್ರಿಯಾಶೀಲ ಶಿಕ್ಷಕರ ವೇದಿಕೆ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ರವಿ ಚೇಳ್ಳಗುರ್ಕಿ ಅಭಿಪ್ರಾಯ ಪಟ್ಟರು.

ತಾಲ್ಲೂಕಿನ ಸಂಜೀವರಾಯನ ಕೋಟೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಗೌತಮ ಬುದ್ಧರ ಜಯಂತಿಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು ದುಃಖ, ದುಃಖದ ಹುಟ್ಟು, ದುಃಖ ಅಡಗಿಸುವಿಕೆ ಹಾಗೂ ದುಃಖ ನಿವಾರಣೆಗೆ ಇರುವ ಅಷ್ಟಾಂಗ ಮಾರ್ಗಗಳನ್ನು ತಿಳಿಸಿದರು.



ಆಸೆಯೇ ದುಃಖಕ್ಕೆ ಮೂಲ ಕಾರಣ.ಸಿದ್ಧಾರ್ಥ ತನ್ನ ತಪ ಶಕ್ತಿಯಿಂದ ಬುದ್ಧನಾದ.ಬುದ್ಧ ಎಂದರೆ ಎಲ್ಲವನ್ನೂ ತಿಳಿದವನು ಎಂದರ್ಥ.ಆದ್ದರಿಂದ ಮಕ್ಕಳು ಚಿಕ್ಕಂದಿನಿಂದಲೇ ಸತ್ಯ ಹೇಳುವುದನ್ನು ಕಲಿಯಬೇಕು. ಜೊತೆಗೆ ಬುದ್ಧನ ಆದರ್ಶಗಳನ್ನು ಮೈಗೂಡಿಸಿ ಕೊಳ್ಳಬೇಕು ಎಂದರು.ಅತಿಥಿ ಶಿಕ್ಷಕ ಗುರುಪ್ರಸಾದ್ ಪೂಜೆ ನೆರವೇ–ರಿಸಿದರು.

ಗ್ರಾಮ ಪಂಚಾಯಿತಿ ನೌಕರ ಗಾದಿಲಿಂಗಪ್ಪ,ಅತಿಥಿ ಶಿಕ್ಷಕ ಸುಂಕಪ್ಪಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಪ್ರೀತಿ ನಿರಾಕರಿಸಿದ್ದಕ್ಕೆ ಬಾಲಕಿ ಮೇಲೆ ಮಚ್ಚಿನಿಂದ ಹಲ್ಲೆ

ಹಾಸನ: ಪ್ರೀತಿ ನಿರಾಕರಿಸಿದ್ದಕ್ಕೆ 17 ವರ್ಷದ ಅಪ್ರಾಪ್ತ ಬಾಲಕಿಂ–ು ಮೇಲೆ ಪಾಗಲ್ ಪ್ರೇಮಿಯೊಬ್ಬ ಮಚ್ಚಿನಿಂದ ಹಲ್ಲೆ ನಡೆಸಿದ ಘಟನೆ ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲೂಕಿನ ಭಟ್ಟರಹಳ್ಳಿ ಗ್ರಾಮದಲ್ಲಿ ಘಟನೆ ನಡೆದಿದೆ.



ಗ್ರಾಮದ 25 ವರ್ಷದ ವಿನಯ್ ಕುಮಾರ್ ಎಂಬಾತನಿಂದ ಹಲ್ಲೆ ನಡೆದಿದೆ. ಬಾಲಕಿ ಕತ್ತಿಗೆ ಮಚ್ಚಿನಿಂದ ಬರ್ಬರವಾಗಿ ಹಲ್ಲೆ ಮಾಡಲಾಗಿದ್ದು, ಬಾಲಕಿಯ ಪರಿಸ್ಥಿತಿ ಗಂಭೀರವಾಗಿದೆ.

ಕೂಡಲೇ ಬಾಲಕಿಯನ್ನ ಹಾಸನ ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಸಾವು ಬದುಕಿನ ನಡುವೆ ಆಕೆ ಹೋರಾಡುತ್ತಿದ್ದಾಳೆ.

ಈ ಕುರಿತು ಹುಳಿಯಾರು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

### ಮೇ.13 ರ ಬೆಳಿಗ್ಗೆ 8 ಗಂಟೆಯಿಂದ ಮತ ಎಣಿಕೆ ಆರಂಭ ; ಮತ ಎಣಿಕಾ ಕೇಂದ್ರಕ್ಕೆ 375 ಸಿಬ್ಬಂದಿಗಳ ನಿಯೋಜನೆ

# ಮತ ಎಣಿಕಾ ಕೇಂದ್ರಕ್ಕೆ ಮೂರು ಸುತ್ತಿನ ಪೊಲೀಸ್ ಭದ್ರತೆ ; ಪಾರದರ್ಶಕ, ನಿಷ್ಪಕ್ಷಪಾತ ಮತ ಎಣಿಕೆಗೆ ಕ್ರಮ: ಗುರುದತ್ತ ಹೆಗಡೆ

ಧಾರವಾಡ: ಕರ್ನಾಟಕ ರಾಜ್ಯ ವಿಧಾನಸಭೆ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ನಿನ್ನೆ (ಮೇ.10) ಜಿಲ್ಲೆಯ 7 ವಿಧಾನಸಭಾ ಮತಕ್ಷೇತ್ರಗಳಲ್ಲಿ ಶಾಂತಿಯುತವಾಗಿ ಜರುಗಿದ ಮತದಾನದಲ್ಲಿ ಒಟ್ಟು 11,18,750 ಜನ ಮತದಾರರು ತಮ್ಮ ಮತ ಚಲಾಯಿಸಿದ್ದು, ಶೇ.73.45 ರಷ್ಟು ಮತದಾನವಾಗಿದೆ. ಮೇ.13 ರ ಬೆಳಿಗ್ಗೆ 8 ಗಂಟೆಯಿಂದ ಧಾರವಾಡ ಕೃಷಿ ವಿಶ್ವವಿದ್ಯಾಲಯದ ಮುಖ್ಯ ಕಟ್ಟಡದಲ್ಲಿ ಸ್ಥಾಪಿಸಿರುವ ಮತ ಎಣಿಕಾ ಕೇಂದ್ರದಲ್ಲಿ ಮತಗಳ ಎಣಿಕೆ ಆರಂಭವಾಗಲಿದೆ ಎಂದು ಜಿಲ್ಲಾಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಅವರು ತಿಳಿಸಿದರು.

ಅವರು ಇಂದು ಬೆಳಿಗ್ಗೆ ಕೃಷಿ ವಿಶ್ವವಿದ್ಯಾಲಯದ ಮತ ಎಣಿಕೆ ಕೇಂದ್ರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ಮತ ಎಣಿಕಾ ಕಾರ್ಯದ ಸಿದ್ಧತೆಗಳನ್ನು ವಿವರಿಸಿದರು.

ಮತ ಎಣಿಕಾ ಕಾರ್ಯವು ಪಾರದರ್ಶಕವಾಗಿ ಮತ್ತು ನಿಷ್ಪಕ್ಷಪಾತವಾಗಿ ಜರುಗಲು ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳಲಾಗಿದೆ. ಅಭ್ಯರ್ಥಿಗಳು, ಅಭ್ಯರ್ಥಿಗಳ ಪ್ರತಿನಿಧಿಗಳು, ಮಾಧ್ಯಮ ಪ್ರತಿನಿಧಿಗಳು, ಮತ ಎಣಿಕಾ ಸಿಬ್ಬಂದಿಗಳು ಮತ್ತು ಚುನಾವಣೆಗೆ ಸಂಬಂಧಿಸಿದ ಹಿರಿಯ ಅಧಿಕಾರಿಗಳು ಮತ ಎಣಿಕಾ ಕೇಂದ್ರಕ್ಕೆ ಆಗಮಿಸಲು ಪ್ರತ್ಯೇಕ ಪ್ರವೇಶ ಮಾರ್ಗಗಳನ್ನು ಮಾಡಲಾಗಿದೆ ಎಂದು ಹೇಳಿದರು.

ಮತ ಎಣಿಕಾ ಕೇಂದ್ರಕ್ಕೆ ನಿರಂತರ 24 ಗಂಟೆಯ ಸಿಸಿ ಟಿವಿ ಕಣ್ಗಾವಲು ಇಡಲಾಗಿದೆ. ಮತ ಎಣಿಕಾ ದಿನದಂದು ಸೂಕ್ತ ಭದ್ರತೆ ಹಾಗೂ ಶಾಂತಿ, ಸುವ್ಯವಸ್ಥೆ ಕಾಪಾಡಲು ಅಗತ್ಯ ಬಂದೋಬಸ್ತ್ ಕೈಗೊಳ್ಳಲಾಗಿದೆ. ಅರೆಸೇನಾಪಡೆ, ರಾಜ್ಯ ಪೊಲೀಸ್ ಪಡೆಯಿಂದ ಮತ ಎಣಿಕಾ ಕೇಂದ್ರಕ್ಕೆ ಮೂರು ಸುತ್ತಿನ ಭದ್ರತೆಯನ್ನು ನೀಡಲಾಗಿದೆ. ಯಾವುದೇ ರೀತಿಯ ಅಹಿತಕರ ಘಟನೆ, ನಿಯಮಗಳ ಉಲ್ಲಂಘನೆ ಆಗದಂತೆ ಮುಂಜಾಗೃತಾ



ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಮತ ಎಣಿಕಾ ಕೇಂದ್ರಕ್ಕೆ ಆಗಮಿಸುವ ಅಭ್ಯರ್ಥಿಗಳು, ಅಭ್ಯರ್ಥಿಗಳ ಏಜೆಂಟರು, ಆಯಾ ಮತ ಕ್ಷೇತ್ರದ ಚುನಾವಣಾಧಿಕಾರಿಗಳು ನೀಡಿರುವ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಧರಿಸಿರಬೇಕು. ಸೂಚಿತ ಮಾರ್ಗಗಳಲ್ಲಿ ಮತ್ತು ಪ್ರವೇಶ ದ್ವಾರಗಳ ಮೂಲಕ ಸಂಚರಿಸಿ, ಸಹಕರಿಸಬೇಕು ಎಂದು ಅವರು ತಿಳಿಸಿದರು.

ಮತ ಎಣಿಕಾ ಕಾರ್ಯವು ಸುಗಮವಾಗಿ ಮತ್ತು ಸುಸೂತ್ರವಾಗಿ ಯಾವುದೇ ಗೊಂದಲಗಳಿಲ್ಲದೆ ಪಾರದರ್ಶಕವಾಗಿ ನಡೆಯಲು ಅನುಕೂಲವಾಗುವಂತೆ ಮತ ಎಣಿಕಾ ಸಿಬ್ಬಂದಿಗಳಿಗೆ ಈಗಾಗಲೇ ತರಬೇತಿಯನ್ನು ನೀಡಲಾಗಿದೆ. ಮತ್ತು ಸುಪರ್ವೈಸರ್, ಕೌಂಟಿಂಗ್ ಅಸಿಸ್ಟಂಟ್ ಹಾಗೂ ಅಬ್ಸರ್ವರ್ಗಳು ಸೇರಿದಂತೆ ಒಟ್ಟು 375 ಜನರನ್ನು ಮತ ಎಣಿಕಾ ಕಾರ್ಯಕ್ಕೆ ನಿಯೋಜಿಸಲಾಗಿದೆ. ಪ್ರತಿ ಮತಕ್ಷೇತ್ರಕ್ಕೆ ಒಟ್ಟು 14 ಟೇಬಲ್ಗಳನ್ನು ಮಾಡಲಾಗಿದ್ದು, ಮತ ಎಣಿಕೆ ಸುಸೂತ್ರವಾಗಿ ನಡೆಯಲಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಸುಮಾರು 8,500 ರಷ್ಟು ಅಂಚೆ ಮತಪತ್ರಗಳು ಬರುವ ನೀರಿಕ್ಷೆ ಇದ್ದು, ಈಗಾಗಲೇ 6,000 ಕ್ಕೂ ಹೆಚ್ಚು ಅಂಚೆ ಮತಪತ್ರಗಳು ಬಂದಿವೆ.

ಮತ ಎಣಿಕಾ ದಿನವಾದ ಮೇ.13 ಬೆಳಿಗ್ಗೆ 7–59 ರ ವರೆಗೂ ಅಂಚೆ ಮತ ಪತ್ರ ಸ್ವೀಕರಿಸಲು ಚುನಾವಣಾ ಆಯೋಗದ ನಿಯಮಾವಳಿಯಂತೆ ಅವಕಾಶವಿದೆ ಎಂದು ಅವರು ತಿಳಿಸಿದರು. ಮತ ಎಣಿಕಾ ದಿನವಾದ ಮೇ.13 ರ ಬೆಳಿಗ್ಗೆ 6 ಗಂಟೆಯಿಂದ ಮೇ.14 ರ ಬೆಳಿಗ್ಗೆ 6 ಗಂಟೆಯವರೆಗೆ ಶಾಂತಿ, ಸುವ್ಯವಸ್ಥೆಯನ್ನು ಕಾಪಾಡಲು ಅನುವಾಗುವಂತೆ ಧಾರವಾಡ ಜಿಲ್ಲಾದ್ಯಂತ ಸಿಆರ್ಪಿಸಿ 1973 ರ ಕಲಂ 144 ಅನ್ವಯ ಪ್ರತಿಬಂಧಕಾಜ್ಞೆಯನ್ನು ಜಾರಿಗೊಳಿಸಲಾಗಿದೆ. ಮತ ಎಣಿಕಾ ಕೇಂದ್ರದಲ್ಲಿ ಹಾಗೂ ಮತ ಎಣಿಕಾ ಕೇಂದ್ರದ ಸುತ್ತಲಿನ ಪ್ರದೇಶದಲ್ಲಿ ಯಾವುದೇ ರೀತಿಯ ವಿಜಯೋತ್ಸವ ಆಚರಣೆಗೆ ಅವಕಾಶವಿರುವುದಿಲ್ಲ. ಪ್ರತಿಬಂಧಕಾಜ್ಞೆಯನ್ನು ಉಲ್ಲಂಘಿ–ಸುವವರ ವಿರುದ್ಧ ನಿಯಮಾನುಸಾರ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದರು.

## ಭೀಕರ ರಸ್ತೆ ಅಪಘಾತ: ಇಬ್ಬರು ಸಾವು, 7ಜನರಿಗೆ ಗಾಯ

ಚಿಕ್ಕಮಗಳೂರು : ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕಿನ ಮತಿಘಟ್ಟ ಕ್ರಾಸ್ ಬಳಿ ಬೆಂಗಳೂರು–ಶಿವಮೊಗ್ಗ ರಾ.ಹೆ.26ರಲ್ಲಿ ಕಾರು ಹಾಗೂ ಟಿಟಿ ವಾಹನದ ಮಧ್ಯೆ ಡಿಕ್ಕಿ ಸಂಭವಿಸಿ ಇಬ್ಬರು ಮೃತಪಟ್ಟಿದ್ದು, 7 ಜನ ಗಂಭೀರ ಗಾಯಗೊಂಡಿರುವ ಘಟನೆ ನಡೆದಿದೆ.

ಮೃತಪಟ್ಟವರು ಹೊನ್ನಾವರ ಮೂಲದ ಗಿರಿಧರ್ (46), ಮಯಾಂಕ್ (3) ಎಂದು ತಿಳಿದು ಬಂದಿದೆ. ಇನಯ ಟಿಟಿಯಲ್ಲಿದ್ದ 7ಮಂದಿ ಗಂಭೀರ ಗಾಯಗೊಂಡಿದ್ದಾರೆ ಎನ್ನಲಾಗಿದೆ.

ಗಿರಿಧರ್ ಎಂಬುವರ ಕುಟುಂಬ ಹೊನ್ನಾವರದಿಂದ ಕಾರಿನಲ್ಲಿ ಸಂಬಂಧಿಕರ ಮದುವೆಗೆ ತೆರಳುತ್ತಿದ್ದರು.

ಈ ವೇಳೆ ಟಿಟಿ ವಾಹನದಲ್ಲಿ ಕೇರಳ ಮೂಲದ ಪ್ರವಾಸಿಗರು, ಚಿಕ್ಕಮಗಳೂರಿಗೆ



ಆಗಮಿಸುತ್ತಿದ್ದರು.

ಈ ವೇಳೆ ಎರಡು ವಾಹನಗಳು ಮುಖಾಮುಖಿ ಡಿಕ್ಕಿ ಹೊಡೆದಿವೆ.

ಡಿಕ್ಕಿಯ ರಭಸಕ್ಕೆ ಇಬ್ಬರು ಮೃತಪಟ್ಟಿದ್ದು, 7 ಮಂದಿ ಗಂಭೀರ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಕೂಡಲೇ ಶಿವಮೊಗ್ಗದ ಆಸ್ಪತ್ರೆಗೆ ದಾಖಲಿಸಲಾಗಿದೆ.

## ವಿದ್ಯಾರ್ಥಿಗಳಿಗೆ ಟೆಕ್ನೊವಿಜನ್ 2ಕೆ23 ಪ್ರಾಜೆಕ್ಟ್ ಪ್ರದರ್ಶನ

ಚಿಕ್ಕೋಡಿ: ಕೆ. ಎಲ್. ಇ. ಇಂಜಿನಿಯರಿಂಗ್ ಕಾಲೇಜಿನಲ್ಲಿ ಥರಾಷ್ಟ್ರೀಯ ತಂತ್ರಜ್ಞಾನ ದಿನದ ನಿಮಿತ್ತ ಟೆಕ್ನಿಕಲ್ ಕ್ಲಬ್ ವತಿಯಿಂದ ಇನಸ್ಟಿಟ್ಯೂಟ್ ಇನ್ನೊವೆಶನ್ ಕೌನ್ಸಿಲ್ ಸಹಯೋಗದೊಂದಿಗೆ ಅಂತೀಮ ವರ್ಷದ ವಿದ್ಯಾರ್ಥಿಗಳಿಗೆ ಟೆಕ್ನೊವಿಜನ್ 2ಕೆ23 ಪ್ರಾಜೆಕ್ಟ್ ಪ್ರದರ್ಶನ ಹಾಗೂ ಸ್ಪರ್ಧೆ ಎರ್ಪಡಿಸಲಾಯಿತು.




ಈ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ. ಸಚೀನ ಸಬ್ನಿಸ್, ಅಧ್ಯಕ್ಷರು, ಲಘು ಉದ್ಯೋಗ ಭಾರತಿ, ಕರ್ನಾಟಕ ಮಾತನಾಡಿ, ಪ್ರಾಜೆಕ್ಟಗಳನ್ನ ಕೇವಲ ಮಾರ್ಕ್ಸಗಾಗಿ ಸಿದ್ದಪಡಿಸದೇ, ಅವುಗಳನ್ನ ಉತ್ತಮ ಗುಣಮಟ್ಟದ ಪ್ರಾಡಕ್ಟ್ ಆಗೀ ಪರಿವರ್ತಿಸಿ ಎಂದರು. ಇಂದು ನಮಗೆ ಸಂಶೋಧನೆ ಕೈಗೊಳ್ಳಲು ವಿಪುಲ ಅವಕಾಶವಿದೆ.

ಆದರೆ ನಾವಿನ್ಯತೆ ಕಂಡುಬರುತ್ತಿಲ್ಲ. ಪಾಶ್ಚಿಮಾತ್ಯ ದೇಶಗಳ ವಿಶ್ವವಿದ್ಯಾಲಯಗಳಲ್ಲಿ ಸಂಶೋಧನೆ ಜರುಗುತ್ತದೆ. ನಮ್ಮಲ್ಲಿಯು ಸಹಿತ ಪ್ರತಿ ಕಾಲೇಜು ಸಂಶೋಧನೆಗೆ ಒತ್ತು ನೀಡಬೇಕು. ಹೊಸ ವಿಕಲ್ಪಗಳನ್ನ ಸ್ಟಾರ್ಟಅಪ ಆಗೀ ಪರಿವರ್ತಿಸಿ. ಸಮಾಜದ ಕಟ್ಟಕಡೆಯ ವ್ಯಕ್ತಿಗೆ ಉಪಯುಕ್ತವಾಗುವ ರೀತಿಯಲ್ಲಿ ಪ್ರಾಜೆಕ್ಟಗಳನ್ನ ಸಿದ್ಧಪಡಿಸಿ ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಪ್ರಾಚಾರ್ಯರಾದ ಡಾ. ಪ್ರಸಾದ ರಾಂಪುರೆ ಇಂದು ಎಲ್ಲರೂ ನೌಕರಿಯ ಬೇನ್ನುಹತ್ತಿದ್ದಾರೆ.

ಆದರೆ ನಿಮ್ಮದೇ ಆದ ಸ್ವಂತ ಉದ್ಯಮ ಆರಂಭಿಸಿದರೇ ನೀವು ಬೇರೆಯವರಿಗೆ ಉದ್ಯೋಗ ಕೊಡಬಹುದು. ಉದ್ಯಮ ಸ್ಥಾಪನೆ ಕಷ್ಟವಾದರು ಸಹಿತ ನಾಲ್ಕೈದು ವರ್ಷಗಳಲ್ಲಿ ಯಶಸ್ವಿಯಾಗಬಹುದು. ಕೃಷಿ ಮತ್ತು ಆಹಾರ ಕ್ಷೇತ್ರದಲ್ಲಿ ತಾಂತ್ರಿಕತೆಗೆ ಸಾಕಷ್ಟು ಅವಕಾಶಗಳಿವೆ.

ಈ ನಿಟ್ಟಿನಲ್ಲಿ ಯೋಚಿಸಿ ಎಂದರು.ಡಾ. ಸಂಜಯ ಪೂಜಾರಿ, ಡಾ. ಸತೀಶ ಭೋಜನ್ನವರ, ಪ್ರೊ. ಸುನೀಲ ಹೆಬ್ಬಾಳೆ, ಡಾ. ಆರ್. ಕೆ. ಪಾಟೀಲ, ಪ್ರೊ. ಅಶ್ವಿನಿ ಹೆಬ್ಬಾಳೆ, ಡಾ. ಮಹಾಂತಯ್ಯ ಮಠಪತಿ, ಪ್ರೊ. ಬಿ ಎನ್ ಚೌಕಿಮಠ, ಪ್ರೊ. ಸುನೀಲ ಶಿಂಧೆ, ಪ್ರೊ. ಸಚೀನ ಮೆಕ್ಕಳಕಿ ಉಪಸ್ಥಿತರಿದ್ದರು.

ಕು. ಪೂರ್ವಾ ಹವಾಲ್ದಾರ ಸ್ವಾಗತಗೀತೆ ಹಾಡಿದರು. ಪ್ರೊ. ಪ್ರಸಾದ ರಾಯನ್ನವರ ಅಥಿತಿ ಪರಿಚಯಿಸಿದರು.

ಪ್ರೊ. ಮಹೇಶ್ವರಿ ಬಿಸನಾಳ ಸ್ವಾಗತಿಸಿದರು. ಪ್ರೊ. ಅನೀತಾ ಬಿರಾಜ ಮತ್ತು ಸುಂದರ ಗೋಟುರೆ ನಿರೂಪಿಸಿದರು. ಪ್ರೊ. ಮಲ್ಲಿಕಾರ್ಜುನ ಗಣಾಚಾರಿ ವಂದಿಸಿದರು.

## ಕರ್ತವ್ಯನಿರತ ಯೋಧ ಹೃದಯಾಘಾತದಿಂದ ಸಾವು



ಕೊಪ್ಪಳ: ಜಿಲ್ಲೆಯ ಯೋಧರೊಬ್ಬರು ಕರ್ತವ್ಯದಲ್ಲಿರುವಾಗಲೇ ಹೃದಯಾಘಾತದಿಂದ ಮೃತಪಟ್ಟ ಘಟನೆ ಪಂಜಾಬ್ನಲ್ಲಿ ನಡೆದಿದೆ.

ಕುಷ್ಟಗಿ ತಾಲೂಕಿನ ಕಡಿವಾಲ ಗ್ರಾಮದ ವೀರಪ್ಪ ಹಿರೇಹಾಳ (39) ಮೃತಪಟ್ಟ ಯೋಧ ಎಂದು ತಿಳಿದು ಬಂದಿದೆ. ಅವರು ಪಂಜಾಬ್ ಯುನಿಟ್ 4 ರಲ್ಲಿ ಕಾರ್ಯ ನಿರ್ವಹಿಸುತ್ತಿರುವಾಗ ಈ ಅವಘಡ ಸಂಭವಿಸಿದೆ. ಅವರು ಕಳೆದ 20 ವರ್ಷಗಳಿಂದ ಸೇನೆಯಲ್ಲಿ ಹವಾಲ್ದಾರ್ ಆಗಿ ಕಾರ್ಯನಿರ್ವಹಿಸುತ್ತಿದ್ದರು.

ವೀರಪ್ಪ ಅವರು 2003 ರಲ್ಲಿ ಬೆಂಗಳೂರಿನಲ್ಲಿ ಎಂಇಜಿ ಬೆಟಾಲಿಯನ್ಗೆ ಆಯ್ಕೆಯಾಗಿದ್ದರು. ಈ ವರ್ಷ ಅಗಸ್ಟ್ 30 ರಂದು ಅವರು ನಿವೃತ್ತಿ ಹೊಂದಲಿದ್ದರು. ಆದರೆ ನಿವೃತ್ತಿಗೆ ಎರಡು ತಿಂಗಳು ಬಾಕಿ ಇರುವಾಗಲೇ ಮೃತಪಟ್ಟಿದ್ದಾರೆ.

ಶುಕ್ರವಾರ ಯೋಧನ ಮೃತದೇಹ ಸ್ವಗ್ರಾಮಕ್ಕೆ ತಲುಪಲಿದೆ. ಅವರಿಗೆ 6 ಹಾಗೂ 8 ವರ್ಷದ ಇಬ್ಬರು ಗಂಡು ಮಕ್ಕಳಿದ್ದಾರೆ. ಬುಧವಾರವೇ ಯೋಧ ಮೃತಪಟ್ಟಿದ್ದರೂ ಇಲ್ಲಿಯವರೆಗೂ ಯಾವ ಅಧಿಕಾ–ರಿಗಳು ಗ್ರಾಮಕ್ಕೆ ಭೇಟಿ ನೀಡದ ಹಿನ್ನೆಲೆಯಲ್ಲಿ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಸುಂಟರಗಾಳಿ ಒತ್ತಡಕ್ಕೆ ಕಟ್ಟಡದ ಮೇಲ್ಛಾವಣೆ ಹಾರಿ ಸುಮಾರು 50 ಲಕ್ಷ ರೂ. ಹಾನಿ

ಕಾಗವಾಡ: ತಾಲ್ಲೂಕಿನ ಐನಾಪುರದಲ್ಲಿಯ ಖಿಳೇಗಾಂವ ಬಸವೇಶ್ವರ ಏತ ನೀರಾವರಿ ಯೋಜನೆಯ ಪಂಪ್ಹೌಸ್ ಕಟ್ಟಡದ ಮೇಲ್ಛಾವಣೆ ಸುಂಟರಗಾಳಿ ಒತ್ತಡಕ್ಕೆ ಹಾರಿ ಸುಮಾರು 50 ಲಕ್ಷ ರೂ. ಹಾನಿಯಾಗಿದೆ.

ಬುಧವಾರ ಮಧ್ಯರಾತ್ರಿ ಆಕಸ್ಮಿಕವಾಗಿ ಪ್ರಾರಂಭಗೊಂಡ ಗುಡುಗುಮಿಂಚಿನ ಮಳೆ ಅದರೊಂದಿಗೆ ರೌದ್ರರೂಪದ ಸುಂಟರಗಾಳಿ ಬಿಸಿತ್ತು. ಗಾಳಿ ಒತ್ತಡಕ್ಕೆ ಐನಾಪುರದಲ್ಲಿ ನಿರ್ಮಿಸಿದ ಖಿಳೇಗಾಂವ ಬಸವೇಶ್ವರ ಏತ ನೀರಾವರಿ ಯೋಜನೆ ಪಂಪ್ಹೌಸಿನ ಸುಮಾರು 50 ಟನ್ ತೂಕಿನ ಕೆಬ್ಬಿನ ಆ್ಯಂಗಲ್ ಮತ್ತು ಪತ್ರಾಸ ಮೇಲ್ಛಾವಣಿ ಸುಮಾರು 150 ಮೀಟರ್ ಹಾರಿಹೋಗಿ ಉರುಳಿದೆ. ಇದ್ದರಿಂದ ಸುಮಾರು 50 ಲಕ್ಷ ರೂ.ರಷ್ಟು ಹಾನಿಯಾಗಿದ್ದ ಘಟಣೆ ಸಂಭವಿಸಿದೆ.ಬುಧವಾರ ಮಧ್ಯರಾತ್ರಿ ಗುಡುಗುಮಿಂಚಿನ ಮಳೆ ಪ್ರಾರಂಭವಾಗಿತ್ತು. ಇದರಲ್ಲಿ ರುದ್ರಾವತಾರ ತಾಳಿದ್ದ ಗಾಳಿ ಹೊಸದಾಗಿ ಕಟ್ಟಿಸಿದ ಪಂಪ್ಹೌಸ್ ಕಟ್ಟಡದಲ್ಲಿ ವೇಗವಾಗಿ ನುಗ್ಗಿ ಗಾಳಿ ಒತ್ತಡದಲ್ಲಿ ಮೇಲ್ಛಾವಣಿ ಹಾರಿಹೋಗಿದೆ.

50 ಮೀಟರ ಉದ್ದು ಹಾಗೂ 28 ಮೀಟರ ಅಗಲು ಹೀಗೆ 1400 ಮೀಟರನಲ್ಲಿ ನಿರ್ಮಿಸಿದ ಪಂಪ್ಹೌಸ್ ಕಟ್ಟಡದ ಮ್ಯಲ್ಛಾವಣಿ ಹಾರಿಹೋಗಿದೆ.ಸುಮಾರು 150 ಮೀಟರ್ರಷ್ಟು ಮೇಲ್ಛಾವಣಿ ಹಾರಿ ಉರುಳಿದೆ. ಇದರ ಮಧ್ಯದಲ್ಲಿ ಪಂಪ್ಹೌಸ್ನಲ್ಲಿ ಕಾರ್ಮಿಕರಾಗಿ ಕಾರ್ಯನಿರ್ವಹಿಸುತ್ತಿರುವ ಬಿಹಾರ ರಾಜ್ಯ ಮೂಲದ 30 ಕಾರ್ಮಿಕರು ಪತ್ರಾಸ ಶೇಡಿನಲ್ಲಿ ವಾಸಿಸಿದ್ದರು.



ಸ್ವಲ್ಪ ಅಂತರದಲ್ಲಿ ಶೇಡವಿದ್ದು, ಸುದ್ಯೆವದಿಂದ ಶೇಡದ ಹತ್ತಿರ ಸುಮಾರು 3 ಟನ್ ತೂಕಿನ ಆ್ಯಂಗಲ್ ಹಾಗೂ ಪತ್ರಾಸಗಳು ಉರಳಿವೆ. ಇದನ್ನು ಕಂಡಿದ ಬಿಹಾರ ಮೂಲದ ನೌಶಾದ್ ಎಂಬ ಯುವಕನು ನಮ್ಮ ಮೇಲೆ ದೇವರ ಕೃಪೆಯಿದಿದ್ದರಿಂದ ನಮ್ಮ ಪ್ರಾಣ ಉಳಿದಿದೆಯೆಂದು ಹೇಳಿ ದೇವರಿಗೆ ಪ್ರಾಥ–ರ್ನೆ ಸಲ್ಲಿಸಿದರು.ಗಾಯತ್ರಿ ಕನಸ್ಟ್ರಕ್ಷನ್ ಕಂಪನಿ ಇವರಿಂದ ಬಸವೇಶ್ವರ ಏತ ನೀರಾವರಿ ಯೋಜನೆ ಕಾಮಗಾರಿ ಪೂರ್ಣಗೊಳ್ಳುತ್ತಿದೆ. ಈ ಕಾಮಗಾ–ರಿಯನ್ನು ನಿರಾವರಿ ಇಲಾಖೆ ಅಭಿಯಂತರಾದ ಕೆ. ರವಿ ಇವರು ಭೇಟ್ಟಿನೀಡಿ ಸುಂಟರಗಾಳಿ ಒತ್ತಡದಿಂದ ಮೇಲ್ಛಾವಣಿ ಹಾರಿ ಹೋಗಿದೆ. ಈ ಮೊದಲು ನಾನು ಪಂಪ್ಹೌಸ್ ಬಾಗಿಲಿಗೆ ಶೆಟ್ಟರ್ ಅಳವಡಿಸಲು ಸೂಚನೆ ನೀಡಿದ್ದೆ. ಅದನ್ನು ಮಾಡಿದ್ದರೆ ಈ ಅನಾಹುತ ಸಂಭವಿಸುತ್ತಿರಲಿಲ್ಲವೆಂದು ಹೇಳಿ, ಈ ಕಂಪನಿದವರು ಇನ್ನೂ ನಮಗೆ ಕಾಮಗಾರಿ ಪೂರ್ಣಗೊಳಿಸಿ ಹಸ್ತಾಂತರ ಮಾಡೆಯಿಲ್ಲಾ. ಇದರೆಲ್ಲದರ ಜವಾಬ್ದಾರಿ ಕಂಪನಿಯವರದೆಯಿದೆ ಎಂದು ಹೇಳಿದರು.

## ಸೋಲು–ಗೆಲುವಿನ ಲೆಕ್ಕಾಚಾರಕ್ಕಿಂತ ಬೆಟ್ಟಿಂಗ್ 'ಸಮರ'ವೇ ಜೋರು

ಬೆಂಗಳೂರು: ಕರ್ನಾಟಕ ವಿಧಾನಸಭಾ ಚುನಾವಣೆಗೆ ಮತದಾನ ಮೇ 10ರಂದು ಬಹುತೇಕ ಶಾಂತಿಯುತವಾಗಿ ನಡೆದಿದ್ದು, ಈಗ ರಾಜಕೀಯ ಪಕ್ಷಗಳ ಹಾಗೂಅಭ್ಯರ್ಥಿಗಳ ಪರ ಗೆಲುವಿನ ಮೇಲೆ ಬೆಟ್ಟಿಂಗ್ ಕಟ್ಟುವುದು ಜೋರಾಗುತ್ತಿದೆ.

ಮೇ 10 ಬುಧವಾರ ಮತದಾನ 6 ಗಂಟೆಗೆ ಮುಗಿದಂತೆ ಎಕ್ಸಿಟ್ ಪೋಲ್ಗಳ ಸಮೀಕ್ಷೆಗಳು ಹೊರಬಿದ್ದಿವೆ. ಈ ಬೆನ್ನಲ್ಲೇ ರಾಜ್ಯಾದ್ಯಂತ ಅನೇಕ ಕಡೆ ತಮ್ಮ ನೆಚ್ಚಿನ ಪಕ್ಷಗಳ ಹಾಗೂ ನಾಯಕರ ಪರ ಸೋಲು ಗೆಲುವಿನ ಬಗ್ಗೆ ಬೆಟ್ಟಿಂಗ್ ಕಟ್ಟುವುದು ಜೋರಾಗುತ್ತಿದೆ. ತಮ್ಮ ರಾಜಕೀಯ ನಾಯಕರು ಗೆಲ್ಲುತ್ತಾರೆ ಎಂದು ಕಂತೆ ಕಂತೆ ಹಣ ಮಾತ್ರವಲ್ಲದೆ, ಕುರಿ, ಹಸು, ಮೇಕೆ ಸೇರಿದಂತೆ ಜೀವನೋಪಯೋಗಿ ವಸ್ತುಗಳನ್ನು ಪಣಕ್ಕೆ ಇಡಲಾಗುತ್ತಿದೆ. ಹೀಗಾಗಿ ಫಲಿತಾಂಶಕ್ಕೂ ಮುನ್ನವೇ ಗ್ರಾಮೀಣಾ ಚುನಾವಣ ಕಣ ರಂಗೇರಿದೆ.

ಮೊನ್ನೆ ಧಾರವಾಡದಲ್ಲಿ ವ್ಯಕ್ತಿಯೊಬ್ಬರು ಕಾಂಗ್ರೆಸ್ ಅಭ್ಯರ್ಥಿ ವಿನಯ್ ಕುಮಾರ್ ಕುಲಕರ್ಣಿ ಪರ ಕುರಿಗಳನ್ನು ಬೆಟ್ಟಿಂಗ್



ಕಟ್ಟಿದ್ದರು. ಮತ್ತೊಬ್ಬ ವ್ಯಕ್ತಿ ತಮ್ಮ ಮಗನಿಗೆ ವಿನಯ್ ಎಂದು ಹೆಸರಿಟ್ಟಿದ್ದು, ವಿನಯ್ ಕುಲಕರ್ಣಿ ಸೋತರೇ ಹೆಸರು ಬದಲಿಸುವುದಾಗಿ ಹೇಳಿದ್ದಾರೆ. ಇನ್ನು ಕರಡಿ ಗುಡ್ಡದಲ್ಲೂ ಹಣವನ್ನು ಬೆಟ್ಟಿಂಗ್ ಕಟ್ಟಲಾಗಿದೆ ಎನ್ನಲಾಗಿದೆ, ಬೈಲಹೊಂಗಲದಲ್ಲೂ ಬೆಟ್ಟಿಂಗ್ ಜೋರಾಗಿದೆ.

ಕ್ಷೇತ್ರದಲ್ಲಿ ಯಾರು ಗೆಲ್ಲುತ್ತಾರೆ ಎಂದು ಲಕ್ಷ ಲಕ್ಷ ರೂಪಾಯಿಗಳನ್ನು ಬಾಜಿಗೆ ಕಟ್ಟಲಾಗುತ್ತಿದ್ದು, ಇದು ಕೋಟಿ ರುಪಾಯಿ ಮೀರಿರಬಹುದು ಎನ್ನಲಾಗುತ್ತಿದೆ. ಇದಲ್ಲದೆ ಕಲಬುರಗಿ, ರಾಯಚೂರು, ಬೀದರ್, ಯಾದಗಿರಿ ಕೊಪ್ಪಳ ಜಿಲ್ಲೆಗಳಲ್ಲೂ ಬೆಟ್ಟಿಂಗ್ ಧಂದೆ ಜೋರಾಗಿ ನಡೆಯುತ್ತಿದೆ. ಇಲ್ಲಿ ಅಭ್ಯರ್ಥಿ ಸೋಲು ಗೆಲುವಿನ ಮೇಲೆ 50 ಸಾವಿರದಿಂದ 1 ಲಕ್ಷದವರೆಗೆ ಬೆಟ್ಟಿಂಗ್ ಕಟ್ಟಲಾಗಿದೆ. ಅಲ್ಲದೆ ಕುರಿ, ಕೋಳಿ ಚಿನ್ನ ಹಾಗೂ ವಸ್ತುಗಳನ್ನು ಬಾಜಿ ಕಟ್ಟಲಾಗುತ್ತಿದೆ.

ಗಂಗಾವತಿಯಲ್ಲಿ ವ್ಯಕ್ತಿಯೊಬ್ಬರು ಜಾನುವಾರುಗಳನ್ನು ಬೆಟ್ಟಿಂಗ್ ಕಟ್ಟಿದ್ದರೆ, ಕೊಪ್ಪಳದಲ್ಲಿ ಅಪಾರ ಹಣವನ್ನು ಹಾಗೂ ಉಳುವ ಭೂಮಿಯನ್ನು ಬೆಟ್ಟಿಂಗ್ ಕಟ್ಟಲಾಗಿದೆ. ರಾಯಚೂರು, ಮಸ್ಕಿ ಹಾಗೂ ಲಿಂಗಸುಗೂ–ರಿನಲ್ಲಿ 1 ಲಕ್ಷ ರೂಪಾಯಿ ಹಣ ಅಲ್ಲದೆ ಎಕರೆ ಭೂಮಿಯನ್ನು ಪಣಕ್ಕೆ ಇಡಲಾಗಿದೆ. ಇದಲ್ಲದೆ ಮೈಸೂರಿನ ಪಿರಿಯಾಪಟ್ಟಣದಲ್ಲೂ 5 ಲಕ್ಷದವರೆಗೂ ಹಣ ಬೆಟ್ಟಿಂಗ್ ಕಟ್ಟಲಾಗಿದೆ ಎನ್ನಲಾಗಿದೆ. ಇದಲ್ಲದೆ ಹುಣಸೂರು, ಚಾಮರಾಜನಗರದ ಗುಂಡ್ಲುಪೇಟೆ ಹಾಗೂ ಕೊಳ್ಳೇಗಾಲದಲ್ಲೂ ವ್ಯಕ್ತಿಗಳ ಗೆಲುವಿನ ಅಂತರದ ಮೇಲೆ ಹಣ ಜೂಜಿಗೆ ಕಟ್ಟಲಾಗಿದೆ, ತುಮಕೂರಿನಲ್ಲಿ ಬೆಳೆದ ಬೆಳೆಯನ್ನು ಬೆಟ್ಟಿಂಗ್ ಕಟ್ಟಲಾಗಿದ್ದರೆ ಕೊರಟಗೆರೆಯಲ್ಲಿ ಬೈಕಗಳನ್ನು ಬೆಟ್ಟಿಂಗ್ ಕಟ್ಟಲಾಗಿದೆ ಎನ್ನಲಾಗುತ್ತಿದೆ.

## ಕ್ಷುಲ್ಲಕ ಕಾರಣಕ್ಕೆ ಗಲಾಟೆ: ಬಾವಮೈದುನನ್ನು ಕೊಲೆಗೈದ ಬಾವ

ದಕ್ಷಿಣ ಕನ್ನಡ : ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದಿರೆ ಪುರಸಭೆ ವ್ಯಾಪ್ತಿಯ ಗಂಟಾಲ್ಕಟ್ಟೆ ಎಂಬಲ್ಲಿ ಕ್ಷುಲ್ಲಕ ವಿಚಾರವಾಗಿ ಬಾವ–ಬಾವಮೈದುನರ ನಡುವಿನ ಗಲಾಟೆ ಓರ್ವನ ಕೊಲೆಯಲ್ಲಿ ಅಂತ್ಯವಾಗಿದೆ.



ಮೃತರು ಜಮಾಲ್ ಎಂದು ತಿಳಿದುಬಂದಿದೆ. ಮೃತರ ತಂಗಿಯ ಗಂಡ, ಚಿಕ್ಕಮಗಳೂರು ಮೂಲದ ಸುಹೈಬ್ ಕೊಲೆ ಆರೋಪಿಯಾಗಿದ್ದಾನೆ. ಸದ್ಯ ಆತನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಇವರಿಬ್ಬರ ಮನೆಗಳು ಅಕ್ಕಪಕ್ಕದಲ್ಲಿದ್ದು ಸಣ್ಣ ಮಕ್ಕಳೊಳಗಿನ ವೈಮನಸ್ಸಿನ ವಿಚಾರವಾಗಿ ಇಂದು ಬೆಳಗ್ಗೆ ಜಮಾಲ್ ಮತ್ತು ಸುಹೈಬ್ ನಡುವೆ ಮಾತಿಕ ಚಕಮಕಿ ನಡೆದಿದೆ.

ಗಲಾಟೆ ವಿಕೋಪಕ್ಕೆ ತಿರುಗಿ ಜಮಾಲ್ ಹೊಟ್ಟೆಗೆ ಆರೋಪಿ ಸುಹೈಬ್ ಚಾಕುವಿನಿಂದ ಇರಿದಿದ್ದಾನೆ. ಇದರಿಂದ ಗಂಭೀರವಾಗಿ ಗಾಯಗೊಂಡ ಸುಹೈಬ್ ಸ್ಥಳದಲ್ಲೇ ಸಾವಿಗೀಡಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಪ್ರಕರಣ ದಾಖಲಿಸಿಕೊಂಡಿರುವ ಮೂಡುಬಿದಿರೆ ಠಾಣೆಯ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

## ಮಹಿಳಾ ಇನ್ಸೆಪೆಕ್ಟರ್ ಅಮಾನತು




ಬೆಂಗಳೂರು: ವಿಧಾನಸಭಾ ಚುನಾವಣೆಯ ಮತಗಟ್ಟೆಯಲ್ಲಿ ಬೇಜವಾಬ್ದಾರಿ ಮೆರೆದು ಮಹಿಳಾ ಇನ್ಸ್ಪೆಕ್ಟರ್ ಒಬ್ಬರು ಉದ್ಧಟತನ ತೋರಿ ಅಮಾನತುಗೊಂಡಿದ್ದಾರೆ.

ಭವ್ಯಾ ಎಂಬುವರು ಮತಗಟ್ಟೆಯಲ್ಲಿ ಬೇಜವಾಬ್ದಾರಿ ಮೆರೆದು ಅಮಾನತುಗೊಂಡ ಇನ್ಸ್ಪೆಕ್ಟರ್. ಚುಣಾವಣಾ ಕರ್ತವ್ಯಕ್ಕೆ ತೆರಳುವ ಮುನ್ನ ಅಂಬೇಡ್ಕರ್ ವಿಶ್ವವಿದ್ಯಾಲಯದಲ್ಲಿ ಮತಗಟ್ಟೆ ತರಬೇತಿ ನಿಯೋಜನೆ ಮಾಡಲಾಗಿತ್ತು. ಈ ವೇಳೆ ಮಹಿಳಾ ಇನ್ಸ್ಪೆಕ್ಟರ್ ಭವ್ಯ ಉದ್ಧಟತನ ತೋರಿದ್ದಾರೆ. ತರಬೇತಿಗೆ ಸರಿಯಾಗಿ ಹಾಜರಾಗದೆ ಪತ್ರಿಕೆ ಓದುತ್ತಾ ಕುಳಿತಿದ್ದಾರೆ.

ನಾನು ನಿಮ್ಮ ಡಿಪಾರ್ಟ್ಮೆಂಟ್ ಅಲ್ಲ! ತರಬೇತಿಗೆ ಸರಿಯಾಗಿ ಹಾಜರಾಗದೇ ಇರುವುದನ್ನು ನೋಡಲ್ ಅಧಿಕಾರಿ ಹಾಗು ಸೆಕ್ಟರ್ ಅಧಿಕಾರಿ ಪ್ರಶ್ನಿಸಿದಾಗ ಉದ್ಧಟತನ ಮರೆದಿದ್ದಾರೆ. 'ನಾನು ಮಾಡುತ್ತಿರುವುದು ಸರಿ, ತರಬೇತಿ ಕೊಡುವುದು ನಿಮ್ಮ ಕೆಲಸ. ತರಬೇತಿ ಪಡೆಯುವುದು ಬಿಡುವುದು ನಮ್ಮಿಷ್ಟ. ನೀವ್ ಹೇಳಿದಂತೆ ಕೇಳೋದಕ್ಕೆ ನಾನು ನಿಮ್ಮ ಡಿಪಾರ್ಟ್ಮೆಂಟ್ ಅಲ್ಲ. ಈ ತರಬೇತಿ ಉಪಯೋಗಕ್ಕಿಲ್ಲ' ಎಂದು ಹೇಳಿಕೊಂಡಿದ್ದಾರೆ ಎನ್ನಲಾಗಿದೆ. ಬೇಜವಾಬ್ದಾರಿಯಾಗಿ ಮಾತನಾಡಿ ಇನ್ಸ್ಪೆಕ್ಟರ್ ಬಗ್ಗೆ ಅಧಿಕಾ–ರಿಗಳು ಬಿಬಿಎಂಪಿ ಆಯುಕ್ತರಿಗೆ ಮಾಹಿತಿ ನೀಡಿದ್ದಾರೆ. ಈ ಹಿನ್ನಲೆ ಪ್ರಜಾಪ್ರತಿನಿಧಿ ಕಾಯ್ದೆಯಡಿ ಜಿಲ್ಲಾ ಚುನಾವಣಾಧಿಕಾರಿ ಇನ್ಸ್ಪೆಕ್ಟರ್ ಭವ್ಯಾ ಅವರನ್ನು ಅಮಾನತುಗೊಳಿಸಿದ್ದಾರೆ.

## ನೇಣುಬಿಗಿದ ಸ್ಥಿತಿಯಲ್ಲಿ ಬಿಜೆಪಿ ಕಾರ್ಯಕರ್ತನ ಶವ ಪತ್ತೆ



ಕಲಬುರ್ಗಿ: ಚುನಾವಣೆ ವೇಳೆ ಮತಗಟ್ಟೆ ಏಜೆಂಟ್ ಆಗಿ ಕಾರ್ಯನಿರ್ವಹಿಸಿದ್ದ ಬಿಜೆಪಿ ಕಾರ್ಯಕರ್ತರೊಬ್ಬರು ಶವವಾಗಿ ಪತ್ತೆಯಾಗಿದ್ದಾರೆ.

ರಾಮು ರಾಥೋಡ್ (45) ಮೃತ ಬಿಜೆಪಿ ಕಾರ್ಯಕರ್ತ. ನೇಣು ಬಿಗಿದ ಸ್ಥಿತಿಯಲ್ಲಿ ಕಲಬುರ್ಗಿ ಜಿಲ್ಲೆಯ ಚಿಂಚೋಳಿ ತಾಲೂಕಿನ ಸಲಗರ ಬಸಂತಪುರದಲ್ಲಿ ರಾಮು ರಾಠೋಡ್ ಶವ ಪತ್ತೆಯಾಗಿದೆ.

ಬುಧವಾರ ಪೋಲಿಂಗ್ ಬೂತ್ ಏಜೆಂಟ್ ಆಗಿ ಕೆಲಸ ಮಾಡಿದ್ದ ರಾಮು ರಾಥೋಡ್ ಸಲಗರ ಬಸಂತಪುರ ತಾಂಡಾ ಬಳಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ಕೊಲೆ ಮಾಡಿ ರಾಮುನನು ನೇಣು ಬಿಗಿದಿದ್ದಾಗಿ ಕುಟುಂಬದವರು ಆರೋಪಿಸಿದ್ದಾರೆ.

ಸ್ಥಳಕ್ಕೆ ಧಾವಿಸಿರುವ ಚಿಂಚೋಳಿ ಪೊಲಿಸರು ಪರಿಶೀಲನೆ ನಡೆಸಿದ್ದಾರೆ.

## ಪಾಕಿಸ್ತಾನದ ಅಸ್ಥಿರತೆ ಭಾರತದ ಮೇಲೆ ಪರಿಣಾಮ ಬೀರಲಿದೆ: ಪಿಡಿಪಿ ಅಧ್ಯಕ್ಷೆ ಮೆಹಬೂಬಾ ಮುಫ್ತಿ

ಶ್ರೀನಗರ: ಪಾಕಿಸ್ತಾನದಲ್ಲಿ ಈಗಿರುವ ರಾಜಕೀಯ ಪರಿಸ್ಥಿತಿ ಹೊಸದೇನಲ್ಲ. ಆದರೆ, ನೆರೆಯ ದೇಶದಲ್ಲಿನ ಅಸ್ಥಿರತೆ ಮತ್ತು ಅನಿಶ್ಚಿತತೆಯು ಭಾರತದ ಮೇಲೆ ಪರಿಣಾಮ ಬೀರುತ್ತದೆ ಎಂದು ಪಿಡಿಪಿ ಅಧ್ಯಕ್ಷೆ ಮೆಹಬೂಬಾ ಮುಫ್ತಿ ಅವರು ಗುರುವಾರ ಹೇಳಿದ್ದಾರೆ.



ಪಾಕಿಸ್ತಾನದ ಆಡಳಿತಾರೂಢ ಪಕ್ಷವು ವಿರೋಧ ಪಕ್ಷದ ವಿರುದ್ಧ ರಾಜಕೀಯವಾಗಿ ಹೋರಾಡುವ ಬದಲು ಅವರನ್ನು ಜೈಲಿಗೆ ಹಾಕಲು ಏಜೆನ್ಸಿಗಳನ್ನು ಬಳಸುತ್ತಿದೆ ಮತ್ತು 'ದುರದೃಷ್ಟವಶಾತ್ ಅದೇ ಪ್ರಕ್ರಿಯೆಯನ್ನು ಭಾರತದಲ್ಲಿ ಬಳಸಲಾಗುತ್ತಿದೆ' ಎಂದು ಅವರು ಹೇಳಿದರು.

ದುರದೃಷ್ಟವಶಾತ್, ಪಾಕಿಸ್ತಾನದಲ್ಲಿ ಏನಾಗುತ್ತಿದೆಯೋ ಅದು ಹೊಸದೇನಲ್ಲ. ಜುಲ್ಫಿಕರ್ ಅಲಿ ಭುಟ್ಟೋ ಅವರಿಂದಲೇ, ಹೊಸ ಸರ್ಕಾರ ಬಂದಾಗಲೆಲ್ಲಾ ಪ್ರತಿಪಕ್ಷಗಳು ಜೈಲು ಪಾಲಾಗುತ್ತವೆ. ಇದು ನಮ್ಮ ಮೇಲೆ ಪರಿಣಾಮ ಬೀರುತ್ತದೆ. ಅಲ್ಲಿನ ಅಸ್ಥಿರತೆ ಮತ್ತು ಅನಿಶ್ಚಿತತೆಯು ನಮ್ಮ ಮೇಲೆ ಪರಿಣಾಮ ಬೀರುತ್ತದೆ. ಆದರೆ, ಈ ರೋಗವು ಹೇಗೋ ನಮ್ಮ ದೇಶಕ್ಕೂ ಅಂಟಿದೆ ಎಂದು ಅವರು ಹೇಳಿದರು.

ರಾಹುಲ್ ಗಾಂಧಿ ಅವರನ್ನು ಸಂಸತ್ತಿನ ಸದಸ್ಯತ್ವದಿಂದ ಅನರ್ಹಗೊಳಿಸಿರುವುದನ್ನು ನೀವು ನೋಡಿದರೆ, ಮನೀಶ್ ಸಿಸೋಡಿಯಾ ಅವರನ್ನು ಜೈಲಿಗೆ ತಳ್ಳಲಾಯಿತು ಎಂದು ಮೆಹಬೂಬಾ ಪುಲ್ವಾಮಾ ಜಿಲ್ಲೆಯ ಟ್ರಾಲ್ ಪ್ರದೇಶದಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಬಂಧನದ ಕುರಿತು ಪ್ರತಿಕ್ರಿಯಿಸಿದ ಮುಫ್ತಿ, ಇಸ್ಲಾಮಾಬಾದ್ನಲ್ಲಿ ಆಡಳಿತ ಪಕ್ಷವು ವಿರೋಧ ಪಕ್ಷದ ನಾಯಕರನ್ನು ಜೈಲಿಗಟ್ಟಲು ಏಜೆನ್ಸಿಗಳನ್ನು ಬಳಸುತ್ತಿದೆ ಎಂದು ಹೇಳಿದರು.

ದುರದೃಷ್ಟವಶಾತ್ ಅದೇ ಪ್ರಕ್ರಿಯೆಯನ್ನು ಇಲ್ಲಿ ಬಳಸಲಾಗುತ್ತಿದೆ. ರಾಹುಲ್ ಗಾಂಧಿ ಅವರನ್ನು ದೋಷಿ ಎಂದು ಘೋಷಿಸಲಾಗಿದೆ ಮತ್ತು ಎರಡು ವರ್ಷಗಳ ಶಿಕ್ಷೆ ವಿಧಿಸಲಾಗಿದೆ. ಅಲ್ಲದೆ, ಸಂಸತ್ತಿನಿಂದ ಆರು ವರ್ಷ ಅನರ್ಹಗೊಳಿಸಲಾಗಿದೆ. ಪಾಕಿಸ್ತಾನದಲ್ಲಿ ಏನಾಗುತ್ತಿದೆಯೋ ಅದರಂತೆ ನಾವು ಕೂಡ ಅದೇ ದಿಕ್ಕಿನಲ್ಲಿ ಸಾಗುತ್ತಿರುವಂತೆ ತೋರುತ್ತಿದೆ ಎಂದು ಅವರು ಹೇಳಿದರು.


## ಚುನಾವಣೆ ಬಳಿಕ ರಿಲ್ಯಾಕ್ಸ್ ಮೂಡ್ನಲ್ಲಿ 'ಕೈ' ನಾಯಕರು

ರಾಮನಗರ/ ವಿಜಯಪುರ: ಕರ್ನಾಟಕ ವಿಧಾನಸಭೆಗೆ ಚುನಾವಣೆ ಮುಗಿದ ಬೆನ್ನಲ್ಲೇ ಕಾಂಗ್ರೆಸ್ ನಾಯಕರಾದ ಡಿ.ಕೆ ಶಿವಕುಮಾರ್ ಹಾಗೂ ಎಂ.ಬಿ ಪಾಟೀಲ್ ರಿಲ್ಯಾಕ್ಸ್ ಮೂಡ್ಗೆ ಜಾರಿದ್ದಾರೆ.

ವಿಧಾನಸಭೆ ಮತದಾನಕ್ಕೆ ಬುಧವಾರ ತೆರೆ ಬಿದ್ದಿದೆ. ಮತದಾನದ ಮುಕ್ತಾಯದ ಬಳಿಕ ರಿಲ್ಯಾಕ್ಸ್ ಮೂಡ್ನಲ್ಲಿದ್ದ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್ ಅವರು ಸ್ಥಳೀಯ ಮುಖಂಡರ ಜೊತೆ ಕನಕಪುರದ ಕೆ.ಎಸ್.ಎಸ್. ವೃತ್ತದ ವಾಸು ಹೋಟೆಲ್ಗೆ ತೆರಳಿ ಇಡ್ಲಿ ಸವಿದರು. ಅದಾದ ಬಳಿಕ ಚುನಾವಣೆ ಬಗ್ಗೆ ಸ್ಥಳೀಯರ ಜೊತೆ ಮಾತುಕತೆ ನಡೆಸಿ ಕಾಲ ಕಳೆದಿದ್ದಾರೆ.

ಅದಾದ ಬಳಿಕ ಕನಕಪುರದ ಕೋಡಿಹಳ್ಳಿಯ ನಿವಾಸಕ್ಕೆ ಡಿಕೆ ಶಿವಕುಮಾರ್ ಹಾಗೂ ಡಿಕೆ ಸುರೇಶ್ ಭೇಟಿ ನೀಡಿ ತಾಯಿ ಗೌರಮ್ಮನವರ ಆಶೀರ್ವಾದ ಪಡೆದಿದ್ದಾರೆ.

ಅದೇ ರೀತಿ ತಿಂಗಳಿಂದ ಗಡಿ ಬಿಡಿಯಲ್ಲಿ ಮತಕ್ಷೇತ್ರ ಮತ್ತು ರಾಜ್ಯ ಸುತ್ತಿದ ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ಎಂಬಿ ಪಾಟೀಲ್ ಇಂದು ರಿಲ್ಯಾಕ್ಸ್ ಮೂಡ್ನಲ್ಲಿದ್ದಾರೆ. ಚುನಾವಣಾ ಭರಾಟೆ ಹಾಗೂ ಮತದಾನದ ಬಳಿಕ ಮನೆಯಲ್ಲಿ ವಿಶ್ರಾಂತಿ ಎಂಬಿಪಿ ಮೊರೆ ಹೋಗಿದ್ದಾರೆ. ವಿಜಯಪುರ



ನಗರದ ಸೊಲ್ಲಾಪುರ ರಸ್ತೆಯಲ್ಲಿರುವ ನಿವಾಸದಲ್ಲಿ ಬೆಳ್ಳಂಬೆಳಿಗ್ಗೆ ಪತ್ನಿ ಆಶಾ ಪಾಟೀಲ್ ಜೊತೆಗೆ ಕಾಫಿ ಕುಡಿದು ರಿಲ್ಯಾಕ್ಸ್ನಲ್ಲಿದ್ದಾರೆ.

ಕಾರ್ಯಕರ್ತರ ದಂಡು ಮನೆಯತ್ತ ಬರುತ್ತಿದ್ದು, ಮತದಾನ ಕುರಿತು ಮಾಹಿತಿ ಕಲೆ ಹಾಕುತ್ತಿದ್ದಾರೆ. ಇದೇ ವೇಳೆ ಮಾತನಾಡಿದ ಎಂಬಿಪಿ ರಾತ್ರಿ ತಡವಾಗಿ ಮಲಗಿದ್ದೆ,ನಮ್ಮಲ್ಲಿ ನಾಟಕ ಕಂಪನಿ ಪಾತ್ರ ಮುಂದುವರಿದಿದೆ ಎಂದು ಬಿಜೆಪಿ ಅಭ್ಯರ್ಥಿ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದರು.

ಇನ್ನು ನಮ್ಮ ಮುಖಂಡರು, ಕಾರ್ಯಕರ್ತರು, ಬೆಂಬಲಿಗರು ಹಗಲು ರಾತ್ರಿ ಕೆಲಸ ಮಾಡಿದ್ದಾರೆ. ಒಳ್ಳೆ ಲೀಡ್ನಲ್ಲಿ ಆಯ್ಕೆಯಾಗುವೆ. ದೊಡ್ಡ ಅಂತರದಿಂದ ಗೆಲ್ಲುವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಶಿಕ್ಷಣದಲ್ಲಿ ಮಾತೃಭಾಷೆಗೆ ಮಹತ್ವ

## ಟ್ಯಾಗೋರ್ ತತ್ವಗಳೇ ಸ್ಫೂರ್ತಿ: ಅಮಿತ್ ಶಾ



ಬೆಳಗಾವಿ: ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಮಾತೃಭಾಷೆಯಲ್ಲಿನ ಶಿಕ್ಷಣಕ್ಕೆ ಮಹತ್ವ ನೀಡಲು, ರವೀಂದ್ರನಾಥ್ ಟ್ಯಾಗೋರ್ ತತ್ವ–ಚಿಂತನೆಗಳೇ ಪ್ರಮುಖ ಕಾರಣ ಎಂದು ಮಾತೃಭಾಷೆಯಲ್ಲಿನ ಶಿಕ್ಷಣದ ಬಲವಾದ ಸಮಥ–ರ್ಕರೊಲ್ಲಬ್ಬರಾದ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ಗುರುದೇವ ರವೀಂದ್ರನಾಥ ಠಾಗೋರ್‌ವರು ಯಾವಾಗಲೂ ಮಾತೃಭಾಷೆಯಲ್ಲಿನ ಶಿಕ್ಷಣ–ಕ್ಕೆ ಹೆಚ್ಚಿನ ಒತ್ತು ನೀಡುತ್ತಿದ್ದರು. ಮಗುವಿಗೆ ತನ್ನ ಮಾತೃಭಾಷೆಯಲ್ಲಿ ಮಾತನಾಡಲು ಸಾಧ್ಯವಾಗದಿದ್ದಲ್ಲಿ, ಅವನ ಆಲೋಚನಾ ಮತ್ತು ಸಂಶೋಧನಾ ಸಾಮರ್ಥ್ಯವನ್ನು ತೀವ್ರವಾಗಿ ನಿರ್ಬಂಧಿಸಿದ ಹಾಗಾಗುತ್ತದೆ ಎನ್ನುವುದು ಅವರ ತತ್ವವಾಗಿತ್ತು ಎಂದು ರವೀಂದ್ರನಾಥ್ ಟ್ಯಾಗೋರರ ಜನ್ಮದಿನ ಸಂದರ್ಭದಲ್ಲಿ ಮಹಾನ್ ಚೇತನಕ್ಕೆ ಶ್ರದ್ಧಾಂಜಲಿ ಸಲ್ಲಿಸಿದ ಗೃಹ ಸಚಿವ ಅಮಿತ್ ಶಾ ನೆನಪಿಸಿಕೊಂಡಿದ್ದಾರೆ.


ಮಾತೃಭಾಷೆಯಲ್ಲಿನ ಶಿಕ್ಷಣ ನೀಡುವ ಗುರುದೇವರ ಚಿಂತನೆ ಜಗತ್ತಿನಾದ್ಯಂತ ಮನ್ನಣೆ ಪಡೆದಿದೆ. ವಿದೇಶಿ ಶಿಕ್ಷಣ ಮತ್ತು ವಿಶ್ವವಿದ್ಯಾನಿಲಯಗಳನ್ನು ವೈಭವೀಕರಿಸುವುದು ನಮ್ಮ ಶಿಕ್ಷಣ ವ್ಯವಸ್ಥೆಯ ಗುರಿಯಾಗಬಾರದು ಎಂದು ಗುರುದೇವರು ನಂಬಿದ್ದರು. ಉರು ಹೊಡೆಯಲು ಹೇಳಿಕೊಡುವ ಶಿಕ್ಷಣಕ್ಕೆ ವಿರುದ್ಧವಾಗಿ ಗುರುದೇವ ರವೀಂದ್ರನಾಥ ಟ್ಯಾಗೋರ್‌ವರು ಶಿಕ್ಷಣದ ಈ ಹೊಸ ಕಲ್ಪನೆಯನ್ನು ಮುಂದಿಟ್ಟಿದ್ದರು ಎಂದು ಟ್ಯಾಗೋರ್ ಅಮರ ಕೃತಿಗಳನ್ನು ಅಪಾರವಾಗಿ ಓದುವ, ಗೃಹ ಸಚಿವರು ಅಭಿಪ್ರಾಯಪಟ್ಟಿದ್ದಾರೆ.

ಶಾಂತಿನಿ ಕೇತನದಲ್ಲಿ, ಟ್ಯಾಗೋರ್‌ವರು ಪ್ರಾಚೀನ ಭಾರತೀಯ ಜ್ಞಾನ ವ್ಯವಸ್ಥೆಯನ್ನು ಆಧುನಿಕ ಕಲಿಕೆಯ ತಂತ್ರಗಳೊಂದಿಗೆ ಸಂಯೋಜಿಸಿದ್ದರು. ಹಾಗೇ ಮಾತೃಭಾಷೆಯಲ್ಲಿನ ಕಲಿಕೆಗೆ ಅತ್ಯುನ್ನತ ಮಹತ್ವ ನೀಡಿದ್ದರು.

ಒಬ್ಬ ವ್ಯಕ್ತಿ ತನ್ನ ಮಾತೃಭಾಷೆಯನ್ನು ಬಳಸದೆ ತನ್ನ ಅಂತರಂಗವನ್ನು ಅನ್ವೇಷಿಸಲು ಸಾಧ್ಯವಿಲ್ಲ ಎಂದು ಅವರು ನಂಬಿದ್ದರು. ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಮಾತೃಭಾಷೆಯಲ್ಲಿನ ಶಿಕ್ಷಣವನ್ನು ಅಳವಡಿಸಿಕೊಳ್ಳುವುದಕ್ಕೆ ಟ್ಯಾಗೋರ್‌ವರ ಬೋಧನೆಗಳೆ ಪ್ರಮುಖ ಕಾರಣ ಎಂದು ಸ್ಪಷ್ಟಪಡಿಸಿದ್ದಾರೆ.

ಬ್ರಿಟಿಷರು ಪರಿಚಯಿಸಿದ ಶಿಕ್ಷಣ ಪದ್ಧತಿಗಳು ಮತ್ತು ಗಿಳಿ ಪಾಠ ವಿಧಾನಗಳನ್ನು ವಿರೋಧಿಸಿ, ಶಾಂತಿನಿಕೇತನದ ಮೂಲಕ ಮಾನವ ಸಾಮಥ–ರ್ಯದ ಅನಂತ ವಿಕಾಸದೆತ್ತರಕ್ಕೆ ಒಯ್ಯುವ ಶಿಕ್ಷಣ ವ್ಯವಸ್ಥೆಯನ್ನು ಪರಿಚಯಿಸಿದರು. ಇದು ನಾವೆಲ್ಲರೂ ಪಾಲಿಸಬೇಕಾದ ಮತ್ತು ಪ್ರಪಂಚದ ಮುಂದೆ ಹೆಮ್ಮೆಯಿಂದ ಪ್ರದರ್ಶಿಸುವ ಪರಂಪರೆಯಾಗಿದೆ ಎಂದು ಶಾ ಹೇಳಿದ್ದಾರೆ.

# ಜಿದ್ದಾಜಿದ್ದಿನ ಚುನಾವಣಾ ಕಣಕ್ಕೆ ನಾಳೆ ಫಲಿತಾಂಶ



ಬೆಂಗಳೂರು: ತೀವ್ರ ಜಿದ್ದಾಜಿದ್ದಿನ ಕಣವಾಗಿರುವ ರಾಜ್ಯ ವಿಧಾನಸಭಾ ಚುನಾವಣೆಗೆ ಶಾಂತಿಯುತ ಮತದಾನ ನಡೆದಿದ್ದು, ಶನಿವಾರ ಬೆಳಗ್ಗೆ 8 ಗಂಟೆಯಿಂದ ಮತ ಎಣಿಕೆ ನಡೆಯಲಿದೆ. ಚುನಾವಣಾ ಅಖಾಡಕ್ಕಿಳಿದಿರುವ 2615 ಅಭ್ಯರ್ಥಿಗಳ ರಾಜಕೀಯ ಭವಿಷ್ಯವನ್ನು ಮತದಾರರು ಬರೆದಿದ್ದು, ಶನಿವಾರ ಮಧ್ಯಾಹ್ನದ ವೇಳೆಗೆ ಕಣದಲ್ಲಿರುವ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ಪ್ರಕಟವಾಗಲಿದೆ.

ರಾಜ್ಯದ 37,777 ಸ್ಥಳಗಳಲ್ಲಿ ಸ್ಥಾಪನೆಯಾಗಿರುವ ಒಟ್ಟು 58,545 ಮತಗಟ್ಟೆಗಳಲ್ಲಿ ಮತದಾನವಾಗಿದೆ. ಕಳೆದೊಂದು ತಿಂಗಳಿನಿಂದ ನಡೆದ ವಾಕ್ಸಮರ, ಟೀಕೆ, ಪ್ರತ್ಯುತ್ತರ ಸೇ–ರಿದಂತೆ ಜಿದ್ದಾಜಿದ್ದಿ ಪೈಪೋಟಿಗೆ ಬುಧವಾರ ತೆರೆಬಿದ್ದಿರುವ ಹಿನ್ನೆಲೆಯಲ್ಲಿ ಅಭ್ಯರ್ಥಿಗಳು ಇನ್ನೆರಡು ದಿನ ಸೋಲು–ಗೆಲುವಿನ ಲೆಕ್ಕಾಚಾರದಲ್ಲಿ ತೊಡಗಲಿದ್ದಾರೆ. ಇದಕ್ಕೆಲ್ಲಾ ಶನಿವಾರ ಮಧ್ಯಾಹ್ನದ ವೇಳೆಗೆ ಫಲಿತಾಂಶವೇ ಉತ್ತರ ಹೇಳಲಿದೆ.

ಬಿಜೆಪಿಯಿಂದ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಕೇಂದ್ರ ಗೃಹ ಸಚಿವ ಅಮಿತ್ ಶಾ, ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ರಾಜ್ಯದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್, ಕಾಂಗ್ರೆಸ್‌ನಿಂದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಷ್ಟ್ರೀಯ ನಾಯಕರಾದ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್, ಜೆಡಿಎಸ್‌ನಿಂದ ರಾಷ್ಟ್ರೀಯ ಅಧ್ಯಕ್ಷ ಎಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಮೊದಲಾದವರು ಭರ್ಜರಿ ಪ್ರಚಾರ ನಡೆಸಿದ್ದರು. ಅವರ ಪ್ರಯತ್ನದ ಫಲ ಶನಿವಾರ ಫಲಿತಾಂಶದ ಮೂಲಕ ಹೊರಬೀಳಲಿದೆ.

ಅಖಾಡದಲ್ಲಿರುವ 2615 ಅಭ್ಯರ್ಥಿಗಳಲ್ಲಿ 2430 ಅಭ್ಯರ್ಥಿಗಳು ಪುರುಷರು, 184 ಅಭ್ಯರ್ಥಿಗಳು ಮಹಿಳೆಯರು ಮತ್ತು ಒಬ್ಬರು ತೃತೀಯ ಲಿಂಗಿಯಾಗಿದ್ದಾರೆ. ಬಿಜೆಪಿಯಿಂದ 224 ಕ್ಷೇತ್ರದಲ್ಲಿ ಅಭ್ಯರ್ಥಿಗಳು ಕಣದಲ್ಲಿದ್ದರೆ, ಕಾಂಗ್ರೆಸ್‌ನಿಂದ 223 ಕ್ಷೇತ್ರದಲ್ಲಿ ಹುರಿಯಾಳು ಗಳಿದ್ದಾರೆ. ಜೆಡಿ–ಎಸ್‌ನಿಂದ 209 ಕ್ಷೇತ್ರದಲ್ಲಿ ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ. ಎಎಪಿಯಿಂದ 209, ಸಿಪಿಐಎಂನಿಂದ 4, ಬಿಎಸ್‌ಪಿಯಿಂದ 133, ಎನ್‌ಪಿಪಿ 2 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ನೋಂದಾಯಿತ ಮಾನ್ಯತೆ ಪಡೆಯದ ಪಕ್ಷದಿಂದ 254 ಮತ್ತು ಪಕ್ಷೇತರ 918 ಅಭ್ಯರ್ಥಿಗಳು ಸ್ಪರ್ಧಿಸಿದ್ದಾರೆ. ಇವರೆಲ್ಲರ ರಾಜಕೀಯ ಭವಿಷ್ಯ ಮತಯಂತ್ರದಲ್ಲಿ ಭದ್ರವಾಗಿದೆ.

ಮತ ಎಣಿಕೆಯು ಆಯಾ ಜಿಲ್ಲಾ ಕೇಂದ್ರದಲ್ಲಿ ಬಿಗಿ ಭದ್ರತೆಯಲ್ಲಿ ನಡೆಯಲಿದೆ. ಈಗಾಗಲೇ ಎಲ್ಲಾ ಮತಯಂತ್ರಗಳನ್ನು ಸಂಬಂಧಪಟ್ಟಜಿಲ್ಲೆಯ ಭದ್ರತಾ ಕೊಠಡಿಯಲ್ಲಿ ಭದ್ರವಾಗಿಡಲಾಗಿದೆ. ಶನಿವಾರ ಬೆಳಗ್ಗೆ ಭದ್ರತಾ ಕೊಠಡಿಯಿಂದ ಮತಯಂತ್ರಗಳನ್ನು ತಂದು ಎಣಿಕೆ ಮಾಡಲಾಗುತ್ತದೆ. ಮತಯಂತ್ರ ಇಟ್ಟಿರುವ ಭದ್ರತಾ ಕೊಠಡಿಗೆ ಎರಡು ದಿನಗಳ ಪೊಲೀಸ್ ಕಣ್ಗಾವಲು ಇಡಲಾಗಿದೆ.

# ರಿಲ್ಯಾಕ್ಸ್ ಮೂಡ್‌ನಲ್ಲಿ ನಾಯಕರು



ದೇವರಹಿಪ್ಪರಗಿ: ವಿಧಾನಸಭೆ ಚುನಾವಣೆಯ ಭವಿಷ್ಯ ಮತಪೆಟ್ಟಿಗೆಯಲ್ಲಿ ಭದ್ರವಾಗುತ್ತಿದ್ದಂತೆ ಕ್ಷೇತ್ರದ ಅಭ್ಯರ್ಥಿಗಳು ರಿಲ್ಯಾಕ್ಸ್ ಮೂಡ್‌ನಲ್ಲಿರುವ ಜತೆಗೆ ತಮ್ಮ ಆಪ್ತರೊಂದಿಗೆ ಸೋಲು–ಗೆಲುವಿನ ಲೆಕ್ಕಾಚಾರದಲ್ಲಿ ನಿರತರಾಗಿದ್ದಾರೆ. ಚುನಾವಣೆಗೆ ದಿನಾಂಕ ಘೋಷಣೆ ಆಗುವ ಮುನ್ನವೇ ರಣ ಕಣ ಮೊಳಗಿಸಿದ್ದ ಕ್ಷೇತ್ರದ ಜೆಡಿಎಸ್, ಬಿಜೆಪಿ ಮತ್ತು ಕಾಂಗ್ರೆಸ್ ಅಭ್ಯರ್ಥಿಗಳು, ಗುರುವಾರ ನಿರಾಳರಾದಂತೆ ಕಂಡುಬಂದರು. ಬೆಳಗ್ಗೆಯಿಂದ ತಡರಾತ್ರಿ ವರೆಗೆ ಕಾರ್ಯಕರ್ತರ ಜತೆ ಪ್ರಚಾರ ನಡೆಸುತ್ತಿದ್ದ ಅಭ್ಯರ್ಥಿಗಳು ತಮ್ಮ ನಿವಾಸ ಮತ್ತು ಕಚೇರಿಯಲ್ಲಿ ಕಾಲ ಕಳೆದರು.

ಜೆಡಿಎಸ್ ಅಭ್ಯರ್ಥಿ ರಾಜುಗೌಡ ಪಾಟೀಲ ಕುದುರಿಸಾಲವಾಡಗಿ ಅವರು ತಮ್ಮ ನಿವಾಸದಲ್ಲಿ ಕುಟುಂಬದ ಸದಸ್ಯರ ಜತೆ ಬೆಳಗ್ಗೆ ಕೆಲ ಕಾಲ ಕಳೆದರೆ ನಂತರ ಪಕ್ಷದ ಕಾರ್ಯಕರ್ತರು ಮತ್ತು ಆಪ್ತರ ಜತೆ ಮತ ಏಣಿಕೆ ಲೆಕ್ಕಾಚಾರದಲ್ಲಿ ನಿರತರಾಗಿದ್ದರು ಮದ್ಯಾಹ್ನ ಕ್ಷೇತ್ರದ ಹಲವು ಗ್ರಾಮಗಳಿಗೆ ತೆರಳಿ ಕಾರ್ಯಕ್ರಮಗಳಲ್ಲಿ ಭಾಗಿಯಾದರು.

ಬಿಜೆಪಿ ಅಭ್ಯರ್ಥಿ ಸೋಮನಗೌಡ ಪಾಟೀಲ ಸಾಸನೂರ ಅವರು ತಮ್ಮ ನಿವಾಸದಲ್ಲಿ ಕುಟುಂಬದ ಸದಸ್ಯರ ಜತೆ ಕಾಲ ಕಳೆದರು ಹಾಗೂ ಪಕ್ಷದ ಕಾರ್ಯಕರ್ತರು ಮತ್ತು ಆಪ್ತರ ಜತೆ ಮತ ಏಣಿಕೆ ಲೆಕ್ಕಾಚಾರದಲ್ಲಿ ನಿರತರಾಗಿದ್ದರು.ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಸುಣಗಾರ ಅವರು ಪಕ್ಷದ ಕಾರ್ಯಕರ್ತರು ಮತ್ತು ಆಪ್ತರ ಜತೆ ಮತ ಏಣಿಕೆ ಸೋಲು ಗೆಲುವು ಲೆಕ್ಕಾಚಾರದಲ್ಲಿ ನಿರತರಾಗಿದ್ದರು.

**ಚುನಾವಣೆಗೆ ಸಹಕರಿಸಿದ ಜನತೆ, ಕಾರ್ಯಕರ್ತರಿಗೆ ರಾಜಕೀಯ ನಾಯಕರ ಧನ್ಯವಾದ ಅರ್ಪಣೆ**

ವಿಧಾನಸಭೆ ಚುನಾವಣೆಗೆ ಮತದಾನ ಪ್ರಕ್ರಿಯೆ ಮುಗಿಯುತ್ತಿದ್ದಂತೆ ನಾನಾ ಪಕ್ಷಗಳ ರಾಜಕೀಯ ನಾಯಕರು ನಿಟ್ಟುಸಿರು ಬಿಟ್ಟಿದ್ದು, ಮತದಾನ ನಡೆಸಿದ ರಾಜ್ಯದ ಜನತೆ ಹಾಗೂ ಚುನಾವಣೆ ಚಟುವಟಿಕೆಯಲ್ಲಿ ಸಕ್ರಿಯರಾಗಿದ್ದ ಮುಖಂಡರು, ಕಾರ್ಯಕರ್ತರಿಗೆ ಧನ್ಯವಾದ ಅರ್ಪಿಸಿದ್ದಾರೆ.

ಚುನಾವಣೆ ಘೋಷಣೆಗೂ ಮೊದಲಿನಿಂದಲೇ ಬಹುತೇಕ ಎಲ್ಲ ಪಕ್ಷಗಳ ಮುಖಂಡರು, ಕಾರ್ಯಕರ್ತರು ಸಾರ್ವಜನಿಕ ಸಭೆ, ಬಹಿರಂಗ ಸಮಾವೇಶ, ರೋಡ್ ಶೋ, ಮನೆ ಮನೆ ಪ್ರಚಾರ ಸೇರಿದಂತೆ ನಾನಾ ರೀತಿಯ ಪ್ರಚಾರ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದ ಮತದಾನದ ದಿನವೂ ತಮಗೆ ವಹಿಸಲಾದ ಜವಾಬ್ದಾರಿ ನಿರ್ವಹಣೆಯಲ್ಲೆ? ನಿರತರಾಗಿದ್ದರು. ಹಾಗಾಗಿ ಮತದಾನ ಪ್ರಕ್ರಿಯೆ ಮುಗಿಯುತ್ತಿದ್ದಂತೆ ಎಲ್ಲ ಪಕ್ಷಗಳ ನಾಯಕರು ತಮ್ಮ ತಮ್ಮ ಪಕ್ಷಗಳ ಮುಖಂಡರು, ಕಾರ್ಯಕರ್ತ–ರಿಗೆ ಧನ್ಯವಾದ ಹೇಳುವ ಮೂಲಕ ಕೃತಜ್ಞತೆ ಅರ್ಪಿಸಿದ್ದಾರೆ.

## ತಾಯಿಯ ಅಂತ್ಯಕ್ರಿಯೆ ಮುಗಿಸಿ ಕೆಲಸಕ್ಕೆ ಹಾಜರಾದ ಸಿಬ್ಬಂದಿ: ಡಿಜಿಪಿ ಸೂದ್ ಮೆಚ್ಚುಗೆ



ತಾಯಿಯ ಅಂತ್ಯಕ್ರಿಯೆ ಮುಗಿಸಿ ಕೆಲಸಕ್ಕೆ ಹಾಜರಾದ ಪೊಲೀಸ್ ಸಿಬ್ಬಂದಿಯ ಕಾರ್ಯ ವೈಖರಿಗೆ ಡಿಜಿ, ಐಜಿಪಿ ಪ್ರವೀಣ್ ಸೂದ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲ್ಪಟ್ಟ ನಮ್ಮ ಸಿಬ್ಬಂದಿಯೊಬ್ಬರ ತಾಯಿ ನಿಧನರಾಗಿದ್ದರು.

ಅವರಿಗೆ ರಜೆ ತೆಗೆದುಕೊಳ್ಳಿ ಎಂದು ತಿಳಿಸಿದ್ದರೂ ರಜೆ ತೆಗೆದುಕೊಳ್ಳದೇ ಕರ್ತವ್ಯ ನಿಭಾಯಿಸಿದ್ದಾರೆ. ಇದು ಹೆಮ್ಮೆ ಪಡುವ ವಿಷಯ ಎಂದು ಹೇಳಿದ್ದಾರೆ. ಅಷ್ಟೇ ಅಲ್ಲದೆ, ಕರ್ತವ್ಯದಲ್ಲಿ ಬದ್ಧತೆ ತೋರಿದ ಪೊಲೀಸ್ ಸಿಬ್ಬಂದಿಯನ್ನು ಸಹೋದ್ಯೋಗಿಗಳು ಸನ್ಮಾನಿಸಿದ ವಿಡಿಯೋ ಶೇರ್ ಮಾಡಿದ್ದಾರೆ. ಪ್ರವೀಣ್ ಸೂದ್ ತಮ್ಮ ಟ್ವಿಟರ್ ಖಾತೆಯಲ್ಲಿ ವಿಡಿಯೋವೊಂದನ್ನು ಹಂಚಿಕೊಂಡಿದ್ದು, ಈ ವಿಡಿಯೋದಲ್ಲಿ ಮಾತನಾಡಿದ ಪೊಲೀಸ್ ಸಿಬ್ಬಂದಿ, "ನನ್ನ ತಾಯಿಗೆ ಹುಷಾರಿರಲಿಲ್ಲ, ಅವರಿಗೆ 80 ವರ್ಷ. ಒಂದು ವರ್ಷದ ಹಿಂದೆ ಜಾರಿಬಿದ್ದು ಕಾಲಿಗೆ ಏಟು ಮಾಡಿಕೊಂಡಿದ್ದರು.

ಆಪರೇಷನ್ ಮಾಡಿಸಿದ್ದರೂ ಸರಿಯಾಗಿರಲಿಲ್ಲ. ನಿನ್ನೆ ಸ್ವಲ್ಪ ಉಸಿರಾಟದ ತೊಂದರೆಯಾಗಿದ್ದು, ಬೆಳಗಿನ ಜಾವ ತೀರಿಕೊಂಡರು. ಮನೆಯಲ್ಲಿ ಅಣ್ಣ ಇದ್ದಾನೆ, ಉಳಿದ ಎಲ್ಲ ಕಾರ್ಯಕ್ರಮಗಳನ್ನು ಮನೆಯವರು ನೋಡಿಕೊಳ್ಳುತ್ತಾರೆ ಎಂದು ತಿಳಿದು, ಎಲೆಕ್ಷನ್ ಡ್ಯೂಟಿ ಇರುವ ಕಾರಣ ನಾನು ಕೆಲಸಕ್ಕೆ ಬಂದಿದ್ದೇನೆ. ನಮ್ಮನ್ನು ಹೆತ್ತು ಹೊತ್ತ ಸಾಕಿದ ತಾಯಿ ಸಾವನ್ನಪ್ಪಿದ್ದಾರೆ. ಈಗ ನಮ್ಮನ್ನು ಸಲಹಿ, ಜೋಪಾನ ಮಾಡುತ್ತಿರುವುದು ಪೊಲೀಸ್ ಇಲಾಖೆ, ಇದು ಸಹ ನಮ್ಮ ತಾಯಿಯೇ. ಇಬ್ಬರೂ ತಾಯಂದಿರು ಒಂದೇ" ಎನ್ನುವ ಮೂಲಕ ಕೆಲಸ ಮೇಲಿನ ವಿಶೇಷ ಆಸಕ್ತಿ ವ್ಯಕ್ತಪಡಿಸಿದ್ದಾರೆ.

# ಸಿಡಿ ಬಿಡುಗಡೆ ಮಾಡುವುದಾಗಿ ಡಿಕೆಶಿ ಬ್ಲ್ಯಾಕ್ ಮೇಲ್: ರಮೇಶ್ ಜಾರಕಿಹೊಳಿ ಆರೋಪ



ಬೆಳಗಾವಿ: ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ತಮಗೆ ಬ್ಲಾಕ್ ಮೇಲ್ ಮಾಡಿದ್ದಾರೆ ಎಂದು ಮಾಜಿ ಸಚಿವ, ಬಿಜೆಪಿ ಅಭ್ಯರ್ಥಿ ರಮೇಶ್ ಜಾರಕಿಹೊಳಿ ಗಂಭೀರ ಆರೋಪ ಮಾಡಿದ್ದಾರೆ.

ಗೋಕಾಕ್ನಲ್ಲಿ ಮಾಧ್ಯಮ ಪ್ರತನಿಧಿಗಳೊಂದಿಗೆ ಮಾತನಾಡಿದ ಅವರು ಮಂಗಳವಾರ ಮಧ್ಯರಾತ್ರಿ 12.30ಕ್ಕೆ ನನಗೆ ಡಿ.ಕೆ.ಶಿವಕುಮಾರ್ ಕರೆ ಮಾಡಿ ಸಿಡಿ ಬಿಡುಗಡೆ ಮಾಡುತ್ತೇನೆ ಅಂತ ಡಿಕೆ ಶಿವಕುಮಾರ್ ಬ್ಲ್ಯಕ್ಮೇಲ್ ಮಾಡಿದ್ದಾನೆ. ಬಿಡು ಮಗನೆ ನಾನು ಗಟ್ಟಿಯಾಗಿದ್ದೀನಿ ಅಂತ ಹೇಳಿದ್ದೇನೆ.

ಬೆಳಗಾವಿ ಗ್ರಾಮೀಣ ಕ್ಷೇತ್ರದಿಂದ ಹಿಂದೆ ಸರಿಯಲ್ಲ ಅಂದರೇ ನಿನ್ನ ಬಿಡುವುದಿಲ್ಲ ಅಂತ ಹೇಳಿದ. ಬೇಕಾದ್ದೂ ಆಗಲಿ ಬಿಜೆಪಿ ನನ್ನ ಮೇಲೆ ವಿಶ್ವಾಸ ಇಟ್ಟಿದೆ ನಾನು ಹಿಂದೆ ಸರಿಯಲ್ಲ ಎಂದಿದ್ದೇನೆ. ತಕ್ಷಣ ಸಿಡಿ ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ರಮೇಶ್ ಜಾರಕಿಹೊಳಿ ಒತ್ತಾಯಿಸಿದರು.

ಇನ್ನು ರಮೇಶ್ ಜಾರಕಿಹೊಳಿ ಹೇಳಿಕೆ ನೀಡಿದ್ದೇ ತಡ ಲಕ್ಷ್ಮೀ ಹೆಬ್ಬಾಳ್ಕರ್ ಸಹೋದರ ಎಂಎಲ್ಸಿ ಚನ್ನರಾಜ ಹಟ್ಟಿಹೊಳಿ ದಿಢೀರ್ ಸುದ್ದಿಗೋಷ್ಠಿ ಕರೆದರು.

ಬೆಳಗಾವಿಯ ತಮ್ಮ ಗೃಹಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಎಂಎಲ್ಸಿ ಚನ್ನರಾಜ ಹಟ್ಟಿಹೊಳಿ ರಮೇಶ್ ಜಾರಕಿಹೊಳಿ ವಿರುದ್ಧ ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಾರೆ. ಅಥ–ಣಿ, ಕಾಗವಾಡ, ಬೆಳಗಾವಿ ಗ್ರಾಮೀಣ, ಗೋಕಾಕ್ ಕ್ಷೇತ್ರದಲ್ಲಿ ಕಾಂಗ್ರೆಸ್ ಗೆಲ್ಲಲಿದೆ. ಕಾಂಗ್ರೆಸ್ ಗೆಲ್ಲುತ್ತೆ ಅಂತ ಈ ರೀತಿ ಹೇಳಿಕೆ ನೀಡಿದ್ದಾರೆ. ಒಂದು ವೇಳೆ ಡಿ.ಕೆ.ಶಿವಕುಮಾರ್ ಕರೆ ಮಾಡಿದ್ದರೆ ಅದರ ಸ್ಕ್ರೀನ್ಶಾಟ್ ಅಥವಾ ರೆಕಾರ್ಡ್ ಬಿಡುಗಡೆ ಮಾಡಲಿ ಎಂದು ಸವಾಲು ಹಾಕಿದ್ದಾರೆ.

# ರಿಲ್ಯಾಕ್ಸ್ ಮೂಡನಲ್ಲಿ ಸತೀಶ್ ಸಾಹುಕಾರ್



ಬೆಳಗಾವಿ: ರಾಜ್ಯ ವಿಧಾನಸಭೆಗೆ ಚುನಾವಣೆ ಮುಗಿದಿದ್ದು, ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿಯವರು ಗೋಕಾಕ ಪಟ್ಟಣದ ಹೊರ ವಲಯದ ಮಾರ್ಕಂಡೇಯ ನದಿ ಪಕ್ಕದಲ್ಲಿರುವ ಯೋಗಿ ಕೊಳ್ಳದ ಬಳಿ ಉಪಹಾರ ಸವಿದು ರಿಲ್ಯಾಕ್ಸ್ ಮೂಡ್ನಲ್ಲಿ ಸಮಯ ಕಳೆದರು.

ಸದಾ ಸರಳತೆಗೆ ಹೆಸರುವಾಸಿಯಾಗಿರುವ ಸತೀಶ್ ಜಾರಕಿಹೊಳಿ ಅವರನ್ನು ಯೋಗಿ ಕೊಳ್ಳದ ಬಳಿ ನೋಡಿದ ಯುವಕರು ಖುಷಿ ವ್ಯಕ್ತಪಡಿಸಿ, ಅವರೊಂದಿಗೆ ಸೆಲ್ಫಿ ತೆಗೆದುಕೊಂಡು ಸಂತಸ ಪಟ್ಟರು.

ಕರ್ನಾಟಕ ವಿಧಾನಸಭೆ ಮತದಾನಕ್ಕೆ ಬುಧವಾರ ತೆರೆ ಬಿದ್ದಿದೆ. 2023ರಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲೇಬೇಕೆಂದು ಸತೀಶ್ ಜಾರಕಿಹೊಳಿಯವರು ಕಳೆದ ನಾಲ್ಕು ತಿಂಗಳಿಂದ ದಿನದ 18 ಗಂಟೆ ರಾಜ್ಯಾದ್ಯಂತ ಸುತ್ತಿದ್ದು, ಬೆಳಗಾವಿ ಜಿಲ್ಲೆಯಲ್ಲಿಯೂ 18 ಕ್ಷೇತ್ರಗಳ ಪೈಕಿ 12ರಿಂದ 14 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಗೆಲ್ಲಬೇಕೆಂದು ಪಕ್ಷವನ್ನು ಸಂಘಟಿಸಿದ್ದರು.

ಇದೇ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ 122 ರಿಂದ 140 ಸ್ಥಾನಗಳಿಸಲಿದೆ ಎಂದು ಇಂಡಿಯಾ ಟುಡೇ, ಆಕ್ಸಿಸ್ ಮೈ ಇಂಡಿಯಾ ಸಮೀಕ್ಷೆ ತಿಳಿಸಿದೆ. 'ನಾವು ಕೊಟ್ಟಂತ ಗ್ಯಾರಂಟಿಗಳನ್ನು ನಂಬಿ, ಬಿಜೆಪಿ ಭ್ರಷ್ಟಾಚಾರಕ್ಕೆ ಬೇಸತ್ತು ರೈತರು, ಮಹಿಳೆಯರು, ಯುವಕರು ಎಲ್ಲಾ ವರ್ಗದ ಜನ ನಮ್ಮ ಕೈ ಹಿಡಿದಿದ್ದಾರೆ. ಅತಂತ್ರ ಪರಿಸ್ಥಿತಿ ನಮಗೆ ಬರುವುದಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

# 5ನೇ ಬಾರಿ ಗೆಲುವು ನನ್ನದೆ: ವಿಶ್ವಾಸ ವ್ಯಕ್ತಪಡಿಸಿದ ರಾಜು ಕಾಗೆ



ಮೋಳೆ: ಕಳೆದ ಹದಿನೈದು ಇಪ್ಪತ್ತು ದಿನಗಳಿಂದ ಎಡೆಬಿಡದೇ ಬಿರುಸಿನ ಪ್ರಚಾರ ನಡೆಸಿದ್ದ ಕಾಗವಾಡ ವಿಧಾನಸಭಾ ಮತಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ರಾಜು ಕಾಗೆ ಗುರುವಾರ ರಿಲ್ಯಾಕ್ಸ್ ಮೂಡ್‌ನಲ್ಲಿ ಕಾಲ ಕಳೆದರು. ಬುಧವಾರವಷ್ಟೇ ಕ್ಷೇತ್ರದ ಉಪಚುನಾವಣೆಗೆ ಮತದಾನ ನಡೆದಿದ್ದನ್ನು ಇಲ್ಲಿ ಸ್ಮರಿಸಬಹುದಾಗಿದೆ.

ರಾಜ್ಯದಲ್ಲಿಯೇ ತೀವ್ರ ಜಿದ್ದಾಜಿದ್ದಿನಿಂದ ಕೂಡಿದ್ದ ಕಾಗವಾಡ ವಿಧಾನಸಭಾ ಮತಕ್ಷೇತ್ರದ ಚುನಾವಣೆಯಲ್ಲಿ ಕಾಂಗ್ರೆಸ್‌ನ ರಾಜು ಕಾಗೆ ಹಾಗೂ ಬಿಜೆಪಿ ಶ್ರೀಮಂತ ಪಾಟೀಲ ಮಧ್ಯೆ ತುರುಸಿನ ಪೈಪೋಟಿ ಏರ್ಪಟಿದ್ದು, ಎರಡೂ ಪಕ್ಷಗಳು ಕ್ಷೇತ್ರವನ್ನು ಪ್ರತಿಷ್ಠೆಯನ್ನಾಗಿ ತೆಗೆದುಕೊಂಡಿವೆ. ಹೀಗಾಗಿ, ಪ್ರಚಾರದ ಭರಾಟೆ ಬಿರುಸಾಗಿ ನಡೆದಿತ್ತು.

ಆದರೆ, ಬುಧವಾರ ಮತದಾನ ಮುಗಿದಿದ್ದು, ಗುರುವಾರ ರಾಜು ಕಾಗೆಯವರು ಬೆಳಿಗ್ಗೆ ಕುಟುಂಬದ ಸದಸ್ಯರೊಂದಿಗೆ ಸಂತಸದ ಸಮಯ ಕಳೆದರು. ಮನೆಯವರೊಂದಿಗೆ ಸೇರಿ ಬೆಳಿಗ್ಗೆ ಉಪಹಾರ ಸೇವಿಸಿದ ನಂತರ ಕೆಲ ಸಮಯ ಹರಟೆ ನಡೆಸಿ ಹಾಸ್ಯ ಚಟಾಕಿಗಳನ್ನು ಹಾರಿಸಿದರು.

ಬಳಿಕ ಮನೆಗೆ ಆಗಮಿಸಿದ ಕ್ಷೇತ್ರದ ಕಾಂಗ್ರೆಸ್ ಕಾರ್ಯಕರ್ತರು, ಭಿಮಾನಿಗಳು ಹಾಗೂ ಮುಖಂಡರನ್ನು ಭೇಟಿಯಾದರು. ಈ ಸಂದರ್ಭದಲ್ಲಿ ಚುನಾವಣೆ ಸಂದರ್ಭದಲ್ಲಿನ ಪ್ರಚಾರ, ಜಾತಿ ಲೆಕ್ಕಾಚಾರ, ಯಾವ್ಯಾವ ಮತಗಟ್ಟೆಯಲ್ಲಿ ಎಷ್ಟೆಷ್ಟು ಮತಗಳು ಬರಬಹುದೆಂಬ ಲೆಕ್ಕಾಚಾರ ಕು–ರಿತೂ ಕಾರ್ಯಕರ್ತರೊಂದಿಗೆ ಚರ್ಚೆ ನಡೆಸಿದರು.

ಗುರುವಾರ ಕಾರ್ಯಕರ್ತರು, ಮುಖಂಡರ ಜೊತೆಗೆ ನಡೆಸಿದ ಸಮಾಲೋಚನೆ ಸಂದರ್ಭದಲ್ಲಿ ಹರ್ಷಚಿತ್ತರಾಗಿಯೇ ಕಂಡು ಬಂದ ರಾಜು ಕಾಗೆ, ಐದನೇ ಬಾರಿ ಗೆಲುವು ಖಚಿತ ಎಂಬುದನ್ನು ಆತ್ಮ ವಿಶ್ವಾಸದಿಂದಲೇ ಹೇಳಿಕೊಂಡರು.

ಮುಖಂಡರಾದ ಅಣ್ಣಾಸಾಬಾಬ ಪಾಟೀಲ, ಕಾಕಾ ಪಾಟೀಲ, ಪ್ರವೀಣ ಗಾಣಿಗೇರ, ಸಂಜಯ ಭಿರಡಿ, ಅರುಣ ಗಾಣಿಗೇರ, ಪ್ರಶಾಂತ ಅಪರಾಜ, ಸಂಜಯ ಕುಚನುರೆ, ವಿಶ್ವನಾಥ ಪೊಲೀಸ ಪಾಟೀಲ. ಸೌರಭ ಪಾಟೀಲ, ರೇಖಾ ಪುಂಜಪ್ಪಗೊಳ, ವಿನೋದ ಸಾವಡಕರ, ಸುರೇಶ ಗಾಣಿಗೇರ, ವಿನೋದ ಬರಗಾಲೆ,ವಸಂತ ಖೋತ,ರವೀಂದ್ರ ಪೂಜಾರಿ, ಅಜೀತ ಚೌಗುಲೆ, ರಮೇಶ ಚೌಗುಲೆ, ನಾಥಗೌಡ ಪಾಟೀಲ, ಜ್ಯೋತಿಕುಮಾರ ಪಾಟೀಲ, ಚಿದಾನಂದ ಮಾಳಿ,ಮುಕುಂದ ಪುಜಾರಿ,ವಿರುಪಾಕ್ಷ ಡೂಗನವರ, ಪ್ರಕಾಶ ಕೋರ್ಬು, ಮಹೇಶ ಸೊಲ್ಲಾಪುರೆ, ಉಮೇಶ ಪಾಟೀಲ, ಬಾಹುಬಲಿ ಕುಸನಾಳೆ, ಸಂಜು ಕುಸನಾಳೆ, ಗುರುರಾಜ ಮಡಿವಾಳರ, ವಿಶ್ವನಾಥ ನಾಮದಾರ, ಅನೀಲ ಸತ್ತಿ, ಬಸನಗೌಡ ಪಾಟೀಲ (ಬೊಮ್ಮಾಳ) ಚಿದಾನಂದ ಕೋರ್ಬು, ರಾಜು ಮುಜಾವರ, ರಾಜು ಮದನೆ,ರಾಜು ಅವಟಿ, ಗುಳಪ್ಪ ಜತ್ತಿ, ಶಿವಾನಂದ ಗೊಲಬಾವಿ, ವಿಠ್ಠಲ ಗಾಡಿವಡ್ಡರ, ಸೇರಿದಂತೆ ಕ್ಷೇತ್ರದ ಹಲವಾರು ಗ್ರಾಮಗಳಿಂದ ಸಾವಿರಾರು ಕಾರ್ಯಕರ್ತರು ತಂಡೋಪ ತಂಡವಾಗಿ ಬಂದು ಬೆಟ್ಟಿಯಾಗಿ ಚುನಾವಣೆಯ ಅನುಭವಗಳನ್ನು ಹಂಚಿಕೊಂಡರು.

# ಶಿವಸೇನೆ v/s ಶಿವಸೇನೆ: ಠಾಕ್ರೆ ಸರ್ಕಾರ ಪುನಃಸ್ಥಾಪಿಸಲು ಸಾಧ್ಯವಿಲ್ಲ: ಸುಪ್ರೀಂ ಕೋರ್ಟ್



ನವದೆಹಲಿ: ಮಹಾರಾಷ್ಟ್ರದಲ್ಲಿ ಉದ್ಧವ್ ಠಾಕ್ರೆ ಬಣದ ಮಹಾರಾಷ್ಟ್ರ ವಿಕಾಸ ಅಘಾಡಿ ಸರ್ಕಾರದ ಸಾಧ್ಯವಿಲ್ಲ ಎಂದು ಸುಪ್ರೀಂಕೋರ್ಟ್ ಗುರುವಾರ ಹೇಳಿದೆ.

ಮಹಾರಾಷ್ಟ್ರ ಮೂಲ ಶಿವಸೇನೆಯಿಂದ ಬಂಡಾಯವೆದ್ದು ಏಕನಾಥ ಶಿಂಧೆ ಹಿಂದೆ ಹೋಗಿದ್ದ 16 ಮಂದಿ ಶಾಸಕರನ್ನು ಅನರ್ಹಗೊಳಿಸಬೇಕು ಎಂದು ಕೋರಿ ಮಾಜಿ ಸಿಎಂ ಉದ್ಧವ್ ಠಾಕ್ರೆ ಬಣ ಸಲ್ಲಿಸಿದ್ದ ಅರ್ಜಿ ಸೇರಿದಂತೆ 2 ತೀರ್ಪುಗಳನ್ನು ಸುಪ್ರಿ?ಂಕೋರ್ಟ್ ಇಂದು ಪ್ರಕಟಿಸಿದೆ.

ತೀರ್ಪು ಪ್ರಕಟಿಸಿರುವ ಸುಪ್ರೀಂಕೋರ್ಟ್, ಉದ್ಧವ್ ಠಾಕ್ರೆ ವಿಶ್ವಾಸಮತ ಸಾಬೀತು ಪಡಿಸದೆ ರಾಜೀನಾಮೆ ನೀಡಿದ್ದರಿಂದ ಸರ್ಕಾರವನ್ನು ಮರುಸ್ಥಾಪಿಸಲಾಗದು ಎಂದು ಹೇಳಿದೆ.

ಉದ್ಧವ್ ಠಾಕ್ರೆ ರಾಜೀನಾಮೆ ನೀಡಿದ್ದರಿಂದ ಏಕನಾಥ ಶಿಂಧೆ ನೇತೃತ್ವದ ಬಣವನ್ನು ಸರ್ಕಾರ ರಚನೆಗೆ ಆಹ್ವಾನಿಸಿರುವ ರಾಜ್ಯಪಾಲರ ಕ್ರಮ ಸರಿಯಾಗಿತ್ತು. ಆದರೆ ಠಾಕ್ರೆ ಸರ್ಕಾರ ಬಹುಮತ ಕಳೆದುಕೊಂಡಿದೆ ಎಂದು ಭಾವಿಸಿ ಸದನಲ್ಲಿ ಬಹುಮತ ಸಾಬೀತುಪಡಿಸಲು ಆದ–ೇಶಿಸಿದ್ದೂ ಸರಿಯಾದ ನಿರ್ಧಾರವಲ್ಲ ಎಂದು ರಾಜ್ಯಪಾಲರನ್ನು ತರಾಟೆಗೆ ತೆಗೆದುಕೊಂಡಿದೆ.

ಠಾಕ್ರೆ ಸರ್ಕಾರದ ಬಹುಮತವನ್ನು ರಾಜ್ಯಪಾಲರು ಅನುಮಾನಿಸುವುದಕ್ಕೆ ಸಾಧ್ಯವಿರಲಿಲ್ಲ. ಕೆಲವು ಶಾಸಕರು ಅತೃಪ್ತಿ ಹೊಂದಿದ್ದಾರೆ ಎನ್ನುವುದಷ್ಟೇ ವಿಶ್ವಾಸಮತ ಯಾಚನೆಗೆ ಸೂಚಿಸಲು ಸಾಕಾಗುವುದಿಲ್ಲ, "ಸದಸ್ಯರು ಬೆಂಬಲವನ್ನು ಹಿಂತೆಗೆದುಕೊಂಡಿದ್ದಾರೆ ಎನ್ನುವುದನ್ನು ಸೂಚಿಸುವ ಯಾವುದೇ ದಾಖಲೆಗಳಿರಲಿಲ್ಲ. ಉದ್ಧವ್ ಠಾಕ್ರೆ ಸರ್ಕಾರದ ಕೆಲವು ನೀತಿ ನಿರ್ಧಾರಗಳೊಂದಿಗೆ ಅವರು ಸಹಮತ ಹೊಂದಿರಲಿಲ್ಲ ಎನ್ನುವುದನ್ನಷ್ಟೇ ಲಭ್ಯ ಸಂವಹನವು ತೋರಿಸುತ್ತದೆ. ಅವರು (ಶಿಂಧೆ ಬಣ) ಈ ವಿಚಾರವಾಗಿ ಚರ್ಚಿಸುತ್ತಾರೆಯೇ ಅಥವಾ ಬೇರೆ ಪಕ್ಷದೊಂದಿಗೆ ವಿಲೀನಗೊಳ್ಳುತ್ತಾರೆಯೇ ಎನ್ನುವುದು ಸ್ಪಷ್ಟವಾಗಿರಲಿಲ್ಲ". ಹಾಗಾಗಿ ಉದ್ಧವ್ ಠಾಕ್ರೆ ಅವರು ಸದನದಲ್ಲಿ ಬಹುಮತ ಕಳೆದುಕೊಂಡಿದ್ದಾರೆ ಎಂದು ರಾಜ್ಯಪಾಲರು ನಿರ್ಧರಿಸುವಲ್ಲಿ ತಪ್ಪೆಸಗಿದ್ದಾರೆ ಎಂದು ನ್ಯಾಯಾಲಯ ಹೇಳಿತು.

ರಾಜ್ಯಪಾಲರು ವಸ್ತುನಿಷ್ಠ ಮಾನದಂಡಗಳನ್ನು ಬಳಸಬೇಕು, ವ್ಯಕ್ತಿನಿಷ್ಠ ತೃಪ್ತಿಯನ್ನಲ್ಲ. ಶಾಸಕರು ಸರ್ಕಾರ ತೊರೆಯಲು ಬಯಸಿದ್ದರು ಎಂದು ಒಂದು ವೇಳೆ ಭಾವಿಸಿದರೂ, ಅದು ಕೇವಲ ಅತೃಪ್ತಿಯನ್ನು ಮಾತ್ರ ಬಿಂಬಿಸುತ್ತದೆ. ಅರ್ಜಿದಾರರು ಯಥ–ಾಸ್ಥಿತಿಯನ್ನು ಕಾಪಾಡಿಕೊಳ್ಳಲು ಆದ–ೇಶಿಸುವಂತೆ ಒತ್ತಾಯಿಸಿದ್ದಾರೆ. ಠಾಕ್ರೆ ರಾಜೀನಾಮೆ ನೀಡದಿರುತ್ತಿದ್ದರೆ ಅವರ ನೇತೃತ್ವದ ಸರ್ಕಾರವನ್ನು ಮರು ಸ್ಥಾಪನೆಗೊಳಿಸಬಹುದಿತ್ತು. ಈ ಮೂಲಕ ಯಥಾಸ್ಥಿತಿಯನ್ನು ಕಾಪಾಡಿಕೊಳ್ಳಲು ಆದೇಶಿಸಬಹುದಿತ್ತು. ಆದರೆ, ಠಾಕ್ರೆ ವಿಶ್ವಾಸ ಮತ ಪರೀಕ್ಷೆಯನ್ನೂ ಎದು–ರಿಸದೆಯೇ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಹೀಗಾಗಿ ಠಾಕ್ರೆ ಸರ್ಕಾರ ಪುನಃಸ್ಥಾಪನೆ ಸಾಧ್ಯವಿಲ್ಲ ಎಂದು ಹೇಳಿತು.

ಜೊತೆಗೆ ಏಕನಾಥ ಶಿಂಧೆ ಬಣದ ವಿಪ್ ನೇಮಕವನ್ನು ಸ್ಪೀಕರ್ ಮಾಡಿರುವುದು ಕೂಡ ತಪ್ಪು. ವಿಪ್ ನೇಮಕದ ಅಧಿಕಾರ ರಾಜಕೀಯ ಪಕ್ಷದ್ದಾಗಿದೆ. ಪಕ್ಷದ ಆಂತರಿಕ ಕಲಹವನ್ನು ಇತ್ಯಥ–ರ್ಪಡಿಸಲು ವಿಶ್ವಾಸ ಮತ ಪರೀಕ್ಷೆಯನ್ನು ಬಳಸಬಾರದು. ಪಕ್ಷದೊಳಗಿನ ಭಿನ್ನಾಭಿಪ್ರಾಯ ಅಥವಾ ಪಕ್ಷ– ಪಕ್ಷಗಳ ನಡುವಿನ ಭಿನ್ನಾಭಿಪ್ರಾಯಗಳನ್ನು ಪರಿಹರಿಸುವ ಮಾಧ್ಯಮವಾಗಿ ವಿಶ್ವಾಸಮತ ಯಾಚಿಸುವಂತೆ ಸೂಚಿಸಲು ಬಳಸಲಾಗುವುದಿಲ್ಲ. ಸರ್ಕಾರವನ್ನು ಬೆಂಬಲಿಸದಿರುವುದಕ್ಕೂ ಮತ್ತು ಕೆಲವು ರಾಜಕೀಯ ಪಕ್ಷದ ಸದಸ್ಯರು ಅತೃಪ್ತರಾಗಿದ್ದಾರೆ ಎಂಬುದಕ್ಕೂ ವ್ಯತ್ಯಾಸ ಇದೆ. ಸಂವಿಧಾನ ಅಥವಾ ಕಾನೂನು ರಾಜ್ಯಪಾಲರಿಗೆ ರಾಜಕೀಯ ಕ್ಷೇತ್ರಕ್ಕೆ ಪ್ರವೇಶಿಸಲು ಮತ್ತು ಅಂತರ್ ಪಕ್ಷ ಅಥ–ವಾ ಪಕ್ಷದ ಆಂತರಿಕ ವಿವಾದಗಳಲ್ಲಿ ಪಾತ್ರ ವಹಿಸಲು ಅಧಿಕಾರ ನೀಡುವುದಿಲ್ಲ. ರಾಜ್ಯಪಾಲರು ರಾಜಕೀಯ ಕ್ಷೇತ್ರಕ್ಕೆ ಪ್ರವೇಶಿಸಿ ಪಕ್ಷಗಳ ನಡುವಿನ ವಿವಾದದಲ್ಲಿ ಪಾತ್ರ ವಹಿಸುವಂತಿಲ್ಲ. ಕೆಲ ಸದಸ್ಯರು ಶಿವಸೇನೆ ತೊರೆಯಲು ಬಯಸುತ್ತಾರೆ ಎಂಬುದನ್ನು ಆಧರಿಸಿ ಅವರು ಕಾರ್ಯನಿರ್ವಹಿಸಬಾರದಿತ್ತು. ಇದರಥ–ರ್ ಆ ಶಾಸಕರು ಸರ್ಕಾರಕ್ಕೆ ತಮ್ಮ ಬೆಂಬಲ ಹಿಂಪಡೆದಿದ್ದಾರೆ ಎಂದಲ್ಲ, ಈ ನಿಟ್ಟಿನಲ್ಲಿ ಮಹಾರಾಷ್ಟ್ರ ರಾಜ್ಯಪಾಲರ ವಿವೇಚನಾಧಿಕಾರವು ಸಂವಿಧಾನಿಕವಾಗಿಲ್ಲ ಎಂದು ತಿಳಿಸಿತು. ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಡಿ ವೈ ಚಂದ್ರಚೂಡ್, ನ್ಯಾಯಮೂರ್ತಿಗಳಾದ ಎಂ ಆರ್ ಶಾ, ಕೃಷ್ಣ ಮುರಾರಿ, ಹಿಮಾ ಕೊಹ್ಲಿ ಹಾಗೂ ಪಿ ಎಸ್ ನರಸಿಂಹ ಅವ–ರಿದ್ದ ಸಾಂವಿಧಾನಿಕ ಪೀಠವು ನಬಮ್ ರೆಬಿಯಾ ಪ್ರಕರಣಕ್ಕೆ ಸಂಬಂಧಿಸಿದಂತೆ 2016ರ ತೀರ್ಪಿನಲ್ಲಿ ನೀಡಲಾದ ಸ್ಪೀಕರ್ ಅಧಿಕಾರಕ್ಕೆ ಸಂಬಂಧಿಸಿದ ವಿಷಯವನ್ನು ವಿಸ್ತೃತ ಪೀಠದ ಪರಿಗಣನೆಗೆ ಶಿಫಾರಸ್ಸು ಮಾಡಿದೆ.

ನಬಮ್ ರೆಬಿಯಾ ತೀಪು ತನ್ನ ವಿರುದ್ಧ ಅನರ್ಹತೆಯ ನೋಟಿಸ್ ಬಾಕಿ ಉಳಿದಿರುವ ಸ್ಪೀಕರ್, ಶಾಸಕರ ವಿರುದ್ಧದ ಅನರ್ಹತೆ ಅರ್ಜಿಗಳ ಬಗ್ಗೆ ನಿರ್ಣಯ ಕೈಗೊಳ್ಳಬಹುದೇ ಎಂಬುದನ್ನು ನಿರ್ಧ–ರಿಸುವುದಿಲ್ಲ ಎಂಬುದಾಗಿ ನ್ಯಾಯಾಲಯ ಹೇಳಿದೆ. ಸ್ಪೀಕರ್ ಅವರನ್ನು ಪದಚ್ಯುತಿ ಮಾಡಲು ನೀಡಿದ ನೋಟಿಸ್ ಸದಸ್ಯರ ಅನರ್ಹತೆಯನ್ನು ನಿರ್ಧರಿಸುವುದನ್ನು ತಡೆಯುತ್ತದೆಯೇ?." ಎಂಬ ಪ್ರಶ್ನೆಗೆ ವಿಸ್ತೃತ ಪೀಠ ಉತ್ತರ ಕಂಡುಕೊಳ್ಳಬೇಕು ಎಂದು ಅದು ತಿಳಿಸಿದೆ.

ಬಹುಮುಖ್ಯವಾಗಿ, ಶಾಸಕಾಂಗ ಪಕ್ಷವು (ಅಂದರೆ ಸದನದಲ್ಲಿ ನಿರ್ದಿಷ್ಟ ರಾಜ–ಕೀಯ ಪಕ್ಷದ ಬಹುಪಾಲು ಶಾಸಕರು) ಪಕ್ಷದ ಮುಖ್ಯ ಸಚೇತಕರನ್ನು (ವಿಪ್) ನೇಮಿಸುವ ಅಧಿಕಾರ ಹೊಂದಿಲ್ಲ. ಅದು ಸಂಬಂಧಪಟ್ಟ ರಾಜಕೀಯ ಪಕ್ಷದ ಕೆಲಸ ಎಂದು ನ್ಯಾಯಾಲಯವು ಅಭಿಪ್ರಾಯಪಟ್ಟಿದೆ. ಶಾಸಕಾಂಗ ಪಕ್ಷವು ಮುಖ್ಯ ಸಚೇತಕರನ್ನು ನೇಮಿಸುವುದೆಂದರೆ ಅದು ತನ್ನ ರಾಜ–ಕೀಯ ಪಕ್ಷದೊಂದಿಗೆ ಹೊಂದಿರುವ ಕರುಳಬಳ್ಳಿಯನ್ನು ಕತ್ತರಿಸಿದಂತೆ ಎಂದು ಪೀಠವು ವಿವರಿಸಿದೆ.

ಹಾಗಾಗಿ, ಶಿವಸೇನೆಯ ಶಿಂಧೆ ಬಣದಿಂದ ಸದನದಲ್ಲಿ ಪಕ್ಷದ ವಿಪ್ ಆಗಿ ನೇಮಕಗೊಂಡಿದ್ದ ಭರತ್‌ಶೇಟ್ ಗೊಗವಾಳೆ ಅವರನ್ನು ನೇಮಕವನ್ನು ಕಾನೂನುಬಾಹಿರ ಎಂದು ತೀಪು ನೀಡಿದೆ.

## ಗಾಲಿ ಜನಾರ್ದನ ರೆಡ್ಡಿ ವಿರುದ್ಧ ಎಫ್‌ಐಆರ್ ದಾಖಲು



ಕೊಪ್ಪಳ: ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಸಂಸ್ಥಾಪಕ, ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ವಿರುದ್ಧ ಈಖಖ ದಾಖಲಿಸಲಾಗಿದೆ.

ರಾಜ್ಯ ವಿಧಾನಸಭೆಗೆ ಬುಧವಾರ ನಡೆದ ಚುನಾವಣೆಯ ಮತದಾನದ ವೇಳೆ ಜನಾರ್ದನ ರೆಡ್ಡಿಯವರು ಮತಗಟ್ಟೆ ಬಳಿ ಪ್ರಚಾರ ಮಾಡಿದ್ದಾರೆ ಎಂಬ ಕಾರಣ–ಕ್ಕ ಅವರ ವಿರುದ್ಧ ಗಂಗಾವತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

ಗಂಗಾವತಿ ಕ್ಷೇತ್ರದ ಲಕ್ಷ್ಮೀ ಕ್ಯಾಂಪ್ ನ ನಿಷೇಧಿತ ಪ್ರದೇಶದಲ್ಲಿ ಜನಾರ್ದನ ರೆಡ್ಡಿ ಅವರು ನೀತಿ ಸಂಹಿತೆ ಉಲ್ಲಂಘಿಸಿ ತಮ್ಮ ಪಕ್ಷದ ಪರ ಪ್ರಚಾರ ಕೈಗೊಂಡಿದ್ದಾರೆ ಎಂದು ಆರೋಪಿಸಿ ಕ್ಷೇತ್ರದ ಚುನಾವಣಾಧಿಕಾರಿ ಸನಿತ್ ಸಿ. ಅವರು ಜನಾರ್ದನ ರೆಡ್ಡಿ ಅವರ ವಿರುದ್ಧ ದೂರು ದಾಖಲಿಸಿದ್ದು ಈ ಸಂಬಂಧ ಒಂದು ವಾಹನವನ್ನು ಸಹ ಜಪ್ತಿ ಮಾಡಿದ್ದಾರೆ.

## ವಾಹನ ಅಪಘಾತ; ಇಬ್ಬರು ಸ್ಥಳದಲ್ಲೇ ಸಾವು

ಚಿಕ್ಕಮಗಳೂರು: ಕಾರು, ಟಿಟಿ ವಾಹನ ಮುಖಾಮುಖಿ ಡಿಕ್ಕಿಯಾಗಿ, ಕಾರಿನಲ್ಲಿದ್ದ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಕಡೂರು(ಏಚಿಜಣಡಿ) ತಾಲೂಕಿನ ಬೆಂಗಳೂರು ಶಿವಮೊಗ್ಗ ರಾಷ್ಟ್ರೀಯ ಹೆದ್ದಾರಿ 206 ರ ಮತಿಘಟ್ಟ ಕ್ರಾಸ್ ಬಳಿ ನಡೆದಿದೆ. ಕಾರಿನಲ್ಲಿದ್ದ ಗಿರಿಧರ್ (46) ಮಯಂಕ್(3) ಮೃತ ದುರ್ದೈವಿಗಳು. ಇನ್ನು ಹೊನ್ನಾವರದಿಂದ ಸಂಬಂಧಿಕರ ಮದುವೆ ನಿಮಿತ್ತ ಗಿರಿಧರ್ ಕುಟುಂಬ ತೆರಳುವಾಗ, ಆ ಕಡೆ ಕೇರಳದಿಂದ ಚಿಕ್ಕಮಗಳೂರಿಗೆ ಪ್ರವಾಸಕ್ಕೆ ಬರುತ್ತಿದ್ದ ಟಿ.ಟಿ ವಾಹನಕ್ಕೆ ಡಿಕ್ಕಿಯಾಗಿದ್ದು, ಅದರ ರಭಸಕ್ಕೆ ಟಿಟಿ ವಾಹನ ಪಲ್ಟಿಯಾಗಿದೆ.ಕಾರಿನಲ್ಲಿದ್ದ ಮಗು ಸೇರಿದಂತೆ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದು, ಟಿ.ಟಿ ವಾಹನದಲ್ಲಿದ್ದ ಕೇರಳ ಮೂಲದ 7 ಪ್ರವಾಸಿಗರಿಗೆ ಗಂಭೀರ ಗಾಯಗಳಾಗಿವೆ. ಕೂಡಲೇ ಅವರನ್ನ ಶಿವಮೊಗ್ಗ ಆಸ್ಪತ್ರೆಗೆ ರವಾನೆ ಮಾಡಲಾಗಿದ್ದು, ಜಿಲ್ಲೆಯ ಕಡೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089